ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೯೭

**ಪಟ್ಟಿ – ೦೩**

# ಕರ್ನಾಟಕ ವಿಧಾನ ಪರಿಷತ್ತು

**ನೂರ ನಲವತ್ತನೆಯ ಅಧಿವೇಶನ**

**ಬುಧವಾರ, ದಿನಾಂಕ : ೦೪ನೇ ಮಾರ್ಚ್, ೨೦೨೦**

---

## ಸಮೂಹ – III

೧. ಉಪ ಮುಖ್ಯಮಂತ್ರಿಗಳು.

೨. ಕಂದಾಯ ಸಚಿವರು.

೩. ವಸತಿ ಸಚಿವರು.

೪. ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು.

೫. ಕೃಷಿ ಸಚಿವರು.

# ಕೃಷಿ ಯಾಂತ್ರಿಕ ಉಪಕರಣಗಳನ್ನು ಬಾಡಿಗೆ ಆಧಾರದ ಮೇಲೆ ರೈತರಿಗೆ ಒದಗಿಸುವ ಬಗ್ಗೆ

ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–

೧೬೫ (೩೦೨) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ೨೦೧೯–೨೦ನೇ ಸಾಲಿನಲ್ಲಿ ಕೃಷಿ ಯಾಂತ್ರಿಕ ಉಪಕರಣಗಳನ್ನು ಬಾಡಿಗೆ ಆಧಾರದ ಮೇಲೆ ರೈತರಿಗೆ ಒದಗಿಸಲಾಗುತ್ತಿದೆಯೇ;

(ಆ) ಹಾಗಿದ್ದಲ್ಲಿ, ರೈತರಿಗೆ ಅನುಕೂಲವಾಗುವಂತೆ ಸದರಿ ಕೃಷಿ ಯಾಂತ್ರಿಕ ಉಪಕರಣಗಳ ಕೇಂದ್ರಗಳನ್ನು ಕೃಷಿ ಕೇಂದ್ರ ಹೋಬಳಿ, ಗ್ರಾಮ ಪಂಚಾಯಿತಿ ಸ್ಥಾನಗಳಲ್ಲಿ ತೆರೆಯಲಾಗಿದೆಯೇ;

(ಇ) ಈ ಕೃಷಿ ಯಾಂತ್ರಿಕ ಉಪಕರಣ ಕೇಂದ್ರಗಳಲ್ಲಿ ರೈತರಿಗೆ ಯಾವ ಯಾವ ಯಾಂತ್ರಿಕ ಸಲಕರಣೆಗಳನ್ನು ಒದಗಿಸಲಾಗಿದೆ; (ಮಾಹಿತಿ ನೀಡುವುದು)

(ಈ) ಇತ್ತೀಚಿನ ಆಧುನಿಕ ಕೃಷಿ ಯಾಂತ್ರಿಕ ಉಪಕರಣಗಳನ್ನು ರಿಯಾಯಿತಿ ದರದಲ್ಲಿ ರೈತರಿಗೆ ಒದಗಿಸಿ ಕೂಡಲು ಸರ್ಕಾರ ಕ್ರಮ ಕೈಗೊಳ್ಳವುದೇ; (ಸ್ಪಷ್ಟ ಉತ್ತರ ನೀಡುವುದು)

(ಉ) ಹಾಗೆಯೇ ಮಂಡ್ಯ ಜಿಲ್ಲೆಯಲ್ಲಿ ಯಾವ ಯಾವ ಸ್ಥಳದಲ್ಲಿ ಕೃಷಿ ಯಾಂತ್ರಿಕ ಉಪಕರಣಗಳ ಕೇಂದ್ರಗಳನ್ನು ತೆರೆಯಲಾಗಿದೆ ? (ತಾಲ್ಲೂಕುವಾರು ಮಾಹಿತಿ ನೀಡುವುದು)

# ಕರ್ನಾಟಕ ಭೂಸುಧಾರಣಾ ಕಾಯಿದೆಯಡಿ ವಿಧಿ ೭೯ಎ ಮತ್ತು ೭೯ಬಿ ಅನ್ವಯದ ಬಗ್ಗೆ

ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

೧೬೬ (೩೦೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕರ್ನಾಟಕ ಭೂಸುಧಾರಣಾ ಕಾಯಿದೆಯಡಿ ವಿಧಿ ೭೯ಎ ಮತ್ತು ೭೯ಬಿ ಯಾವುದೇ ವ್ಯಕ್ತಿ ೧-೩-೧೯೭೪ರ ನಂತರ ಖರೀದಿಸಿದ ಜಮೀನುಗಳಿಗೆ ಅನ್ವಯಿಸುವ ಅಂಶ ಸರ್ಕಾರದ ಗಮನದಲ್ಲಿದೆಯೇ;

(ಆ) ಜಿಲ್ಲಾಧಿಕಾರಿಗಳ ಕರ್ನಾಟಕ ಭೂ ಕಂದಾಯ ೧೯೬೪ರ ನಿಯಮ ೯೫(೨)ರಡಿಯಲ್ಲಿ ಒಬ್ಬ ವ್ಯಕ್ತಿಯು ಭೂ ಪರಿವರ್ತನೆ ಮಾಡಿಕೊಳ್ಳಲು ಅರ್ಜಿ ಸಲ್ಲಿಸುವಾಗ ಪ್ರಶ್ನಿತ ಜಮೀನು ಖರೀದಿಸಿದ ಜಮೀನಲ್ಲದೆ ಪಿತ್ರಾರ್ಜಿತ ಅಥವಾ ಸ್ವಂತ ಜಮೀನಾಗಿದ್ದರೂ ಸಹ ಸದರಿ ಜಮೀನಿನ ಬಗ್ಗೆ ಉಪ ವಿಭಾಗಾಧಿಕಾರಿಗಳಿಂದ ೭೯ಎ ಮತ್ತು ೭೯ಬಿ ಹಿಂಬರಹ ಪಡೆದು ಲಗತ್ತಿಸಲು ನಿರ್ಬಂಧ ವಿಧಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಬಂದಿದ್ದಲ್ಲಿ, ಈ ನಿಬಂಧನೆಯಿಂದ ವಿನಾಯಿತಿ ನೀಡಲು ಎಲ್ಲಾ ಜಿಲ್ಲಾಧಿಕಾರಿಗಳಿಗೆ ನಿರ್ದೇಶನವನ್ನು ನೀಡಲಾಗುವುದೇ ? (ಸ್ಪಷ್ಟ ಉತ್ತರ ನೀಡುವುದು)

# ಉತ್ತರ ಕರ್ನಾಟಕದ ಜಿಲ್ಲೆಗಳಲ್ಲಿ ಉಂಟಾದ ಜಲ ಪ್ರಳಯದ ಬಗ್ಗೆ

ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

೧೬೭ (೩೦೪) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಇತ್ತೀಚೆಗೆ ಉತ್ತರ ಕರ್ನಾಟಕ ಜಿಲ್ಲೆಗಳಲ್ಲಿ ಉಂಟಾದ ಜಲ ಪ್ರಳಯದಲ್ಲಿ ಒಟ್ಟು ಎಷ್ಟು ಮನೆಗಳು ಪೂರ್ಣ ಪ್ರಮಾಣದಲ್ಲಿ ನಾಶ ಹೊಂದಿರುತ್ತದೆ; (ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಪೂರ್ಣ ಪ್ರಮಾಣದಲ್ಲಿ ಮನೆ ಕಳೆದುಕೊಂಡವರಿಗೆ ನೀಡಿದ ಪರಿಹಾರದ ಮೊತ್ತವೆಷ್ಟು;

(ಇ) ಪರಿಹಾರ ನೀಡಲು ಬಾಕಿ ಇರುವವರ ಸಂಖ್ಯೆ ಎಷ್ಟು; ಎಷ್ಟು ಜನರಿಗೆ ಪರಿಹಾರ ನೀಡಲಾಗಿದೆ; (ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ನೀಡುವುದು)

(ಈ) ಎಷ್ಟು ಮನೆಗಳು ಭಾಗಶಃ ನಾಶವಾಗಿವೆ; ಈ ಪೈಕಿ ಎಷ್ಟು ಜನರಿಗೆ ಪರಿಹಾರ ನೀಡಲಾಗುವುದು ಭಾಗಶಃ ಮನೆ ಕಳೆದುಕೊಂಡವರಿಗೆ ನೀಡಿದ ಪರಿಹಾರದ ಮೊತ್ತವೆಷ್ಟು;

(ಉ) ಭೂಕುಸಿತದಿಂದ ಎಷ್ಟು ಎಕರೆ ರೈತರ ಭೂಮಿ ನಾಶವಾಗಿದೆ, ಭೂಮಿ ಕಳೆದುಕೊಂಡ ರೈತರಿಗೆ ನೀಡಿದ ಪರಿಹಾರದ ಮೊತ್ತವೆಷ್ಟು; ಬದಲಿ ಭೂಮಿ ನೀಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಊ) ಈ ಜಲ ಪ್ರಳಯಕ್ಕೆ ದಾನಿಗಳಿಂದ ಮತ್ತು ಸಂಘ ಸಂಸ್ಥೆಗಳಿಂದ ಬಂದ ದೇಣಿಗೆ ಎಷ್ಟು; ಇದನ್ನು ಯಾವ ಯಾವ ಉದ್ದೇಶಕ್ಕೆ

ಬಳಸಿಕೊಳ್ಳಲಾಗಿದೆ; ಜಲ ಪ್ರಳಯದಿಂದ ರಸ್ತೆ, ಸೇತುವೆ, ಸಾರ್ವಜನಿಕ ಕಟ್ಟಡಗಳಿಗೆ ಆಗಿರುವ ಒಟ್ಟು ನಷ್ಟದ ಮೊತ್ತವೆಷ್ಟು;

(ಎ) ಜಲ ಪ್ರಳಯದಲ್ಲಿ ಕೃಷಿ ಭೂಮಿ ಕಳೆದುಕೊಂಡವರಿಗೆ ಬದಲಿ ಭೂಮಿಯನ್ನು ಯಾವ ಯಾವ ಗ್ರಾಮದಲ್ಲಿ ನೀಡಲಾಗುವುದು; ಈ ಬಗ್ಗೆ ಭೂಮಿಯನ್ನು ಸರ್ವೇ ಮೂಲಕ ಗುರುತಿಸಲಾಗಿದೆಯೇ? (ಜಿಲ್ಲಾವಾರು ತಾಲ್ಲೂಕುವಾರು ಮಾಹಿತಿ ನೀಡುವುದು)

## ಫಾಸ್ಟ್‌ಟ್ಯಾಗ್ (FastTag) ಗೆ ಸಂಬಂಧಿಸಿದಂತೆ ಮಾಹಿತಿ ಬಗ್ಗೆ

ಶ್ರೀ ಕೆ. ಅಬ್ದುಲ್ ಜಬ್ಬಾರ್ (ನಾಮನಿರ್ದೇಶನ ಹೊಂದಿದವರು) :–

೧೬೮ (೨೭೪) ಮಾನ್ಯ ಉಪ ಮುಖ್ಯಮಂತ್ರಿಗಳು (ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು) ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಷ್ಟ್ರೀಯ ಹೆದ್ದಾರಿ ಸುಂಕ ಪಾವತಿ ಕೇಂದ್ರ (Toll Plaza) ಗಳಲ್ಲಿ ಮತ್ತು ಇತರೆಡೆಗಳಲ್ಲಿ ಜನಪ್ರತಿನಿಧಿಗಳ ಮತ್ತು ಗಣ್ಯವ್ಯಕ್ತಿಗಳ ಸುಗಮ ಸಂಚಾರಕ್ಕೆ ರಾಜ್ಯ ಸರ್ಕಾರದಿಂದ ಗಣ್ಯವ್ಯಕ್ತಿಗಳಿಗೆ ಕಾರ್‌ಪಾಸ್ ನೀಡಲಾಗಿದ್ದರೂ ಸಹ ಪ್ರತ್ಯೇಕವಾಗಿ ಫಾಸ್ಟ್‌ಟ್ಯಾಗ್ ಅಳವಡಿಸಿಕೊಳ್ಳುವ ಅವಶ್ಯಕತೆ ಇದೆಯೇ;

(ಆ) ಜನಪ್ರತಿನಿಧಿಗಳು/ಗಣ್ಯವ್ಯಕ್ತಿಗಳು ಗರಿಷ್ಠ ಎಷ್ಟು ವಾಹನಗಳಿಗೆ ಫಾಸ್ಟ್‌ಟ್ಯಾಗ್ / ಹೆದ್ದಾರಿ ಸುಂಕ ವಿನಾಯಿತಿ ಪಾಸ್ ಪಡೆದುಕೊಳ್ಳಬಹುದು;

(ಇ) ವಿನಾಯಿತಿ ಫಾಸ್ಟ್‌ಟ್ಯಾಗ್ ಅನ್ನು ಇದುವರೆಗೂ ನೀಡದಿರುವುದಕ್ಕೆ ಕಾರಣವೇನು ?

## ಮುಜರಾಯಿ ದೇವಾಲಯದ ಆಸ್ತಿ ಒತ್ತುವರಿ

ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :–

೧೬೯ (೨೨೬) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಮುಜರಾಯಿ ದೇವಾಲಯಗಳು ಹಾಗೂ ಇವುಗಳ ಸ್ತಿರಾಸ್ತಿ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ಈ ದೇವಾಲಯುಗಳಿಗೆ ಸಂಬಂಧಿಸಿದ ಜಮೀನುಗಳು ಒತ್ತುವರಿಯಾಗಿರುವ ಪ್ರಕರಣಗಳೆಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಇ) ಈ ಒತ್ತುವರಿಯಾಗಿರುವ ಜಮೀನುಗಳನ್ನು ತೆರವುಗೊಳಿಸಲು ಸರ್ಕಾರದ ಕ್ರಮಗಳೇನು? (ಮಾಹಿತಿ ನೀಡುವುದು)

## ವಸತಿ ಯೋಜನೆಗಳ ಅನುಷ್ಠಾನ ಕುರಿತು

ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :–

೧೭೦ (೨೨೭) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷಗಳಿಂದ ರಾಜೀವ್ ಗಾಂಧಿ ವಸತಿ ನಿಗಮ ಮತ್ತು ಬಸವ ವಸತಿ ಯೋಜನೆಯಡಿ ಆಯ್ಕೆಯಾಗಿರುವ ಫಲಾನುಭವಿಗಳ ಜಿಲ್ಲಾವಾರು ವಿವರ ನೀಡುವುದು;

(ಆ) ಆಯ್ಕೆಯಾಗಿರುವ ಫಲಾನುಭವಿಗಳಿಗೆ ಎಷ್ಟು ಆಶ್ರಯ ಮನೆಗಳನ್ನು ನೀಡಲಾಗಿದೆ ಮತ್ತು ಆಯ್ಕೆಯಾಗಿದ್ದರೂ ಯಾವ ಕಾರಣಕ್ಕಾಗಿ ಫಲಾನುಭವಿಗಳಿಗೆ ಆಶ್ರಯ ಮನೆಗಳನ್ನು ಇದುವರೆವಿಗೂ ವಿತರಿಸಿರುವುದಿಲ್ಲ;

(ಇ) ವಿತರಿಸದೇ ಇರುವ ಫಲಾನುಭವಿಗಳಿಗೆ ಎಷ್ಟು ಕಾಲಾವಧಿಯಲ್ಲಿ ಆಶ್ರಯ ಮನೆಗಳನ್ನು ವಿತರಿಸಲಾಗುವುದು?

## ಹೊಸ ತಾಲ್ಲೂಕುಗಳ ಅಭಿವೃದ್ಧಿ ಕುರಿತು

ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :-

೧೭೧ (೨೨೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ೨೦೧೯-೨೦ನೇ ಸಾಲಿನಲ್ಲಿ ಹೊಸದಾಗಿ ೧೨ ತಾಲ್ಲೂಕುಗಳನ್ನು ರಚಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ತಾಲ್ಲೂಕು ಕಚೇರಿಗಳನ್ನು ಹಾಗೂ ಎಲ್ಲಾ ಇಲಾಖೆಗಳ ತಾಲ್ಲೂಕು ಮಟ್ಟದ ಕಚೇರಿಗಳನ್ನು ತೆರೆಯಲಾಗಿದೆಯೇ; (ವಿವರ ನೀಡುವುದು)

(ಇ) ಇಲ್ಲದಿದ್ದಲ್ಲಿ, ತೆರೆಯಲು ಯಾವ ಕ್ರಮ ಕೈಗೊಳ್ಳಲಾಗಿದೆ ಹಾಗೂ ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು;

(ಈ) ತಾಲ್ಲೂಕಿಗೆ ಒಳಪಡುವ ಹೋಬಳಿ ಕೇಂದ್ರಗಳು ಹಾಗೂ ಗ್ರಾಮಗಳನ್ನು ಗುರುತಿಸಲಾಗಿದೆಯೇ?

## ಲೋಕೋಪಯೋಗಿ ರಸ್ತೆಗಳ ದುರಸ್ಥಿ ಕುರಿತು

ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :-

೧೭೨ (೨೩೦) ಮಾನ್ಯ ಉಪ ಮುಖ್ಯಮಂತ್ರಿಗಳು, (ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು) ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಚಿಕ್ಕಮಗಳೂರು ಹಾಗೂ ಕೊಡಗು ಜಿಲ್ಲೆಗಳಲ್ಲಿ ಪ್ರಕೃತಿ ವಿಕೋಪದಿಂದ ಬಹುತೇಕ ರಸ್ತೆಗಳು ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಸದರಿ ರಸ್ತೆಗಳ ದುರಸ್ಥಿಗೆ ಸರ್ಕಾರ ಅಂದಾಜಿಸಿರುವ ಮೊತ್ತವೆಷ್ಟು; (ವಿವರ ನೀಡುವುದು)

(ಇ) ೨೦೧೯-೨೦ನೇ ಸಾಲಿನಲ್ಲಿ ಕೈಗೊಂಡಿರುವ ಕಾಮಗಾರಿಗಳು ಯಾವುವು; (ವಿವರ ನೀಡುವುದು)

(ಈ) ಪೂರ್ಣಗೊಂಡಿರುವ ಕಾಮಗಾರಿಗಳು ಹಾಗೂ ಬಾಕಿ ಉಳಿದಿರುವ ಕಾಮಗಾರಿಗಳು ಎಷ್ಟು; (ವಿವರ ನೀಡುವುದು)

(ಉ) ಯಾವ ಕಾಲಮಿತಿಯೊಳಗೆ ಕಾಮಗಾರಿಗಳನ್ನು ಪೂರ್ಣಗೊಳಿಸಲಾಗುವುದು?

## ರಾಯಚೂರು ಜಿಲ್ಲೆಯಲ್ಲಿ ನೆರೆ ಹಾವಳಿಯಿಂದ ಹಾನಿಗೊಳಗಾಗಿರುವ ಲೋಕೋಪಯೋಗಿ ರಸ್ತೆಗಳ ಬಗ್ಗೆ

ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನ ಸಭೆಯಿಂದ ಚುನಾಯಿತರಾದವರು):-

೧೭೩ (೨೬೭) ಮಾನ್ಯ ಉಪ ಮುಖ್ಯಮಂತ್ರಿಗಳು (ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು) ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಯಚೂರು ನಗರದ ಹೊರವಲಯದಲ್ಲಿ ರಿಂಗ್ ರಸ್ತೆ ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಆ) ರಾಯಚೂರು–ಬಾಚಿರಸ್ತೆ ರಾಜ್ಯ ಹೆದ್ದಾರಿ–೨೦ ಹಾಗೂ ಕಲ್ಮಲಾ ಕ್ರಾಸ್‌ನಿಂದ ಬುಂದಿಗುಂಪಾ ಕ್ರಾಸ್‌ವರೆಗೂ ರಾಜ್ಯ ಹೆದ್ದಾರಿ–೨೩ ಇವುಗಳನ್ನು ರಾಷ್ಟ್ರೀಯ ಹೆದ್ದಾರಿಗಳಾಗಿ ಪರಿವರ್ತಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಇ) ನೆರೆ ಹಾವಳಿಯಿಂದ ರಾಯಚೂರು ಜಿಲ್ಲೆಯಲ್ಲಿ ಲೋಕೋಪಯೋಗಿ ಇಲಾಖೆಯ ಪ್ರಮುಖ ರಸ್ತೆಗಳು ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಸದರಿ ರಸ್ತೆಗಳನ್ನು ಅಭಿವೃದ್ಧಿ ಮಾಡಲು ರಾಯಚೂರು ವಿಭಾಗಕ್ಕೆ ಮಂಜೂರಾತಿ ಆಗಿರುವ ಅನುದಾನ ಎಷ್ಟು?

## ರಾಯಚೂರು ಜಿಲ್ಲೆಯಲ್ಲಿರುವ ವಸತಿ ಶಾಲೆಗಳ ಬಗ್ಗೆ

ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನ ಸಭೆಯಿಂದ ಚುನಾಯಿತರಾದವರು):–

೧೭೪ (೨೬೮) ಮಾನ್ಯ ಉಪ ಮುಖ್ಯಮಂತ್ರಿಗಳು (ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು) ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ಜಿಲ್ಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯಿಂದ ನಡೆಸುತ್ತಿರುವ ವಸತಿ ಶಾಲೆಗಳು ಎಷ್ಟು; ಇದರಲ್ಲಿ, ಸ್ವಂತ ಕಟ್ಟಡಗಳು ಇರುವ ವಸತಿ ಶಾಲೆಗಳು ಎಷ್ಟು; ಬಾಡಿಗೆ ಇರುವ ವಸತಿ ಶಾಲೆಗಳು ಎಷ್ಟು;

(ಆ) ರಾಯಚೂರು ನಗರದಲ್ಲಿ ಡಾ: ಬಾಬು ಜಗಜೀವನ್‌ರಾಂ ಭವನ ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; ಸದರಿ ಭವನಕ್ಕೆ ಮಂಜೂರಾಗಿರುವ ಅನುದಾನ ಎಷ್ಟು;

(ಇ) ರಾಯಚೂರು ನಗರದಲ್ಲಿ ಡಾ: ಬಿ.ಆರ್. ಅಂಬೇಡ್ಕರ್ ಭವನ ನಿರ್ಮಾಣಕ್ಕೆ ಹಂಚಿಕೆ ಮಾಡಿರುವ ನಿವೇಶನ ಎಷ್ಟು; ಸದರಿ ಭವನ ನಿರ್ಮಾಣಕ್ಕೆ ಮಂಜೂರಾತಿಯಾಗಿರುವ ಅನುದಾನ ಎಷ್ಟು?

## ರಾಯಚೂರು ಜಿಲ್ಲೆಯಲ್ಲಿರುವ ನೂತನ ತಾಲ್ಲೂಕು, ಜಿಲ್ಲಾಡಳಿತ ಭವನದ ಬಗ್ಗೆ

ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನ ಸಭೆಯಿಂದ ಚುನಾಯಿತರಾದವರು):–

೧೭೫ (೨೭೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ನಗರದಲ್ಲಿ ನಿರ್ಮಾಣದ ಹಂತದಲ್ಲಿರುವ ಜಿಲ್ಲಾಡಳಿತ ಭವನಕ್ಕೆ ಮಂಜೂರಾಗಿರುವ ಅನುದಾನ ಎಷ್ಟು; ಇಲ್ಲಿಯವರೆಗೂ ಖರ್ಚು ಮಾಡಿರುವ ಅನುದಾನ ಎಷ್ಟು; ಕಾಮಗಾರಿ ಪೂರ್ಣಗೊಳಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಆ) ರಾಯಚೂರು ಜಿಲ್ಲೆಯಲ್ಲಿರುವ ನೂತನ ತಾಲ್ಲೂಕು ಸಿರವಾರ, ಮಸ್ಕಿ ತಾಲ್ಲೂಕುಗಳನ್ನು ಅಭಿವೃದ್ಧಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಇ) ರಾಯಚೂರು ಜಿಲ್ಲೆಯಲ್ಲಿರುವ ತಾಂಡಾ, ಗೊಲ್ಲರಹಟ್ಟಿ ಕ್ಯಾಂಪ್‌ಗಳನ್ನು ಕಂದಾಯ ಗ್ರಾಮಗಳಾಗಿ ಪರಿವರ್ತಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; ಇಲ್ಲಿಯವರೆಗೂ ಎಷ್ಟು ಕಂದಾಯ ಗ್ರಾಮಗಳನ್ನಾಗಿ ಪರಿವರ್ತಿಸಲಾಗಿದೆ?

## ರಾಯಚೂರು ಜಿಲ್ಲೆಯಲ್ಲಿ ಕೃಷಿ ಹೊಂಡಗಳನ್ನು ನಿರ್ಮಾಣ ಮಾಡುವ ಯೋಜನೆ ಮುಂದುವರೆಸುವ ಬಗ್ಗೆ

ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನ ಸಭೆಯಿಂದ ಚುನಾಯಿತರಾದವರು):-

೧೭೬ (೨೭೧) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಯಚೂರು ಜಿಲ್ಲೆಯಲ್ಲಿ ಇಲ್ಲಿಯವರೆಗೂ ನಿರ್ಮಾಣ ಮಾಡಿರುವ ಕೃಷಿ ಹೊಂಡಗಳ ಸಂಖ್ಯೆ ಎಷ್ಟು; ಸದರಿ ಕೃಷಿ ಹೊಂಡಗಳ ನಿರ್ಮಾಣಕ್ಕೆ ಮಂಜೂರಾಗಿರುವ ಅನುದಾನ ಎಷ್ಟು; ಈ ಯೋಜನೆಯಿಂದ ಸದುಪಯೋಗ ಪಡಿಸಿಕೊಂಡಿರುವ ಫಲಾನುಭವಿಗಳು ಎಷ್ಟು;

(ಆ) ೨೦೧೯-೨೦ನೇ ಸಾಲಿನಲ್ಲಿ ಈ ಯೋಜನೆ ಮುಂದುವರೆಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಇ) ರಾಯಚೂರು ವಿಶ್ವ ವಿದ್ಯಾಲಯದಲ್ಲಿ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು?

# ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳಲ್ಲಿನ ಜಾತಿಗಳ ವಿವರ

ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–

೧೭೭ (೨೨೩) ಮಾನ್ಯ ಉಪ ಮುಖ್ಯಮಂತ್ರಿಗಳು (ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು) ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳಲ್ಲಿ ಎಷ್ಟು ಜಾತಿಗಳು ಬರುತ್ತವೆ; ಅವು ಯಾವುವು;

(ಆ) ಸಂವಿಧಾನ ಜಾರಿಗೆ ಬಂದಾಗ ಮೂಲಭೂತವಾಗಿ ಯಾವ ಯಾವ ಜಾತಿಗಳನ್ನು ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳಿಗೆ ಸೇರಿಸಲಾಗಿತ್ತು; ನಂತರ ಹೊಸದಾಗಿ ಯಾವ ಯಾವ ಜಾತಿಗಳನ್ನು ಸೇರಿಸಲಾಯಿತು;

(ಇ) ಅನುಸೂಚಿತ ಜಾತಿಗಳಲ್ಲಿ ಅಸ್ಪೃಶ್ಯರಲ್ಲದ ಜಾತಿಗಳಾವುವು?

# ಸದಾಶಿವ ಆಯೋಗದ ವರದಿಯನ್ನು ಜಾರಿಗೊಳಿಸುವ ಬಗ್ಗೆ

ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–

೧೭೮ (೨೨೪) ಮಾನ್ಯ ಉಪ ಮುಖ್ಯಮಂತ್ರಿಗಳು (ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು) ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ನ್ಯಾಯಮೂರ್ತಿ ಸದಾಶಿವ ಆಯೋಗದ ವರದಿಯನ್ನು ಸರ್ಕಾರ ಯಾವಾಗ ಜಾರಿಗೊಳಿಸಲು ಉದ್ದೇಶಿಸಿದೆ;

(ಆ) ಈ ಬಗ್ಗೆ ಸರ್ಕಾರದ ಸ್ಪಷ್ಟ ನಿಲುವೇನು; ವಿಳಂಬಗೊಳ್ಳುತ್ತಿರುವುದಕ್ಕೆ ಕಾರಣವೇನು;

(ಇ) ಈ ವರದಿಯನ್ನು ಜಾರಿಗೊಳಿಸಲು ಸರ್ಕಾರ ಶೀಘ್ರ ಕ್ರಮ ಕೈಗೊಳ್ಳುತ್ತದೆಯೇ ?

## ಕಂದಾಯ ಇಲಾಖೆಯಲ್ಲಿ ಸರ್ಕಾರದ ಸೌಲಭ್ಯ ನಿರಾಕರಿಸಿರುವ ಬಗ್ಗೆ

ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–

೧೭೯ (೨೨೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಷ್ಟ್ರೀಯ ಹೆದ್ದಾರಿ ಮುಂತಾದ ಸಾರ್ವಜನಿಕ ಉದ್ದೇಶಗಳಿಗಾಗಿ ಭೂಸ್ವಾಧೀನಪಡಿಸಿಕೊಂಡ ಭೂಮಾಲೀಕರಿಗೆ ನೀಡುವ ಪರಿಹಾರ ಧನದಿಂದ ಅವರು ಬೇರೆ ಜಮೀನು/ನಿವೇಶನ ಖರೀದಿಸಿದರೆ ಮುದ್ರಾಂಕ ಶುಲ್ಕ ಮತ್ತು ನೋಂದಣಿ ಶುಲ್ಕ ವಿನಾಯಿತಿ ಪಡೆಯಲು ಸರ್ಕಾರ ಅಧಿಸೂಚನೆ ಹೊರಡಿಸಿರುವುದು ನಿಜವೇ;

(ಆ) ಪರಿಹಾರ ಧನದ ಹಣದಿಂದ ಬೇರೆ ನಿವೇಶನ ಕೊಂಡು ಮುದ್ರಾಂಕ ಶುಲ್ಕವನ್ನು ಕಟ್ಟಿದ್ದು ದಿನಾಂಕ ೧೦–೦೨–೨೦೧೬ರ ಅಧಿಸೂಚನೆಯಂತೆ ವಿನಾಯಿತಿ ಇರುವುದರಿಂದ ಅದನ್ನು ಮರುಪಾವತಿ ಮಾಡಬೇಕೆಂದು ಅರ್ಜಿ ಸಲ್ಲಿಸಿದರೆ ಅದನ್ನು ನೀಡದೆ ನಿರಾಕರಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಸರ್ಕಾರದ ಸೌಲಭ್ಯವನ್ನು ಫಲಾನುಭವಿಗಳಿಗೆ ನೀಡದೆ ನಿರಾಕರಿಸುತ್ತಿರುವ ಅಧಿಕಾರಿಗಳ ಮೇಲೆ ಕ್ರಮ ಕೈಗೊಂಡು ಈ ಜನರಿಗೆ ನ್ಯಾಯ ದೊರಕಿಸಿಕೊಡಲು ಸರ್ಕಾರ ಕ್ರಮ ಕೈಗೊಳ್ಳುತ್ತದೆಯೇ ?

## ಬಂದಿರುವ ಅನುದಾನದಲ್ಲಿ ಅವ್ಯವಹಾರ ಕುರಿತು

ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

೧೮೦ (೨೧೮) ಮಾನ್ಯ ಉಪ ಮುಖ್ಯಮಂತ್ರಿಗಳು (ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು) ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಾರವಾರ ಜಿಲ್ಲೆಯ ಜೋಯಿಡಾ ತಾಲ್ಲೂಕಿನ ಪಣಸೂಲಿಯಿಂದ ಬೈಲ್‌ಪಾರ್ ವರೆಗಿನ ರಾಮ-ಲಕ್ಷ್ಮಣ ಗೌಳಿವಾಡಾ ರಸ್ತೆ ನಿರ್ಮಾಣವಾಗಿ ೩ ತಿಂಗಳಲ್ಲೇ ಹದಗೆಟ್ಟಿದ್ದು ಸದರಿ ರಸ್ತೆ ನಿರ್ಮಾಣದಲ್ಲಿ ಕೋಟ್ಯಾಂತರ ರೂಪಾಯಿ ಅವ್ಯವಹಾರ ಆಗಿದ್ದು, ಇದು ಸರ್ಕಾರದ ಗಮನಕ್ಕೆ ಬಂದಿರುತ್ತದೆಂಯೇ ; (ವಿವರ ನೀಡುವುದು)

(ಆ) ಸದರಿ ರಸ್ತೆ ನಿರ್ಮಾಣಕ್ಕೆ ಮಂಜೂರಾಗಿರುವ ಅನುದಾನವೆಷ್ಟು; ಸದರಿ ರಸ್ತೆ ನಿರ್ಮಾಣ ಮಾಡಿರುವ ಗುತ್ತಿಗೆದಾರರ ವಿವರ, ಹಾಗೂ ಇದಕ್ಕೆ ಸಂಬಂಧಿಸಿದ ಅಧಿಕಾರಿ ವರ್ಗದವರ ವಿವರ ನೀಡುವುದು;

(ಇ) ಈ ರೀತಿ ಸರ್ಕಾರದ ಕೋಟ್ಯಾಂತರ ರೂಪಾಯಿ ಅವ್ಯವಹಾರ ಆಗಿರುವುದಕ್ಕೆ ಸಂಬಂಧಿಸಿದವರ ವಿರುದ್ಧ ಸರ್ಕಾರ ಕೂಡಲೇ ಶಿಸ್ತಿನ ಕ್ರಮಕೈಗೊಳ್ಳುವುದೇ; ಇಲ್ಲವೇ ಉನ್ನತ ತಂಡದಿಂದ ತನಿಖೆ ಮಾಡಿಸಿ ಕ್ರಮ ಕೈಗೊಳ್ಳುವುದೇ; (ಸವಿಸ್ತಾರ ವರದಿ ನೀಡುವುದು)

(ಈ) ಸರ್ಕಾರ ಈ ವಿಷಯವನ್ನು ಗಂಭೀರವಾಗಿ ಪರಿಗಣಿಸುವುದೇ ? (ವಿವರ ನೀಡುವುದು)

## ಖಾಲಿ ಹುದ್ದೆ ಹಾಗೂ ಮಂಜೂರಾದ ಹುದ್ದೆಗಳು

ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–

೧೮೧ (೨೧೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಾರವಾರ ಜಿಲ್ಲೆಯಲ್ಲಿ ಕಂದಾಯ ಇಲಾಖೆಗೆ ಮಂಜೂರಾತಿಯಾದ ಒಟ್ಟು ಹುದ್ದೆಗಳ ಸಂಖ್ಯೆ ಎಷ್ಟು; (ಅಧಿಕಾರಿ/ನೌಕರರ ಸಂಖ್ಯೆ ಎಷ್ಟು/ವೃಂದವಾರು/ತಾಲ್ಲೂಕುವಾರು/ಹೋಬಳಿವಾರು ಪ್ರತ್ಯೇಕ ಮಾಹಿತಿ ನೀಡುವುದು)

(ಆ) ಈ ಮಂಜೂರಾತಿ ಹುದ್ದೆಗಳಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; ಈ ಹುದ್ದೆಗಳು ಎಷ್ಟು ವರ್ಷದಿಂದ ಖಾಲಿಯಿವೆ;

(ಇ) ನೌಕರಿಲ್ಲದೆ ಸಾರ್ವಜನಿಕರ ಕೆಲಸ ಕಾರ್ಯಗಳು ವಿಪರೀತವಾಗಿ ವಿಳಂಭವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಜಿಲ್ಲೆಯಲ್ಲಿ ಖಾಲಿ ಇರುವ ಹುದ್ದೆಗಳನ್ನು ತುಂಬಲು ಸರ್ಕಾರ ಇಲ್ಲಿಂಯು ತನಕ ತೆಗೆದುಕೊಂಡಿರುವ ಕ್ರಮುಗಳೇನು ? (ವಿವರ ನೀಡುವುದು)

## ಗೃಹ ಮಂಡಳಿಯಿಂದ ಮನೆ ಹಂಚಿಕೆ

ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–

೧೮೨ (೨೧೬) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ಗೃಹ ಮಂಡಳಿಯ ಮನೆ/ನಿವೇಶನ ಹಂಚಿಕೆಗೆ ಇರುವ ಮಾನದಂಡಗಳೇನು;

(ಆ) ಗೃಹ ಮಂಡಳಿಯಿಂದ ಕಾರವಾರ ಜಿಲ್ಲೆಯಲ್ಲಿ ಯಾವ ಯಾವ ತಾಲ್ಲೂಕಿನಲ್ಲಿ ಮನೆ ಹಂಚಿಕೆ ಪ್ರಕ್ರಿಯೆ ಪ್ರಾರಂಭದಲ್ಲಿದೆ; (ವಿವರವಾದ ಮಾಹಿತಿ ನೀಡುವುದು)

(ಇ) ಕಾರವಾರ ಜಿಲ್ಲೆಯಲ್ಲಿ ಮನೆ ಹಂಚಿಕೆಗಾಗಿ ಗೃಹ ಮಂಡಳಿಗೆ ಸಾರ್ವಜನಿಕರು ಪಾವತಿಸಿದ ಹಣ ಎಷ್ಟು? (ತಾಲ್ಲೂಕುವಾರು ಮಾಹಿತಿ ನೀಡುವುದು)

## ಗಂಗಾ ಕಲ್ಯಾಣ ಯೋಜನೆ ಬಗ್ಗೆ

ಶ್ರೀ ಎಂ. ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–

೧೮೩ (೨೬೩) ಮಾನ್ಯ ಉಪ ಮುಖ್ಯಮಂತ್ರಿಗಳು (ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು) ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಾಸನ ಜಿಲ್ಲೆಯಲ್ಲಿ ಕಳೆದ ೩ ವರ್ಷಗಳಲ್ಲಿ ಗಂಗಾ ಕಲ್ಯಾಣ ಯೋಜನೆಯಲ್ಲಿ ಕೊರೆಸಲಾದ ಕೊಳವೆ ಬಾವಿಗಳೆಷ್ಟು; (ಫಲಾನುಭವಿಗಳ ಹೆಸರು ಮತ್ತು ವಿಳಾಸದೊಂದಿಗೆ ತಾಲ್ಲೂಕುವಾರು ವಿವರ ನೀಡುವುದು)

(ಆ) ಕೊರೆಸಲಾದ ಕೊಳವೆ ಬಾವಿಗಳಲ್ಲಿ ವಿಫಲವಾದ ಹಾಗೂ ಸಫಲವಾದ ಕೊಳವೆ ಬಾವಿಗಳೆಷ್ಟು; (ಫಲಾನುಭವಿಗಳ ಹೆಸರು ಮತ್ತು ವಿಳಾಸದೊಂದಿಗೆ ತಾಲ್ಲೂಕುವಾರು ವಿವರ ನೀಡುವುದು)

(ಇ) ಈ ಯೋಜನೆಯಲ್ಲಿ ಕೊರೆಸಿದ ಕೊಳವೆ ಬಾವಿಗಳಲ್ಲಿ ಎಷ್ಟು ಕೊಳವೆ ಬಾವಿಗಳಿಗೆ ಮೋಟರ್ ಜೋಡಿಸಿ ವಿದ್ಯುಚ್ಛಕ್ತಿ ಒದಗಿಸಲಾಗಿದೆ; (ಫಲಾನುಭವಿಗಳ ಹೆಸರು ಮತ್ತು ವಿಳಾಸದೊಂದಿಗೆ ತಾಲ್ಲೂಕುವಾರು ವಿವರ ನೀಡುವುದು)

(ಈ) ಉಳಿದ ಕೊಳವೆ ಬಾವಿಗಳಿಗೆ ಯಾವಾಗ ಮೋಟರ್ ಜೋಡಿಸಿ ವಿದ್ಯುತ್ ಸಂಪರ್ಕ ಕಲ್ಪಿಸಲಾಗುವುದು ? (ಫಲಾನುಭವಿಗಳ ಹೆಸರು ಮತ್ತು ವಿಳಾಸದೊಂದಿಗೆ ತಾಲ್ಲೂಕುವಾರು ವಿವರ ನೀಡುವುದು)

## ೨೦೧೯ನೇ ಸಾಲಿನಲ್ಲಿ ಉಂಟಾದ ಪ್ರಕೃತಿ ವಿಕೋಪದಿಂದ ಉಂಟಾದ ನಷ್ಟದ ಬಗ್ಗೆ

ಶ್ರೀ ಎಂ. ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–

೧೮೪ (೨೬೪) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೯ನೇ ಸಾಲಿನ ಜುಲೈ ಮತ್ತು ಆಗಸ್ಟ್ ತಿಂಗಳುಗಳಲ್ಲಿ ಸುರಿದ ಭಾರೀ ಮಳೆಯಿಂದ ಹಾಸನ ಜಿಲ್ಲೆಯಲ್ಲಿ ಉಂಟಾಗಿರುವ ಭೂ ಕುಸಿತ, ರಸ್ತೆ ಹಾನಿ, ಬೆಳೆ ಹಾನಿ, ಪ್ರಾಣ ಹಾನಿ ಪ್ರಕರಣಗಳೆಷ್ಟು; ಈ ಪ್ರಕರಣಗಳಿಂದ ಉಂಟಾಗಿರುವ ನಷ್ಟದ ಅಂದಾಜು ಮೊತ್ತವೆಷ್ಟು; (ಪ್ರಕರಣವಾರು ಮತ್ತು ತಾಲ್ಲೂಕುವಾರು ವಿವರ ನೀಡುವುದು)

(ಆ) ಆಸ್ತಿ ಹಾನಿ, ಬೆಳೆ ಹಾನಿ, ಪ್ರಾಣ ಹಾನಿಯಿಂದ ಉಂಟಾಗಿರುವ ನಷ್ಟಗಳನ್ನು ಸಂತ್ರಸ್ಥರಿಗೆ ಭರಿಸಲು ಸರ್ಕಾರವು ನಿಗದಿಪಡಿಸಿರುವ ಪರಿಹಾರ ಮೊತ್ತವೆಷ್ಟು; ಈ ಪ್ರಕರಣಗಳಲ್ಲಿ ಹಾಸನ ಜಿಲ್ಲೆಗೆ ಬಿಡುಗಡೆಯಾಗಿರುವ ಅನುದಾನವೆಷ್ಟು; ಸಂತ್ರಸ್ಥರಿಗೆ ಇದುವರೆಗೆ ನೀಡಿದ ಪರಿಹಾರವೆಷ್ಟು; (ಪ್ರಕರಣವಾರು ಮತ್ತು ತಾಲ್ಲೂಕುವಾರು ವಿವರ ನೀಡುವುದು)

(ಇ) ಈ ಪ್ರಕೃತಿ ವಿಕೋಪದಿಂದುಂಟಾದ ಹಾನಿಯನ್ನು ಪರಿಶೀಲಿಸಲು ನೇಮಕ ಮಾಡಿರುವ ಪರಿಣಿತರ ತಂಡಗಳ ವಿವರವೇನು ? (ಇವರು ನೀಡಿರುವ ವರದಿಯ ವಿವರಗಳನ್ನು ಒದಗಿಸುವುದು)

## ಹಾಸನ ಜಿಲ್ಲೆಯಲ್ಲಿರುವ ಮುಜರಾಯಿ ದೇವಸ್ಥಾನಗಳ ಬಗ್ಗೆ

ಶ್ರೀ ಎಂ. ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–

೧೮೫ (೨೬೫) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾಸನ ಜಿಲ್ಲೆಯಲ್ಲಿ ಮುಜರಾಯಿ ದೇವಾಲಯಗಳ ಒಟ್ಟು ಸಂಖ್ಯೆ ಹಾಗೂ ಇವುಗಳ ಸ್ಥಿರಾಸ್ತಿ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಆ) ಈ ದೇವಾಲಯುಗಳಿಗೆ ಸಂಬಂಧಿಸಿದ ಜಮೀನುಗಳು ಒತ್ತುವರಿಯಾಗಿರುವ ಪ್ರಕರಣಗಳೆಷ್ಟು; ಈ ಒತ್ತುವರಿಯಾಗಿರುವ ಜಮೀನುಗಳನ್ನು ತೆರವುಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಹಾಸನ ಜಿಲ್ಲೆಯಲ್ಲಿರುವ ಮುಜರಾಯಿ ದೇವಾಲಯಗಳಿಂದ ಕಳೆದ ೩ ವರ್ಷಗಳಲ್ಲಿ ಸರ್ಕಾರಕ್ಕೆ ಬಂದ ಆದಾಯವೆಷ್ಟು; ಈ ದೇವಸ್ಥಾನಗಳ ಉಸ್ತುವಾರಿ ಮತ್ತು ರಕ್ಷಣಾ ಕಾರ್ಯಗಳಿಗಾಗಿ ಖರ್ಚಾಗಿರುವ ಮೊತ್ತವೆಷ್ಟು ? (ಪ್ರತಿ ದೇವಸ್ಥಾನದ ವಿವರ ನೀಡುವುದು)

# ಲೋಕೋಪಯೋಗಿ ಇಲಾಖೆಯಿಂದ ಕೈಗೊಂಡಿರುವ ಕಾಮಗಾರಿಗಳ ಬಗ್ಗೆ

ಶ್ರೀ ಎಂ. ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

೧೮೬ (೨೬೬) ಮಾನ್ಯ ಉಪ ಮುಖ್ಯಮಂತ್ರಿಗಳು (ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು) ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ೩ ವರ್ಷಗಳಲ್ಲಿ ಲೋಕೋಪಯೋಗಿ ಇಲಾಖೆಯಿಂದ ಹಾಸನ ಜಿಲ್ಲೆಯಲ್ಲಿ ಕೈಗೆತ್ತಿಕೊಳ್ಳಲಾಗಿರುವ ಕಾಮಗಾರಿಗಳು ಯಾವುವು; ಈ ಕಾಮಗಾರಿಗಳಿಗೆ ಮಂಜೂರಾದ ಅನುದಾನವೆಷ್ಟು; (ಕಾಮಗಾರಿವಾರು ಸಂಪೂರ್ಣ ವಿವರ ನೀಡುವುದು)

(ಆ) ಈ ಕಾಮಗಾರಿಗಳನ್ನು ಪಡೆದಿರುವ ಗುತ್ತಿಗೆದಾರರು/ಏಜೆನ್ಸಿಗಳ ವಿವರ ನೀಡುವುದು; ಈ ಕಾಮಗಾರಿಗಳು ಪ್ರಸ್ತುತ ಯಾವ ಯಾವ ಹಂತದಲ್ಲಿವೆ; ಈ ಕಾಮಗಾರಿಗಳಿಗಾಗಿ ಜನವರಿ-೨೦೨೦ರವರೆಗೆ ಬಿಡುಗಡೆ ಮಾಡಿರುವ ಅನುದಾನವೆಷ್ಟು; (ಕಾಮಗಾರಿವಾರು ಸಂಪೂರ್ಣ ವಿವರ ನೀಡುವುದು)

(ಇ) ಈ ಯೋಜನೆಯ ಕಾಮಗಾರಿಗಳು ಕಳಪೆ ಗುಣಮಟ್ಟ ಹೊಂದಿವೆಯೆಂದು ಸಾರ್ವಜನಿಕರಿಂದ ದೂರುಗಳು ಬಂದಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸದರಿ ಕಾಮಗಾರಿಗಳನ್ನು ನಿರ್ವಹಿಸಿರುವ ಗುತ್ತಿಗೆದಾರರು/ಏಜೆನ್ಸಿಗಳು ಮತ್ತು ಕಾಮಗಾರಿಗಳ ಮೇಲ್ವಿಚಾರಣೆ ವಹಿಸಿರುವ ಅಧಿಕಾರಿಗಳ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ? (ಪ್ರಕರಣವಾರು ವಿವರ ನೀಡುವುದು)

## ನೆರೆ ಪರಿಹಾರದ ಅನುದಾನ ಹಂಚಿಕೆ ಕುರಿತು

ಶ್ರೀ ಕೆ. ಹರೀಶ್ ಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು):–

೧೮೭ (೨೩೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೯ರ ಆಗಸ್ಟ್ ತಿಂಗಳಲ್ಲಿ ಸುರಿದ ಮಳೆಯಿಂದ ದಕ್ಷಿಣ ಕನ್ನಡ ಜಿಲ್ಲೆಯ ಬೆಳ್ತಂಗಡಿ ತಾಲ್ಲೂಕಿನಲ್ಲಿ ಆದ ವ್ಯಾಪಕ ಹಾನಿಯಲ್ಲಿ ಸಂಪರ್ಕ ಕಳೆದುಕೊಂಡ ಸೇತುವೆಗಳೆಷ್ಟು;

(ಆ) ಈ ಸೇತುವೆಗಳ ಪುನರ್ ನಿರ್ಮಾಣ/ದುರಸ್ಥಿ ಕುರಿತಂತೆ ಸರ್ಕಾರ ಕೈಗೊಂಡ ಕ್ರಮಗಳೇನು; (ಸಂಪೂರ್ಣ ವಿವರ ನೀಡುವುದು)

(ಇ) ಸಂಪೂರ್ಣ ನಾಶವಾದ ಮನೆಗಳು ಮತ್ತು ಭಾಗಶಃ ನಾಶವಾದ ಮನೆಗಳ ಸಂಖ್ಯೆ ಎಷ್ಟು;

(ಈ) ಒಟ್ಟು ಎಷ್ಟು ಮನೆಗಳಿಗೆ ಹಣ ಬಿಡುಗಡೆಗೊಳಿಸಲಾಗಿದೆ; ಫಲಾನುಭವಿಗಳ ಪಟ್ಟಿಯೊಂದಿಗೆ ಸಂಪೂರ್ಣ ವಿವರ ಒದಗಿಸುವುದು;

(ಉ) ಭೂ ಕುಸಿತದಿಂದ/ನೆರೆಯಿಂದ ನಿವೇಶನ ಕಳೆದುಕೊಂಡವರೆಷ್ಟು;

(ಊ) ನಿವೇಶನ ಕಳೆದುಕೊಂಡವರಿಗೆ ನಿವೇಶನ ಕಲ್ಪಿಸಲಾಗಿದೆಯೇ; ಅಂಕಿ–ಅಂಶಗಳ ಸಹಿತ ಸಂಪೂರ್ಣ ಮಾಹಿತಿ ನೀಡುವುದು;

(ಋ) ನೆರೆಯಿಂದ ಕೊಚ್ಚಿಹೋದ ಕೃಷಿ ಜಮೀನುಗಳು ಎಷ್ಟು; ಇದರಿಂದ ಆದ ನಷ್ಟವೆಷ್ಟು;

(ಎ) ಅತಿವೃಷ್ಠಿಯಿಂದಾದ ನಷ್ಟಕ್ಕೆ ಪರಿಹಾರ ಒದಗಿಸಲಾಗಿದೆಯೇ; ಒದಗಿಸಿದ್ದಲ್ಲಿ, ಫಲಾನುಭವಿಗಳ ಸಂಖ್ಯೆ ಎಷ್ಟು? (ಫಲಾನುಭವಿಗಳ ಪಟ್ಟಿಯೊಂದಿಗೆ ಹಾಗೂ ಅಂಕಿ–ಅಂಶಗಳೊಂದಿಗೆ ಸಂಪೂರ್ಣ ಮಾಹಿತಿ ಒದಗಿಸುವುದು)

## ಮಂಗಳೂರಿನಲ್ಲಿ CAA ಮತ್ತು NCR ಪ್ರತಿಭಟನೆ ಬಗ್ಗೆ

ಶ್ರೀ ಐವಾನ್ ಡಿ'ಸೋಜ (ನಾಮನಿರ್ದೇಶನ ಹೊಂದಿದವರು):–

೧೮೮ (೨೪೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಗಳೂರಿನಲ್ಲಿ CAA ಮತ್ತು NCR ಪ್ರತಿಭಟನೆಗಾರರ ಮೇಲೆ ಗೋಲಿಬಾರ್‌ನಲ್ಲಿ ಮೃತರಾದವರಿಗೆ ಸರ್ಕಾರ ಪರಿಹಾರ ನೀಡಿದೆಯೇ; ೨೦೧೭–೧೮, ೨೦೧೮–೧೯ ಮತ್ತು ೨೦೧೯–೨೦ರಲ್ಲಿ ರಾಜ್ಯದಲ್ಲಿ ಎಷ್ಟು ಮಂದಿಗೆ ಯಾವ ಯಾವ ಕಾರಣಕ್ಕಾಗಿ ಮೃತರಾದವರಿಗೆ ಪರಿಹಾರ ನೀಡಲಾಗಿದೆ; ಪರಿಹಾರ ನೀಡಿದ ಪಟ್ಟಿ ಸಹಿತ ವಿವರ ನೀಡುವುದು;

(ಆ) ಮಂಗಳೂರಿನಲ್ಲಿ ಪರಿಹಾರ ಘೋಷಿಸಿ ನಂತರ ಅದನ್ನು ನೀಡದಿರಲು ಕಾರಣಗಳೇನು; (ವಿವರ ನೀಡುವುದು)

(ಇ) ರಾಜ್ಯದಲ್ಲಿ ಪ್ರತಿಭಟನೆಗಾರರು ಪ್ರತಿಭಟನೆಗೆ ಮುಂದಾದಾಗ ಅವರ ಮೇಲಿನ ಕೇಸುಗಳನ್ನು ಹಿಂದಕ್ಕೆ ಪಡೆದ ಉದಾರಣೆಗಳಿವೆಯೇ; ಇದ್ದರೆ ವಿವರ ನೀಡುವುದು;

(ಈ) ೨೦೧೮-೧೯, ೨೦೧೯-೨೦ರ ಪ್ರತಿಭಟನೆಯಲ್ಲಿ ಗಾಯಗೊಂಡವರ ಚಿಕಿತ್ಸೆಯ ಹಣವನ್ನು ರಾಜ್ಯ ಸರ್ಕಾರದಿಂದ ನೀಡಲಾಗಿದೆಯೇ; ನೀಡಿದ್ದರೆ ವಿವರ ನೀಡುವುದು; ಮಂಗಳೂರು ಗಲಭೆಯಲ್ಲಿ ಗಾಯಗೊಂಡವರ ಸಂಖ್ಯೆ ಎಷ್ಟು; ಅವರು ಪಾವತಿಸಿದ ಆಸ್ಪತ್ರೆಯ ಚಿಕಿತ್ಸೆ ಬಿಲ್ಲು ಎಷ್ಟು; ವಿವರ ನೀಡುವುದು;

(ಉ) ಮಂಗಳೂರು ಗಲಭೆಯಲ್ಲಿ ಗಾಯಗೊಂಡ ಪೊಲೀಸರ ಸಂಖ್ಯೆ ಎಷ್ಟು; ವಿವರ ನೀಡುವುದು; ಯಾವ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆದಿದ್ದಾರೆ? (ವಿವರ ನೀಡುವುದು)

## ಸಮಾಜ ಕಲ್ಯಾಣ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಹಾಸ್ಟೆಲ್‌ಗಳು

ಶ್ರೀ ಐವಾನ್ ಡಿ'ಸೋಜ (ನಾಮನಿರ್ದೇಶನ ಹೊಂದಿದವರು):–

೧೮೯ (೨೪೮) ಮಾನ್ಯ ಉಪ ಮುಖ್ಯಮಂತ್ರಿಗಳು (ಲೋಕೋಪಯೋಗಿ ಹಾಗೂ ಸಮಾಜ ಕಲ್ಯಾಣ ಸಚಿವರು) ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಮಾಜ ಕಲ್ಯಾಣ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಹಾಸ್ಟೆಲ್‌ಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ಹಾಸ್ಟೆಲ್‌ಗಳಲ್ಲಿ ಖಾಲಿಯಿರುವ ವಾರ್ಡನ್ ಮತ್ತು ಅಡುಗೆ ತಯಾರಿಕೆ ಹುದ್ದೆಗಳೆಷ್ಟು; ಖಾಲಿ ಇರುವ ಹುದ್ದೆಗಳೆಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಇ) ಖಾಲಿ ಹುದ್ದೆ ಇದ್ದಲ್ಲಿ ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು;

(ಈ) ಸಮಾಜ ಕಲ್ಯಾಣ ಇಲಾಖೆ ವತಿಯಿಂದ ೨೦೧೯-೨೦ರಲ್ಲಿ ನಿರ್ಮಿಸಲು ಉದ್ದೇಶಿಸಿರುವ ಸಮುದಾಯ ಭವನಗಳೆಷ್ಟು; ಸಮುದಾಯ ಭವನಗಳಿಗೆ ನೀಡುವ ಅನುದಾನ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಉ) ರಾಜ್ಯದಲ್ಲಿ ಸಮಾಜ ಕಲ್ಯಾಣ ಇಲಾಖೆಯಿಂದ ನಡೆಸಲ್ಪಡುವ ಸಮುದಾಯ ಭವನಗಳೆಷ್ಟು ? (ವಿವರ ನೀಡುವುದು)

## ರೈತರ ಸಾಲಮನ್ನಾ ಮಾಡುವ ಬಗ್ಗೆ

ಶ್ರೀ ಐವಾನ್ ಡಿ'ಸೋಜ (ನಾಮನಿರ್ದೇಶನ ಹೊಂದಿದವರು):-

೧೯೦ (೨೭೨) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೧೭-೧೮, ೨೦೧೮-೧೯ರಲ್ಲಿ ರಾಜ್ಯದಲ್ಲಿ ಎಷ್ಟು ಮಂದಿ ರೈತರಿಗೆ ಸಾಲಮನ್ನಾ ಮಾಡಲಾಗಿದೆ; ಎಷ್ಟು ಮಂದಿ ರೈತರು ಸಾಲಮನ್ನಾ ಯೋಜನೆ ಅನ್ವಯ ಅರ್ಹರಾಗಿದ್ದಾರೆ; (ಜಿಲ್ಲಾವಾರು ವಿವರ ನೀಡುವುದು)

(ಆ) ರೈತರ ಸಾಲಮನ್ನಾ ಯೋಜನೆಯಡಿಯಲ್ಲಿ ಸಹಕಾರಿ ಸಂಘಗಳಲ್ಲಿ ಮತ್ತು ರಾಷ್ಟ್ರೀಕೃತ ಬ್ಯಾಂಕುಗಳಲ್ಲಿ ಪಾವತಿಸಿದ ಮೊತ್ತ ಎಷ್ಟು;

(ಇ) ೨೦೧೯-೨೦ನೇ ಸಾಲಿನಲ್ಲಿ ರೈತರ ಸಾಲವನ್ನು ಮನ್ನಾ ಮಾಡಲಾಗಿದೆಯೇ; ೨೦೧೮-೧೯, ೨೦೧೯-೨೦ರಲ್ಲಿ ಸಾಲಮನ್ನಾ ಮಾಡಿ ಮೊತ್ತವನ್ನು ಯಾವ ಮಾನದಂಡದ ಮೇಲೆ ನೀಡಲಾಗಿದೆ;

(ಈ) ಕೇಂದ್ರ ಸರ್ಕಾರ ನೀಡುತ್ತಿರುವ ರೈತರಿಗೆ ವರ್ಷಕ್ಕೆ ಪ್ರೋತ್ಸಾಹ ಧನ ರೂ. ೬,೦೦೦/–ಗಳನ್ನು ಪಡೆದಿರುವ ಫಲಾನುಭವಿಗಳ ಸಂಖ್ಯೆ ಎಷ್ಟು; ಕೇಂದ್ರ ಸರ್ಕಾರದ ಯೋಜನೆಯ ಒಟ್ಟು ಫಲಾನುಭವಿಗಳೆಷ್ಟು; ಅರ್ಜಿದಾರರಿಗೆ ಎಷ್ಟು ಪಾವತಿಸಲಾಗಿದೆ; (ವಿವರ ನೀಡುವುದು)

(ಉ) ೨೦೧೮–೧೯, ೨೦೧೯–೨೦ರಲ್ಲಿ ಸಾಲಭಾದೆಯುನ್ನು ತಡೆಯಲಾಗದೇ ಮೃತಪಟ್ಟ ರೈತರ ಸಂಖ್ಯೆ ಎಷ್ಟು; ಅವರ ಕುಟುಂಬಗಳಿಗೆ ನೀಡಿದ ಪರಿಹಾರ ಎಷ್ಟು; ಕುಟುಂಬದ ಸದಸ್ಯರಿಗೆ ಉದ್ಯೋಗ ನೀಡಲಾಗಿದೆಯೇ ? (ವಿವರ ನೀಡುವುದು)

## ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ನೀಡುತ್ತಿರುವ ಪಿಂಚಣಿ ಬಗ್ಗೆ

ಶ್ರೀ ಐವಾನ್ ಡಿ'ಸೋಜ (ನಾಮನಿರ್ದೇಶನ ಹೊಂದಿದವರು):–

೧೯೧ (೨೭೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ನೀಡುತ್ತಿರುವ ವಿವಿಧ ಪಿಂಚಣಿಗಳಾವುವು; ಪಿಂಚಣಿ ನೀಡುವ ಮೊತ್ತ ಎಷ್ಟು; (ವಿವರ ನೀಡುವುದು)

(ಆ) ಪಿಂಚಣಿ ಯೋಜನೆಗಳು ಅರ್ಹ ಫಲಾನುಭವಿಗಳಿಗೆ ತಲುಪಿಸಲು ಸರ್ಕಾರ ಕೈಗೊಂಡ ಕ್ರಮಗಳೇನು;

(ಇ) ರಾಜ್ಯದಲ್ಲಿ ಒಟ್ಟು ಪಿಂಚಣಿದಾರರ ಸಂಖ್ಯೆ ಎಷ್ಟು; ಪಿಂಚಣಿ ಹಣವನ್ನು ಫಲಾನುಭವಿಗಳಿಗೆ ತಲುಪಿಸುವಲ್ಲಿ ತೊಂದರೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ವಿವರ ನೀಡುವುದು)

(ಈ) ಉತ್ತರ ಕನ್ನಡ ಮತ್ತು ಬಳ್ಳಾರಿ ಜಿಲ್ಲೆಗಳಲ್ಲಿ ಪಿಂಚಣಿ ಫಲಾನುಭವಿಗಳು ಆಯ್ಕೆ ಮಾಡಲು ಕೈಗೊಂಡಿರುವ ವಿಶೇಷ ಕ್ರಮಗಳಾವುವು ? (ವಿವರ ನೀಡುವುದು)

## ಕಿತ್ತೂರು ರಾಣಿ ಚನ್ನಮ್ಮ ವಸತಿ ಶಾಲೆ ಬಗ್ಗೆ

ಶ್ರೀಮತಿ ಜಯಮ್ಮ (ವಿಧಾನ ಸಭೆಯಿಂದ ಚುನಾಯಿತರಾದವರು):–

೧೯೨ (೨೮೩) ಮಾನ್ಯ ಉಪ ಮುಖ್ಯಮಂತ್ರಿಗಳು, (ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು) ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೪ನೇ ಸಾಲಿನಲ್ಲಿ ಮಂಜೂರಾದ ಚಿತ್ರದುರ್ಗ ಜಿಲ್ಲೆ ಚಳ್ಳಕೆರೆ ತಾಲ್ಲೂಕು ಎನ್. ಮಹದೇವಪುರದಲ್ಲಿ ಕಿತ್ತೂರು ರಾಣಿ ಚನ್ನಮ್ಮ ವಸತಿ ಶಾಲೆಯನ್ನು ಆರಂಭಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ;

(ಆ) ಇದ್ದಲ್ಲಿ, ಈವರೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಪ್ರಧಾನ ಮಂತ್ರಿ ಫಸಲ್ ಭೀಮಾ ಯೋಜನೆಯ ಬಗ್ಗೆ

ಶ್ರೀ ಕಾಂತರಾಜು (ಬಿ.ಎಂ.ಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–

೧೯೩ (೨೯೪) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರಧಾನ ಮಂತ್ರಿ ಫಸಲ್ ಭೀಮಾ ಯೋಜನೆಯಡಿಯಲ್ಲಿ ಖಾಸಗಿ ವಿಮಾ ಸಂಸ್ಥೆಗಳು ತಮ್ಮ ಅನುಕೂಲಕ್ಕೆ ತಕ್ಕಂತೆ ನಿಯಮಗಳನ್ನು ರೂಪಿಸಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಈ ನಿಯಮಾವಳಿಗಳಿಂದ ರೈತರ ಹಣವನ್ನು ಪಾವತಿಸಿದ್ದರೂ ಸಹ ಅವರಿಗೆ ವಿಮಾ ಸೌಲಭ್ಯದ ಮೊತ್ತವು ಪಾವತಿಯಾಗದೆ ಸಂಕಷ್ಟದಲ್ಲಿರುವುದು ನಿಜವೇ;

(ಇ) ಕಳೆದ ೨ ವರ್ಷಗಳಲ್ಲಿ ತುಮಕೂರು ಜಿಲ್ಲೆಯಲ್ಲಿ ಫಸಲ್ ಭೀಮಾ ಯೋಜನೆಯಲ್ಲಿ ಮುಂಗಾರು ಮತ್ತು ಹಿಂಗಾರು ಬೆಳೆಗಳಿಗೆ ರೈತರು ತುಂಬಿರುವ ವಿಮಾಕಂತಿನ ಹಣವೆಷ್ಟು;

(ಈ) ಕಳೆದ ೨ ವರ್ಷಗಳಲ್ಲಿ ಬೆಳೆ ನಷ್ಟ ಪರಿಹಾರಕ್ಕೆ ವಿಮಾಯೋಜನೆಯು ರೈತರಿಗೆ ಇಲ್ಲಿಯ ತನಕ ಎಷ್ಟು ಹಣವನ್ನು ಪಾವತಿಸಿದೆ;

(ಉ) ಕಳೆದ ೨ ವರ್ಷದ ಅವಧಿಯ ಫಸಲ್ ಭೀಮಾ ಯೋಜನೆಯ ಫಲಾನುಭವಿಗಳ ಸಂಖ್ಯೆ ಎಷ್ಟು ? (ತುಮಕೂರು ಜಿಲ್ಲೆ, ತಾಲ್ಲೂಕು, ಹೋಬಳಿವಾರು ವಿವರ ನೀಡುವುದು)

## ಮುಜರಾಯಿ ಇಲಾಖೆಗೆ ಒಳಪಡುವ ದೇವಾಲಯಗಳಲ್ಲಿ ಸಾಮೂಹಿಕ ವಿವಾಹದ ಬಗ್ಗೆ

ಶ್ರೀ ಕಾಂತರಾಜ್ (ಬಿಎಂಎಲ್):– (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

೧೯೪ (೨೯೫) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮುಜರಾಯಿ ಇಲಾಖೆಗೆ ಒಳಪಡುವ ದೇವಾಲಯುಗಳಲ್ಲಿ ಸರ್ಕಾರದ ವತಿಯಿಂದ ಸಾಮೂಹಿಕ ವಿವಾಹದ ಯೋಜನೆಯನ್ನು ಜಾರಿಗೆ ತರಲಾಗಿದೆಯೇ; (ವಿವರ ನೀಡುವುದು)

(ಆ) ಸರ್ಕಾರದ ವತಿಯಿಂದ ಸಾಮೂಹಿಕ ವಿವಾಹದ ಯೋಜನೆ ಏರ್ಪಡಿಸುವ ಚಿಂತನೆ ಸ್ವಾಗತಾರ್ಹ ಕಾರ್ಯಕ್ರಮವಾಗಿರುವುದರಿಂದ ಈ ವನ ಜೋಡಿಗಳ ಆರ್ಥಿಕ ಸ್ವಾವಲಂಭನೆಗೆ ಸ್ವ-ಉದ್ಯೋಗ ಯೋಜನೆಯ ಕಾರ್ಯಕ್ರಮ ರೂಪಿಸಲಾಗುವುದೇ; (ವಿವರ ನೀಡುವುದು)

(ಇ) ಮುಜರಾಯಿ ಇಲಾಖೆಯ ದೇವಾಲಯಗಳಲ್ಲಿ ಮದುವೆಯಾಗುವ ಜೋಡಿಗಳಿಗೆ ಸರ್ಕಾರದಿಂದ ನೀಡುವ ಅನುಕೂಲಗಳೇನು;

(ಈ) ವರ್ಷದಲ್ಲಿ ಎಷ್ಟು ಸಲ ಈ ರೀತಿಯ ಸಾಮೂಹಿಕ ವಿವಾಹಗಳನ್ನು ಏರ್ಪಡಿಸಲಾಗಿದೆ;

(ಉ) ಕನಿಷ್ಟ ಪಕ್ಷ ಪ್ರತಿ ಹೋಬಳಿ ಮಟ್ಟದಲ್ಲಿ ಮುಜರಾಯಿ ಇಲಾಖೆಯ ಎರಡು ಅಥವಾ ಖಾಸಗಿ ದೇವಸ್ಥಾನಗಳಲ್ಲಿ ತಲಾ ೧೦೦ ಜೋಡಿಯ ಸಾಮೂಹಿಕ ವಿವಾಹವನ್ನು ವರ್ಷದಲ್ಲಿ ೨ ಬಾರಿ ಮಾಡುವ ಕಾರ್ಯಕ್ರಮವನ್ನು ಸರ್ಕಾರ ರೂಪಿಸಿದ್ದಲ್ಲಿ ಸಾರ್ವಜನಿಕರಿಗೆ ತುಂಬಾ ಅನುಕೂಲವಾಗುವುದಿಲ್ಲವೆ; ಸರ್ಕಾರ ಈ ಬಗ್ಗೆ ಯೋಜನೆ ಜಾರಿಗೆ ತರುವುದೇ ?

## ರಾಜ್ಯದಲ್ಲಿರುವ ಸರ್ಕಾರಿ ಜಮೀನಿನ ಬಗ್ಗೆ

ಶ್ರೀ ಕಾಂತರಾಜ್ (ಬಿಎಂಎಲ್):- (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

೧೯೫ (೨೯೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಒಟ್ಟು ಎಷ್ಟು ಎಕರೆ ಸರ್ಕಾರಿ ಜಮೀನು ಇದೆ; (ಜಿಲ್ಲಾವಾರು ವಿವರ ನೀಡುವುದು)

(ಆ) ಈ ಸರ್ಕಾರಿ ಜಮೀನನ್ನು ಒತ್ತುವರಿ ಮಾಡಿಕೊಂಡಿರುವವರ ಸಂಖ್ಯೆ ಎಷ್ಟು; ಎಷ್ಟು ಎಕರೆ ಸರ್ಕಾರಿ ಜಮೀನನ್ನು ಒತ್ತುವರಿ ಮಾಡಿಕೊಳ್ಳಲಾಗಿದೆ; (ಜಿಲ್ಲಾವಾರು ವಿವರ ನೀಡುವುದು)

(ಇ) ಸರ್ಕಾರಿ ಜಮೀನನ್ನು ಒತ್ತುವರಿದಾರರಿಂದ ತೆರವುಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ವಿವರ ನೀಡುವುದು)

(ಈ) ತುಮಕೂರು ಜಿಲ್ಲೆಯಲ್ಲಿ ಎಷ್ಟು ಎಕರೆ ಸರ್ಕಾರಿ ಜಮೀನಿದೆ; (ತಾಲ್ಲೂಕುವಾರು ವಿವರ ನೀಡುವುದು)

(ಉ) ಬೆಂಗಳೂರು ನಗರ ಜಿಲ್ಲೆಯಲ್ಲಿ ಎಷ್ಟು ಎಕರೆ ಸರ್ಕಾರಿ ಜಮೀನಿದೆ; (ತಾಲ್ಲೂಕುವಾರು ಹೋಬಳಿವಾರು, ಗ್ರಾಮವಾರು, ಸರ್ವೆ ನಂಬರ್‌ಗಳ ಸಮೇತ ವಿವರ ನೀಡುವುದು) ಈ ಸರ್ಕಾರಿ ಜಮೀನಿನಲ್ಲಿ ಎಷ್ಟು ಎಕರೆ ಜಮೀನು ಒತ್ತುವರಿಯಾಗಿದೆ; ಒತ್ತುವರಿಯಾಗಿರುವ ಜಮೀನನ್ನು ತೆರವುಗೊಳಿಸಿ ಸರ್ಕಾರದ ವಶಕ್ಕೆ ಪಡೆದಿದೆಯೇ; (ವಿವರ ನೀಡುವುದು)

(ಊ) ಮೇಲ್ಕಂಡ ವಿಷಯದ ಬಗ್ಗೆ ಕಳೆದ ೪ ವರ್ಷಗಳಿಂದ ಪ್ರತಿ ಅಧಿವೇಶನದಲ್ಲೂ ಪ್ರಶ್ನೆ ಕೇಳಿದರೂ ಸಹ ಇದುವರೆಗೂ ಉತ್ತರ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

## ಕಂದಾಯ ಇಲಾಖೆಯ ಭೂ ಪರಿವರ್ತನೆಯ ಆದೇಶಗಳ ಬಗ್ಗೆ

ಶ್ರೀ ಕಾಂತರಾಜ್ (ಬಿಎಂಎಲ್):- (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

೧೯೬ (೨೯೭) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ಭೂ ಕಂದಾಯ ಕಾಯ್ದೆ, ೧೯೬೪ ಕಲ ೯೫(೨) ರಡಿಯಲ್ಲಿ ಕೃಷಿ ಭೂಮಿಯನ್ನು ಕೃಷಿಯೇತರ ಉದ್ದೇಶಕ್ಕಾಗಿ

ಪರಿವರ್ತಿಸುವ ಆದೇಶಗಳ ಮೇಲೆ ಕಡ್ಡಾಯವಾಗಿ ಡಿಜಿಟಲ್ ಸಹಿ (Digital signature) ಮಾಡಿ, ಭೂಪರಿವರ್ತನಾ ಕೋರಿಕೆಗಳನ್ನು ಭೂಪರಿವರ್ತನಾ ತಾಂತ್ರಾಂಶದ ಮುಖಾಂತರ ದಿನಾಂಕ: ೦೧–೦೩–೨೦೧೮ ರಿಂದ ನಿರ್ವಹಿಸತಕ್ಕದ್ದು ಎಂದು ಸುತ್ತೋಲೆ ಹೊರಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ದಿನಾಂಕ: ೦೧–೦೩–೨೦೧೮ ರಿಂದ ೦೧–೦೩–೨೦೧೯ ರವರೆಗೆ ಸರ್ಕಾರದ ಸುತ್ತೋಲೆಯಂತೆ ಭೂಪರಿವರ್ತನೆಗಾಗಿ ಎಷ್ಟು ಅರ್ಜಿಗಳನ್ನು ರಾಜ್ಯದ ಆಯಾ ಜಿಲ್ಲಾಧಿಕಾರಿಗಳ ಕಛೇರಿಯಲ್ಲಿ ಸ್ವೀಕರಿಸಲಾಗಿದೆ; ಮತ್ತು ಎಷ್ಟು ಪ್ರಕರಣಗಳಲ್ಲಿ ಜಿಲ್ಲಾಧಿಕಾರಿಗಳು ಡಿಜಿಟಲ್ ಸಹಿ ಮಾಡಿ ಆದೇಶಗಳನ್ನು ಹೊರಡಿಸಿರುತ್ತಾರೆ; (ಜಿಲ್ಲಾವಾರು ಅಂಕಿ ಅಂಶಗಳನು ನೀಡುವುದು)

(ಇ) ಈ ರೀತಿ ಭೂ ಪರಿವರ್ತನೆ ತಂತ್ರಾಂಶ ಮುಖಾಂತರ ಭೂ ಪರಿವರ್ತನೆ ಅರ್ಜಿಗಳನ್ನು ಸಲ್ಲಿಸಲು ಅರ್ಜಿದಾರರು ಜಿಲ್ಲಾಧಿಕಾರಿಗಳ ಕಛೇರಿಯನ್ನು ಸಂಪರ್ಕಿಸಿದಾಗ ಭೂ ಕಂದಾಯ ಅಧಿನಿಯಮ ಹಾಗೂ ಭೂ ಕಂದಾಯ ಕಾನೂನು ಅಡಿಯಲ್ಲಿ ಅವಕಾಶ ಕಲ್ಪಿಸಿಲ್ಲದಿದ್ದರೂ ಸಹ ಭೂ ಪರಿವರ್ತನಾ ಅರ್ಜಿಯೊಂದಿಗೆ ಭೂಪರಿವರ್ತನೆ ಆಗಬೇಕಾದ ಜಮೀನಿಗೆ ಭೂದಾಖಲೆಗಳ ಇಲಾಖೆಯಿಂದ ೧೧ ಇ ನಕ್ಷೆ ಮತ್ತು ತಾಲ್ಲೂಕು ಸರ್ವೇಯರ್‌ರವರಿಂದ ಮ್ಯಾನುಯಲ್ ನಕ್ಷೆಗಳನ್ನು ಹಾಜರುಪಡಿಸಬೇಕು ಎಂದು ತಿಳಿಸಿ, ಸ್ವೀಕೃತಿಯನ್ನು ನೀಡದೆ ಇರುವ ಅಂಶ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಸಾರ್ವಜನಿಕ ಹಿತದೃಷ್ಟಿಯಿಂದ, ರೈತರಿಗೆ ಅನುಕೂಲವಾಗುವಂತೆ ೧೧ ಇ ನಕ್ಷೆ ಮತ್ತು ತಾಲ್ಲೂಕು ಸರ್ವೆಯರ್ ನಕ್ಷೆಗಳನ್ನು ಹಾಜರುಪಡಿಸದಿದ್ದರೂ ಸಹ ಭೂ ಪರಿವರ್ತನೆ ಅರ್ಜಿಗಳನ್ನು ಸ್ವೀಕರಿಸಲು ಜಿಲ್ಲಾಧಿಕಾರಿಗಳಿಗೆ ಸರ್ಕಾರ ಕೂಡಲೇ ಸುತ್ತೋಲೆ ಹೊರಡಿಸಲು ಕ್ರಮ ತೆಗೆದುಕೊಳ್ಳವುದೇ ? (ಸ್ಪಷ್ಟ ಉತ್ತರ ನೀಡುವುದು)

## ಸರ್ವೇ ಸಮಸ್ಯೆ ಹಾಗೂ ಸರ್ವೇಯರ್ಸ್ ನೇಮಕಾತಿ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೯೭ (೩೯೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಂದಾಯ ಇಲಾಖೆಯಲ್ಲಿ ಕಳೆದ ಹಲವಾರು ವರ್ಷಗಳಿಂದ ಸರ್ವೇ ಕೆಲಸ ಬಾಕಿ ಇದ್ದು, ಇದರಿಂದಾಗಿ ಸಾರ್ವಜನಿಕರು ಎದುರಿಸುತ್ತಿರುವ ಸಮಸ್ಯೆ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಇಲಾಖೆಗೆ ಒಟ್ಟು ಮಂಜೂರಾಗಿರುವ ಸರ್ವೇಯರ್‌ಗಳ ಸಂಖ್ಯೆ ಎಷ್ಟು; ಆ ಪೈಕಿ ಪ್ರಸ್ತುತ ಕಾರ್ಯ ನಿರ್ವಹಿಸುತ್ತಿರುವವರ ಸಂಖ್ಯೆ ಎಷ್ಟು;

(ಇ) ಇದರಲ್ಲಿ ಎಷ್ಟು ಮಂದಿ ಸರ್ಕಾರಿ ಸರ್ವೇಯರ್‌ಗಳಿದ್ದಾರೆ ಎಷ್ಟು; ಮಂದಿ ಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿದ್ದಾರೆ;

(ಈ) ರಾಜ್ಯದಲ್ಲಿನ ಸರ್ವೇ ಸಮಸ್ಯೆಯನ್ನು ಪರಿಹರಿಸಲು ಸರ್ಕಾರ ಸರ್ವೇಯರ್‌ಗಳ ನೇಮಕಾತಿ ಪ್ರಕ್ರಿಯೆ ನಡೆಸುವ ಯೋಜನೆ ಮಾಡಿದೆಯೇ;

(ಉ) ಮಾಡಿದ್ದಲ್ಲಿ, ಯಾವ ಕಾಲಮಿತಿಯೊಳಗೆ ನೇಮಕಾತಿ ಪ್ರಕ್ರಿಯೆ ಪೂರ್ಣಗೊಳಿಸಲಾಗುವುದು ?

## ವಸತಿ ಶಾಲೆಗಳ ಸಮಸ್ಯೆ ಹಾಗೂ ಸಿಬ್ಬಂದಿ ನೇಮಕಾತಿ ಕುರಿತು

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೯೮ (೩೯೪) ಮಾನ್ಯ ಉಪ ಮುಖ್ಯಮಂತ್ರಿಗಳು (ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು) ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಹಲವಾರು ವಸತಿ ಶಾಲೆಗಳನ್ನು ನಡೆಸುತ್ತಿದ್ದು, ಈ ವಸತಿ ಶಾಲೆಗಳಲ್ಲಿ ಮೂಲ ಸೌಕರ್ಯಗಳಿಲ್ಲದೇ ವಿದ್ಯಾರ್ಥಿಗಳು ಸಮಸ್ಯೆ ಎದುರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ವಿವಿಧ ಶೀರ್ಷಿಕೆಯಡಿ ಇಲಾಖೆ ನಡೆಸುತ್ತಿರುವ ವಸತಿ ಶಾಲೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಈ ವಸತಿ ಶಾಲೆಗಳಿಗಾಗಿ ಒಟ್ಟು ಮಂಜೂರಾದ ಶಿಕ್ಷಕ ಹಾಗೂ ಶಿಕ್ಷಕೇತರ ಸಿಬ್ಬಂದಿಗಳ ಸಂಖ್ಯೆ ಎಷ್ಟು;

(ಈ) ಈ ಸಿಬ್ಬಂದಿಗಳಲ್ಲಿ ಎಷ್ಟು ಜನ ಶಾಶ್ವತ ಹಾಗೂ ಗುತ್ತಿಗೆ ಆಧಾರದ ಮೇಲೆ ಕೆಲಸ ಮಾಡುತ್ತಿದ್ದಾರೆ (ಜಿಲ್ಲಾವಾರು ಮಾಹಿತಿ ನೀಡುವುದು)

(ಉ) ಸರ್ಕಾರವು ಗುತ್ತಿಗೆ ಆಧಾರದ ಮೇಲೆ ಶಿಕ್ಷಕ ಸಿಬ್ಬಂದಿಗಳನ್ನು ನೇಮಿಸುತ್ತಿದ್ದು, ಅವರಿಗೆ ಕಡಿಮೆ ಸಂಬಳ ನೀಡುತ್ತಿರುವುದರಿಂದ ಗುಣಾತ್ಮಕ ಶಿಕ್ಷಣವನ್ನು ನೀಡುವಲ್ಲಿ ವೈಫಲ್ಯರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಊ) ಬಂದಿದ್ದಲ್ಲಿ, ಗುತ್ತಿಗೆ ನೌಕರರ ಸಂಬಳವನ್ನು ಹೆಚ್ಚಿಸಲು ಅಥವಾ ಈ ಹುದ್ದೆಗಳಗೆ ಶಾಶ್ವತ ನೇಮಕಾತಿ ಮಾಡಲು ಸರ್ಕಾರ ಆಲೋಚಿಸಿದೆಯೇ;

(ಋ) ಇದ್ದಲ್ಲಿ, ಇದನ್ನು ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು ?

## ಲೋಕೋಪಯೋಗಿ ರಸ್ತೆಗಳನ್ನು ಮೇಲ್ದರ್ಜೆಗೇರಿಸುವುದರ ಕುರಿತು

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೯೯ (೩೯೫) ಮಾನ್ಯ ಉಪ ಮುಖ್ಯಮಂತ್ರಿಗಳು (ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು) ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಇತ್ತೀಚೆಗೆ ವರ್ಷಗಳಲ್ಲಿ ರಾಜ್ಯದಲ್ಲಿ ವಾಹನಗಳ ಸಂಚಾರ ಮಿತಿಮೀರಿ ಬೆಳೆದಿದ್ದು, ಅದಕ್ಕೆ ತಕ್ಕಂತೆ ಲೋಕೋಪಯೋಗಿ ರಸ್ತೆಗಳನ್ನು ಮೇಲ್ದರ್ಜೆಗೇರಿಸುವುದು ಅತ್ಯಾವಶ್ಯಕವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ರಾಜ್ಯದಲ್ಲಿರುವ ಒಟ್ಟು ಹೆದ್ದಾರಿಗಳೆಷ್ಟು; ವಿಸ್ತೀರ್ಣವಾರು ವಿವರ ನೀಡುವುದು;

(ಇ) ಕಳೆದ ಮೂರು ವರ್ಷಗಳ ಅವಧಿಯಲ್ಲಿ ಎಷ್ಟು ರಾಜ್ಯ ಹೆದ್ದಾರಿಗಳನ್ನು ರಾಷ್ಟ್ರೀಯ ಹೆದ್ದಾರಿಯಾಗಿ ಮೇಲ್ದರ್ಜೆಗೇರಿಸಲಾಗಿದೆ;

(ಈ) ಪ್ರಸಕ್ತ ವರ್ಷದಲ್ಲಿ ಈಗಿರುವ ರಾಷ್ಟ್ರೀಯ ಹೆದ್ದಾರಿಯನ್ನು ಎಷ್ಟು ಕಿ.ಮೀ. ಗಳಿಗೆ ಪರಿವರ್ತಿಸಲು ಯೋಜನೆ ಹಾಕಿಕೊಳ್ಳಲಾಗಿದೆ ? (ವಿವರವಾದ ಮಾಹಿತಿ ನೀಡುವುದು)

## ಉತ್ತರ ಕರ್ನಾಟಕ ಭಾಗದಲ್ಲಿ ಮೀನುಗಾರಿಕೆ ಅಭಿವೃದ್ಧಿ ಕುರಿತು

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೦೦ (೩೯೬) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಉತ್ತರ ಕರ್ನಾಟಕ ಭಾಗದಲ್ಲಿ ಮೀನುಗಾರಿಕೆ ಅಭಿವೃದ್ಧಿಗೆ ಸಾಕಷ್ಟು ಅನುಕೂಲತೆಗಳಿದ್ದರೂ ನಿರೀಕ್ಷಿತ ಬದಲಾವಣೆ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಉತ್ತರ ಕರ್ನಾಟಕದಲ್ಲಿ ಹಲವಾರು ಕೆರೆ–ಕಟ್ಟೆಗಳು ಹಾಗೂ ಜಲಾಶಯಗಳಿದ್ದರೂ ಮೀನುಗಾರಿಕೆ ಅಭಿವೃದ್ಧಿಗೆ ಕ್ರಮಕೈಗೊಳ್ಳದಿರಲು ಕಾರಣವೇನು;

(ಇ) ಕರ್ನಾಟಕ ಮೀನುಗಾರಿಕಾ ಅಭಿವೃದ್ಧಿ ನಿಗಮದಡಿಯಲ್ಲಿ ನಡೆಸಲಾಗುವ ಶಾಖೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಕೆ.ಎಸ್.ಡಿ.ಸಿ. ಯಿಂದ ನಡೆಸುವ ಕ್ಯಾಂಟೀನುಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಉ) ಉತ್ತರ ಕರ್ನಾಟಕದ ಯಾವ ಯಾವ ಜಿಲ್ಲೆಗಳಲ್ಲಿ ಇದರ ಶಾಖೆಗಳಿವೆ; ಇಲ್ಲದಿದ್ದಲ್ಲಿ, ಇದರ ಶಾಖೆಗಳನ್ನು ಪ್ರಾರಂಭಿಸಲು ಇರುವ ಅಡಚಣೆಗಳೇನು ?

## ಕೊಳಗೇರಿ ನಿರ್ಮೂಲನೆ ಕುರಿತು

ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–

೨೦೧ (೩೯೭) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಸತಿ ಇಲಾಖೆಯಲ್ಲಿರುವ ಕೊಳೆಗೇರಿ ನಿರ್ಮೂಲನೆ ಯೋಜನೆಯಲ್ಲಿ ಕೇಂದ್ರ ಸರ್ಕಾರವು ಸಾಕಷ್ಟು ಯೋಜನೆಗಳನ್ನು ರೂಪಿಸಿ ಹಣಕಾಸು ಬಿಡುಗಡೆ ಮಾಡಿದ್ದು, ಅದರ ಸಂಪೂರ್ಣ ಬಳಕೆಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಕೊಳೆಗೇರಿ ನಿರ್ಮೂಲನೆ ಮಾಡುವಲ್ಲಿ ಇರುವ ರಾಜ್ಯ ಸರ್ಕಾರದ ಹಾಗೂ ಕೇಂದ್ರ ಸರ್ಕಾರದ ಯೋಜನೆಗಳು ಯಾವುವು; (ವಿವರವಾದ ಮಾಹಿತಿ ಒದಗಿಸುವುದು)

(ಇ) ಈ ವಿವಿಧ ಯೋಜನೆಗಳಡಿಯಲ್ಲಿ ಮೀಸಲಿಟ್ಟ ಹಾಗೂ ಬಿಡಗಡೆಯಾದ ಹಣಕಾಸಿನ ವಿವರವನ್ನು ಒದಗಿಸುವುದು;

(ಈ) ಈ ವಿವರವಾದ ಯೋಜನೆಗಳನ್ನು ಪೂರ್ತಿಗೊಳಿಸಲು ನಿಗದಿಪಡಿಸಲಾದ ಅವಧಿ ಎಷ್ಟು; ಈ ನಿಗದಿತ ಅವಧಿಯಲ್ಲಿ ಎಲ್ಲಾ ಕಾರ್ಯಗಳನ್ನು ಪೂರ್ಣಗೊಳಿಸಲಾಗಿದೆಯೇ;

(ಉ) ಇಲ್ಲವಾದಲ್ಲಿ ಈ ಹಣದ ಸದ್ಬಳಕೆಯಾಗದೇ ಯೋಜನೆ ಕುಂಠಿತಗೊಳ್ಳಲು ಕಾರಣರಾದವರ ಮೇಲೆ ಯಾವ ಕ್ರಮ ಜರುಗಿಸಲಾಗಿದೆ?

## ಉಚಿತ ಸರಳ ವಿವಾಹಗಳ ಬಗ್ಗೆ

ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :-

೨೦೨ (೨೪೩) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮುಜರಾಯಿ ದೇವಾಲಯಗಳಲ್ಲಿ ಉಚಿತ ಸರಳ ವಿವಾಹಗಳನ್ನು ಉತ್ತೇಜಿಸಲು ಸರ್ಕಾರ ಯಾವುದಾದರೂ ಯೋಜನೆಯನ್ನು ರೂಪಿಸಿದೆಯೇ; (ವಿವರ ನೀಡುವುದು)

(ಆ) ನಿಗದಿಪಡಿಸಲಾದ ಅನುದಾನದ ಮೊತ್ತವೆಷ್ಟು;

(ಇ) ಸದರಿ ಯೋಜನೆಯಲ್ಲಿ ಇದುವರೆವಿಗೂ ಎಷ್ಟು ಉಚಿತ ಸರಳ ವಿವಾಹಗಳನ್ನು ಮಾಡಲಾಗಿದೆ;

(ಈ) ಸದರಿ ವಿವಾಹ ಪದ್ಧತಿಯಲ್ಲಿನ ಮಾರ್ಗಸೂಚಿಗಳೇನು; (ವಿವರ ನೀಡುವುದು)

(ಉ) ಸದರಿ ಯೋಜನೆಗೆ ಧಾರ್ಮಿಕ ಇಲಾಖೆಯು ಹಣ ಅಥವಾ ಸರ್ಕಾರದ ವಿಶೇಷ ಅನುದಾನವನ್ನು ಉಪಯೋಗಿಸಲಾಗುವುದೇ ?

## ಮುಜರಾಯಿ ದೇವಾಲಯಗಳ ಖಾಯಂ ನೌಕರರಿಗೆ ೬ ನೇ ವೇತನ ಆಯೋಗದ ಪರಿಷ್ಕೃತ ವೇತನ ಶ್ರೇಣಿ ನೀಡಿಕೆ ಬಗ್ಗೆ

ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–

೨೦೩ (೨೪೪) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಮುಜರಾಯಿ ದೇವಾಲಯಗಳಲ್ಲಿ ಸರ್ಕಾರಿ ವೇತನ ಶ್ರೇಣಿ ಪಡೆದು ಕರ್ತವ್ಯ ನಿರ್ವಹಿಸುತ್ತಿರುವ ಎಲ್ಲಾ ಖಾಯಂ ನೌಕರರಿಗೆ ೬ ನೇ ವೇತನ ಆಯೋಗದ ಪರಿಷ್ಕೃತ ವೇತನ ಶ್ರೇಣಿಯನ್ನು ಇದುವರೆವಿಗೂ ಮಂಜೂರು ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಇದುವರೆಗೆ ಮಂಜೂರು ಮಾಡುವಲ್ಲಿನ ವಿಳಂಬಕ್ಕೆ ಕಾರಣಗಳೇನು;

(ಇ) ಯಾವ ಕಾಲಮಿತಿಯಲ್ಲಿ ಮಂಜೂರು ಮಾಡಲಾಗುವುದು?

## ರೈತರಿಗೆ ಕಿಸಾನ್ ಸಮ್ಮಾನ್ ಯೋಜನೆಯಡಿ ಹಣ ಪಾವತಿ ಬಗ್ಗೆ

ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–

೨೦೪ (೨೪೫) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರೈತರಿಗೆ ಪ್ರಧಾನ ಮಂತ್ರಿಗಳ ಕಿಸಾನ್ ಸಮ್ಮಾನ್ ನಿಧಿ ಯೋಜನೆಯಡಿಯಲ್ಲಿ ಅರ್ಹ ಕೃಷಿ ಆಧಾರಿತ ಕುಟುಂಬಗಳಿಗೆ ವಾರ್ಷಿಕ ರೂ. ೬೦೦೦/– ಮತ್ತು ರಾಜ್ಯ ಸರ್ಕಾರ ಹೆಚ್ಚುವರಿಯಾಗಿ ರೂ. ೪೦೦೦/– ಗಳನ್ನು ಕಂತುಗಳಲ್ಲಿ ನೀಡಲಾಗುತ್ತಿದೆಯೆ;

(ಆ) ಕೇಂದ್ರ ಮತ್ತು ರಾಜ್ಯ ಸರ್ಕಾರ ಇದುವರೆವಿಗೂ ಎಷ್ಟು ಕಂತುಗಳಲ್ಲಿ ಎಷ್ಟು ಮಂದಿ ಫಲಾನುಭವಿಗಳಿಗೆ ಹಣವನ್ನು ಪಾವತಿಸಲಾಗಿದೆ;

(ಇ) ಸದರಿ ಯೋಜನೆಯ ಉದ್ದೇಶಗಳು ಹಾಗೂ ಮಾರ್ಗಸೂಚಿಗಳೇನು ? (ವಿವರ ನೀಡುವುದು)

## ಸರ್ವೇ ಕಾರ್ಯ ಸಮರ್ಪಕವಾಗಿ ನಡೆಸುವ ಬಗ್ಗೆ

ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–

೨೦೫ (೨೪೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರೈತರು ತಮ್ಮ ಜಮೀನುಗಳ ಸರ್ವೆ ಕಾರ್ಯಕ್ಕೆ ಶುಲ್ಕ ಪಾವತಿಸಿ, ಸಲ್ಲಿಸಲಾಗಿರುವ ಅರ್ಜಿಗಳ ಒಟ್ಟು ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ಶುಲ್ಕ ಪಾವತಿಸಿ, ಅರ್ಜಿ ಸಲ್ಲಿಸಿದ ಸರ್ವೇ ಕಾರ್ಯವನ್ನು ಪೂರ್ಣಗೊಳಿಸಲು ಇಲಾಖೆಯಲ್ಲಿನ ಮಾರ್ಗಸೂಚಿಗಳೇನು; (ವಿವರ ನೀಡುವುದು)

(ಇ) ಸರ್ವೇ ಕಾರ್ಯ ವಿಳಂಬದಿಂದಾಗಿ ರೈತರು ತೊಂದರೆಗೊಳಗಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ;

(ಈ) ಹಾಗಿದ್ದಲ್ಲಿ, ವಿಳಂಬ ತಪ್ಪಿಸಲು ಸರ್ಕಾರ ಕೈಗೊಂಡ ಕ್ರಮಗಳೇನು;

(ಉ) ರಾಜ್ಯದಲ್ಲಿ ಭೂಮಾಪಕರ ಕೊರತೆ ಇದೆಯೇ; ಕೊರತೆ ನೀಗಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಸಬ್‌ರಿಜಿಸ್ಟರ್ ಕಛೇರಿಗಳಲ್ಲಿ ಖಾಸಗಿ ದಲ್ಲಾಳಿಗಳ ಬಗ್ಗೆ

ಡಾ॥ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–

೨೦೬ (೨೯೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯದಲ್ಲಿ ಕೆಲಸ ನಿರ್ವಹಿಸುತ್ತಿರುವ ಉಪ ನೋಂದಣಾಧಿಕಾರಿ (ಸಬ್‌ರಿಜಿಸ್ಟರ್) ಗಳ ಸಂಖ್ಯೆ ಎಷ್ಟು;

(ಆ) ಈ ಉಪ ನೋಂದಣಾಧಿಕಾರಿ (ಸಬ್‌ರಿಜಿಸ್ಟರ್) ಗಳ ಕಛೇರಿಗಳಲ್ಲಿ ಖಾಸಗಿ ದಲ್ಲಾಳಿಗಳೊಂದಿಗೆ ಶಾಮೀಲಾಗಿ ನೋಂದಣಾಧಿಕಾರಿ (ಸಬ್‌ರಿಜಿಷ್ಟರ್) ಗಳು ನಿಯಮಗಳನ್ನು ಪಾಲಿಸದೆ ವ್ಯಾಪಕ ಭ್ರಷ್ಟಾಚಾರದಲ್ಲಿ ಭಾಗಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಬಂದಿದ್ದಲ್ಲಿ, ಕಳೆದ ೫ ವರ್ಷಗಳಿಂದ ಎಷ್ಟು ಜನ ಉಪ ನೋಂದಣಾಧಿಕಾರಿ (ಸಬ್‌ರಿಜಿಸ್ಟರ್) ಗಳ ಮೇಲೆ ಶಿಸ್ತು ಕ್ರಮ ಕೈಗೊಳ್ಳಲಾಗಿದೆ;

(ಈ) ಉಪ ನೋಂದಣಾಧಿಕಾರಿ (ಸಬ್‌ರಿಜಿಸ್ಟರ್) ಗಳ ವರ್ಗಾವಣೆಗೆ ಸರ್ಕಾರ ಅನುಸರಿಸುತ್ತಿರುವ ಮಾನದಂಡಗಳೇನು ?

## ಕಲಂ ೭೯A, ೭೯B ನಿಯಮ ಚಾಲ್ತಿ ಬಗ್ಗೆ

ಡಾ॥ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–

೨೦೭ (೨೯೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಂದಾಯ ಇಲಾಖೆಯಲ್ಲಿ ಕಲಂ ೭೯ಎ, ೭೯ಬಿ ನಿಯಮ ಚಾಲ್ತಿಯಲ್ಲಿದೆಯೇ;

(ಆ) ಕಳೆದ ೫ ವರ್ಷಗಳಿಂದ ಬೆಂಗಳೂರು ನಗರ ಮತ್ತು ಗ್ರಾಮಾಂತರ ಜಿಲ್ಲೆಗಳಲ್ಲಿ ಈ ಕಾಯ್ದೆ ಉಲ್ಲಂಘನೆ ಮಾಡಿರುವವರ ಮೇಲೆ ದಾಖಲಾದ ಮೊಕದ್ದಮೆಗಳ ಸಂಖ್ಯೆ ಎಷ್ಟು; (ವರ್ಷವಾರು ವಿವರಗಳನ್ನು ನೀಡುವುದು)

(ಇ) ಈ ಕಾಯ್ದೆಯನ್ನು ಉಲ್ಲಂಘಿಸಿದವರ ಜಮೀನನ್ನು ಸರ್ಕಾರ ಮುಟ್ಟುಗೋಲು ಹಾಕಿಕೊಂಡಿದೆಯೇ; *ವಿವರಗಳನ್ನು ಜಿಲ್ಲಾವಾರು ನೀಡುವುದು)

(ಈ) ಈ ನಿಯಮ ಉಲ್ಲಂಘಿಸಿದ ಅಧಿಕಾರಿ ಸರ್ಕಾರ ತೆಗೆದುಕೊಂಡ ಕ್ರಮಗಳೇನು?

## ಪರಿಶಿಷ್ಟ ಜಾತಿಯವರಿಗೆ ನೀಡಲಾಗುತ್ತಿರುವ ಸವಲತ್ತುಗಳ ಕುರಿತು

ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) :-

೨೦೮ (೩೯೯) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ (ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು) ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಡಾ॥ ಅಂಬೇಡ್ಕರ್ ಅಭಿವೃದ್ಧಿ ನಿಗಮದಿಂದ ಪರಿಶಿಷ್ಟ ಜಾತಿಯ ಜನಾಂಗದವರಿಗೆ ನೀಡಲಾಗುತ್ತಿರುವ ಸವಲತ್ತುಗಳಾವುವು;

(ಆ) ನಿಗಮದ ಎಲ್ಲಾ ಯೋಜನೆಗಳ ಮಾಹಿತಿ ನೀಡುವುದು;

(ಇ) ಹುಬ್ಬಳ್ಳಿ-ಧಾರವಾಡ, ಗದಗ, ಹಾವೇರಿ ಜಿಲ್ಲೆಯಲ್ಲಿ ಡಾ॥ ಅಂಬೇಡ್ಕರ್ ಅಭಿವೃದ್ಧಿ ನಿಗಮದಿಂದ ಸವಲತ್ತುಗಳನ್ನು ಪಡೆದಂತಹ ಫಲಾನುಭವಿಗಳ ಸಂಖ್ಯೆ ಎಷ್ಟು;

(ಈ) ೨೦೧೮-೧೯ ನೇ ಸಾಲಿನಲ್ಲಿ ಸದರಿ ನಿಗಮದಿಂದ ಸವಲತ್ತುಗಳನ್ನು ಪಡೆದಂತಹ ಫಲಾನುಭವಿಗಳ ಸಂಖ್ಯೆಯ ವಿವರವನ್ನು ಜಿಲ್ಲಾವಾರು ನೀಡುವುದು ?

## ಅಂತರ್ಜಾತಿ ವಿವಾಹದ ಪ್ರೋತ್ಸಾಹ ಧನದ ಬಗ್ಗೆ

ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

೨೦೯ (೨೧೯) ಮಾನ್ಯ ಉಪ ಮುಖ್ಯಮಂತ್ರಿಗಳು (ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು) ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದ ಮೂರು ವರ್ಷಗಳಿಂದ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ನೀಡಲಾಗುತ್ತಿರುವ ಅಂತರ್ಜಾತಿ ವಿವಾಹ ಪ್ರೋತ್ಸಾಹ ಧನಕ್ಕೆ ಸಂಬಂಧಿಸಿದಂತೆ ಇಲ್ಲಿಯವರೆವಿಗೂ ಎಷ್ಟು ಅರ್ಜಿಗಳು ಬಂದಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಆ ಪೈಕಿ ಎಷ್ಟು ಫಲಾನುಭವಿ ದಂಪತಿಗಳಿಗೆ ಪ್ರೋತ್ಸಾಹ ಧನ ನೀಡಲಾಗಿದೆ ? (ಜಿಲ್ಲಾವಾರು ಮಾಹಿತಿ ನೀಡುವುದು)

## ಶಿವಮೊಗ್ಗ ಜಿಲ್ಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆ ವ್ಯಾಪ್ತಿಯಲ್ಲಿರುವ ವಸತಿ ನಿಲಯಗಳ ಬಗ್ಗೆ

ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

೨೧೦ (೨೨೦) ಮಾನ್ಯ ಉಪ ಮುಖ್ಯಮಂತ್ರಿಗಳು (ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು) ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಶಿವಮೊಗ್ಗ ಜಿಲ್ಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆ ವ್ಯಾಪ್ತಿಯಲ್ಲಿ ನಡೆಯುತ್ತಿರುವ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಸತಿ ನಿಲಯಗಳ ಸಂಖ್ಯೆ ಎಷ್ಟು ; (ವಸತಿ ನಿಲಯಗಳಲ್ಲಿನ ದಾಖಲಾತಿ ಮತ್ತು ಹಾಜರಾತಿ ವಿವರ ನೀಡುವುದು)

(ಆ) ಶಿವಮೊಗ್ಗ ಜಿಲ್ಲೆಯಲ್ಲಿ ಒಟ್ಟು ಎಷ್ಟು ವಸತಿ ನಿಲಯಗಳಿವೆ ; ಅದರಲ್ಲಿ ಬಾಲಕಿಯರ ವಸತಿ ನಿಲಯ ಹಾಗೂ ಬಾಲಕರ ವಸತಿ ನಿಲಯಗಳೆಷ್ಟು ; ಈ ವಸತಿ ನಿಲಯಗಳಲ್ಲಿ ವಾರ್ಡನ್‌ಗಳು ಇದ್ದಾರೆಯೇ ; ಕಡಿಮೆ ಇದ್ದಲ್ಲಿ ವಾರ್ಡನ್‌ಗಳನ್ನು ತುಂಬಲು ಸರ್ಕಾರ ಯಾವ ಕ್ರಮ ಕೈಗೊಂಡಿರುತ್ತದೆ ;

(ಇ) ವಸತಿ ನಿಲಯಗಳು ಎಷ್ಟಿವೆ ; ಸ್ವಂತ ಕಟ್ಟಡ ಹೊಂದಿರುವ ಸಂಖ್ಯೆ ಎಷ್ಟು ; ಸ್ವಂತ ಕಟ್ಟಡ ನಿರ್ಮಿಸಲು ಯಾವ ಕ್ರಮ ಕೈಗೊಳ್ಳಲಾಗಿದೆ ;

(ಈ) ಪ್ರತಿ ವಿದ್ಯಾರ್ಥಿ/ವಿದ್ಯಾರ್ಥಿನಿಯರಿಗೆ ಒಂದು ತಿಂಗಳಿಗೆ ತಗುಲುವ ವೆಚ್ಚವೆಷ್ಟು ; ಈ ವೆಚ್ಚವನ್ನು ಹೆಚ್ಚಿಸುವ ಬಗ್ಗೆ ಸರ್ಕಾರ ಚಿಂತಿಸುತ್ತಿದೆಯೇ ?

## ರಾಜ್ಯದಲ್ಲಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಹಾಸ್ಟೆಲ್‌ಗಳ ಬಗ್ಗೆ

ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–

೨೧೧ (೨೨೧) ಮಾನ್ಯ ಉಪ ಮುಖ್ಯಮಂತ್ರಿಗಳು (ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು) ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಹಾಸ್ಟೆಲ್‌ಗಳಲ್ಲಿ ವಿದ್ಯಾರ್ಥಿಗಳಿಗೆ ಶುದ್ಧ ಕುಡಿಯುವ ನೀರು, ಮಲಗಲು ಮಂಚ, ಹಾಸಿಗೆ ದಿಂಬು ಮತ್ತು ಹೊದಿಕೆಗಳು ಸಾಕಷ್ಟು ಪ್ರಮಾಣದಲ್ಲಿ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಕೊರತೆಯನ್ನು ನೀಗಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಆ) ರಾಜ್ಯದಲ್ಲಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಹಲವಾರು ಹಾಸ್ಟೆಲ್‌ಗಳಲ್ಲಿ ವಿದ್ಯಾರ್ಥಿಗಳಿಗೆ ಸರಿಯಾದ ಸಮಯದಲ್ಲಿ, ಸರಿಯಾದ ಪ್ರಮಾಣದಲ್ಲಿ ಮುಂಜಾನೆಯ ಉಪಹಾರ, ಮಧ್ಯಾಹ್ನದ ಊಟ ಮತ್ತು ರಾತ್ರಿಯ ಊಟಗಳು ದೊರೆಯದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ವಿದ್ಯಾರ್ಥಿಗಳಿಗೆ ಸರಿಯಾದ ಸಮಯಕ್ಕೆ ಪೋಷಕಾಂಶಯುಕ್ತ ಗುಣಮಟ್ಟದ ಆಹಾರ ದೊರೆಯುವಂತಾಗಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಇ) ಈ ಹಾಸ್ಟೆಲ್‌ಗಳಲ್ಲಿ ಸೋಲಾರ್ ವ್ಯವಸ್ಥೆಯನ್ನು ಅಳವಡಿಸಲಾಗಿದೆಯೇ; ಇಲ್ಲವಾದಲ್ಲಿ, ಅಳವಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

## ಶಿವಮೊಗ್ಗ ಜಿಲ್ಲೆಯಲ್ಲಿನ ದೇವಸ್ಥಾನಗಳ ಜೀರ್ಣೋದ್ಧಾರಕ್ಕಾಗಿ ಅನುದಾನ ನೀಡಿರುವ ಕುರಿತು

ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–

೨೧೨ (೩೦೭) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಡನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಶಿವಮೊಗ್ಗ ಜಿಲ್ಲೆಯಲ್ಲಿ ಎಷ್ಟು ದೇವಸ್ಥಾನಗಳ ಜೀರ್ಣೋದ್ಧಾರಕ್ಕಾಗಿ ಸರ್ಕಾರದಿಂದ ಅನುದಾನ ನೀಡಲಾಗಿದೆ ; (ಕಳೆದ ಎರಡು ವರ್ಷಗಳ ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಜನಪ್ರತಿನಿಧಿಗಳಿಂದ ಹಾಗೂ ಸಾರ್ವಜನಿಕರಿಂದ ಅನುದಾನಕ್ಕಾಗಿ ಬೇಡಿಕೆಯನ್ನು ಸಲ್ಲಿಸುತ್ತಿದ್ದರೂ, ಅನುದಾನ ನೀಡದಿರುವುದರಿಂದ ಹೆಚ್ಚ ಹಣವನ್ನು ಆಯವ್ಯಯದಲ್ಲಿ ಪಡೆಯಲು ಅಗತ್ಯ ಕ್ರಮ ಕೈಗೊಳ್ಳಲಾಗುವುದೇ ;

(ಇ) ಈ ನಿಟ್ಟಿನಲ್ಲಿ ಸರ್ಕಾರ ಯಾವ ಕ್ರಮಗಳನ್ನು ಕೈಗೊಳ್ಳಲಿದೆ ?

## ಶಿವಮೊಗ್ಗ ಜಿಲ್ಲೆಯಲ್ಲಿ ಎಲ್ಲಾ ಗ್ರಾಮಗಳಿಗೆ ಸ್ಮಶಾನ ಮಂಜೂರು ಮಾಡುವ ಕುರಿತು

ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–

೨೧೩ (೩೦೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಿವಮೊಗ್ಗ ಮತ್ತು ದಾವಣಗೆರೆ ಜಿಲ್ಲೆಯ ಹೊನ್ನಾಳಿ ಮತ್ತು ಚನ್ನಗಿರಿ ತಾಲ್ಲೂಕುಗಳ ಎಲ್ಲಾ ಗ್ರಾಮಗಳಲ್ಲಿ ಸಾರ್ವಜನಿಕ ಸ್ಮಶಾನ ಮಂಜೂರು ಆಗಿದೆಯೇ ; ಸ್ಮಶಾನಗಳು ಇಲ್ಲದಿದ್ದಲ್ಲಿ, ಸ್ಮಶಾನಕ್ಕೆ ಜಾಗವನ್ನು ಕಾಯ್ದಿರಿಸಿರುವ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ;

(ಆ) ಕೆಲವು ಗ್ರಾಮ ಪಂಚಾಯಿತಿಗಳಲ್ಲಿ ಸಾರ್ವಜನಿಕ ಸ್ಮಶಾನ ಮಂಜೂರಾಗಿದ್ದು, ಸ್ಮಶಾನ ಜಾಗ ಗುರುತಿಸಲು ಸರ್ಕಾರಕ್ಕಿರುವ ಅಡೆತಡೆಗಳೇನು ;

(ಇ) ಸ್ಮಶಾನಗಳ ಅಭಿವೃದ್ಧಿಗೆ ರಸ್ತೆ, ನೀರು, ದೀಪದ ವ್ಯವಸ್ಥೆ ಮತ್ತು ಕಾಂಪೌಂಡ್ ವ್ಯವಸ್ಥೆಗಳನ್ನು ನೀಡಲು ಸರ್ಕಾರ ಯಾವ ಕ್ರಮಕೈಗೊಂಡಿದೆ ?

## ಸರ್ವೆ ಕಾರ್ಯ ತ್ವರಿತಗೊಳಿಸುವ ಬಗ್ಗೆ

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೨೧೪ (೨೯೨) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿ ಸರ್ವೆ ಕಾರ್ಯಗಳು ತುಂಬಾ ವಿಳಂಬವಾಗುತ್ತಿರುವುದರಿಂದ ರೈತರಿಗೆ ತೊಂದರೆ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಆ) ಹಾಗಿದಲ್ಲಿ ಸರ್ವೆ ಕಾರ್ಯವು ವಿಳಂಬವಾಗಲು ಕಾರಣವೇನು ; (ವಿವರ ನೀಡುವುದು)

(ಇ) ರೈತರಿಗೆ ಸರ್ವೆ ಕಾರ್ಯವನ್ನು ತುರ್ತಾಗಿ ಮಾಡಿಸಿ ಅನುಕೂಲ ಮಾಡಿಕೊಡಲು ಸರ್ಕಾರ ಕೈಗೊಂಡ ಕ್ರಮಗಳೇನು ; ಯಾವ ಕಾಲಮಿತಿಯಲ್ಲಿ ಕ್ರಮ ಕೈಗೊಳ್ಳಲಾಗುವುದು ? (ಸಂಪೂರ್ಣ ವಿವರ ಒದಗಿಸುವುದು)

## ಲೋಕೋಪಯೋಗಿ ಇಲಾಖೆಯಿಂದ ಭೂ ಸ್ವಾಧೀನ ಮಾಡಿಕೊಂಡಿರುವ ಬಗ್ಗೆ

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೨೧೫ (೨೯೩) ಮಾನ್ಯ ಉಪ ಮುಖ್ಯಮಂತ್ರಿಗಳು (ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು) ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯ ಔರದ್ ತಾಲ್ಲೂಕಿನ ಸರ್ವೆ ನಂ. ೧೬೩ ರಲ್ಲಿನ ಜಮೀನನ್ನು ಲೋಕೋಪಯೋಗಿ ಇಲಾಖೆಯ ಪ್ರವಾಸಿ

ಮಂದಿರ ನಿರ್ಮಾಣಕ್ಕೆ ಭೂ ಮಾಲೀಕರಿಂದ ಯಾವಾಗ ಭೂಸ್ವಾಧೀನ ಮಾಡಿಕೊಳ್ಳಲಾಗಿದೆ ; (ಭೂ ಸ್ವಾಧೀನ ಮಾಡಿಕೊಂಡಿದ್ದಲ್ಲಿ, ದಿನಾಂಕ ಮತ್ತು ಗುಂಟೆವಾರು, ಒಪ್ಪಂದದ ಕರಾರು ಪತ್ರದೊಂದಿಗೆ ಸ್ಪಷ್ಟ ಮಾಹಿತಿ ನೀಡುವುದು)

(ಆ) ಹಾಗಿದ್ದಲ್ಲಿ, ಈ ಸರ್ವೆ ನಂಬರಿನಲ್ಲಿ ಪ್ರವಾಸಿಮಂದಿರ ನಿರ್ಮಿಸಿದ ನಂತರ ಲೋಕೋಪಯೋಗಿ ಇಲಾಖೆಯ ಅಧಿಕಾರಿಗಳು ಅಧಿಕಾರ ದುರಪಯೋಗ ಮಾಡಿಕೊಂಡು ಅಳತೆ ಮಾಡದೆ ಹಾಗೂ ಭೂ ಮಾಲೀಕರ ಗಮನಕ್ಕೆ ತರದೆ ಅನಧಿಕೃತವಾಗಿ ಕಾಂಪೌಂಡ್‌ವಾಲ್ ನಿರ್ಮಿಸಿದ್ದು ನಿಜವಲ್ಲವೇ ; (ಮಾಹಿತಿ ನೀಡುವುದು)

(ಇ) ಸರ್ವೆ ನಂ. ೧೬೩ ರಲ್ಲಿ ಲೋಕೋಪಯೋಗಿ ಇಲಾಖೆಯವರು ಅತಿಕ್ರಮಣ ಮಾಡಿಕೊಂಡು ನಿರ್ಮಿಸಿದ ಕಾಂಪೌಂಡ್‌ವಾಲ್ ತೆರವುಗೊಳಿಸಿ ಭೂ ಮಾಲೀಕರಿಗೆ ಎಷ್ಟು ದಿನಗಳಲ್ಲಿ ವಶಕ್ಕೆ ನೀಡಲಾಗುವುದು ? (ಸಂಪೂರ್ಣ ಮಾಹಿತಿ ನೀಡುವುದು)

## ಒತ್ತುವರಿಯಾದ ಸ್ಮಶಾನ ಭೂಮಿಯನ್ನು ತೆರವುಗೊಳಿಸುವ ಬಗ್ಗೆ

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೨೧೬ (೨೯೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿರುವ ರುದ್ರಭೂಮಿ/ಸ್ಮಶಾನಗಳ ಸಂಖ್ಯೆ ಎಷ್ಟು ; (ಊರಿನ ಹೆಸರಿನೊಂದಿಗೆ ತಾಲ್ಲೂಕುವಾರು, ಧರ್ಮವಾರು ವಿವರ ಒದಗಿಸುವುದು)

(ಆ) ಹಿಂದೂ ರುದ್ರಭೂಮಿ/ಸ್ಮಶಾನದ ಕೊರತೆಯಿಂದ ಶವ ಸಂಸ್ಕಾರಕ್ಕೆ ಆಗುತ್ತಿರುವ ತೊಂದರೆ ಮತ್ತು ಇಂತಹ ಕೊರತೆಗೆ

ಕಾರಣವಾಗುತ್ತಿರುವ ಹಲವು ಅಂಶಗಳನ್ನು ಸರ್ಕಾರವು ಗಂಭೀರವಾಗಿ ಪರಿಗಣಿಸಿದೆಯೇ ; ಹಾಗಿದ್ದಲ್ಲಿ, ವಿವರ ನೀಡುವುದು ;

(ಇ) ಗೌರವಯುತವಾದ ಶವ ಸಂಸ್ಕಾರ ನಡೆಸುವ ನಿಟ್ಟಿನಲ್ಲಿರುವ ಕೊರತೆಯನ್ನು ನೀಗಲು ಸರ್ಕಾರವು ಕೈಗೊಂಡ ಕ್ರಮಗಳೇನು ; (ಮಾಹಿತಿ ಒದಗಿಸಲು ವಿವರ ನೀಡುವುದು)

(ಈ) ಒತ್ತುವರಿಯಾಗಿರುವ ಸ್ಮಶಾನದ ಭೂಮಿಯನ್ನು ತೆರವುಗೊಳಿಸಿ ವಾಪಸ್ ಪಡೆದಿರುವ ಭೂಮಿಯ ವಿಸ್ತೀರ್ಣವೆಷ್ಟು ?(ತಾಲ್ಲೂಕುವಾರು ವಿವರ ನೀಡುವುದು)

## ಬ್ಲಾಕ್ ಆಗಿರುವ ಮನೆಗಳನ್ನು ಪುನರ್ ಪ್ರಾರಂಭಿಸುವ ಬಗ್ಗೆ

ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–

೨೧೭ (೨೯೧) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ಬೀದರ್ ಜಿಲ್ಲೆಯಲ್ಲಿ ವಿವಿಧ ಯೋಜನೆಗಳಡಿ ಆಯ್ಕೆಯಾದ ವಸತಿ ಫಲಾನುಭವಿಗಳ ಸಂಖ್ಯೆ ಎಷ್ಟು ; (ಗ್ರಾಮ ಪಂಚಾಯಿತಿಗಳವಾರು, ವರ್ಷವಾರು ಮಾಹಿತಿ ನೀಡುವುದು)

(ಆ) ಮನೆಗಳನ್ನು ಸಕಾಲದಲ್ಲಿ ನಿರ್ಮಿಸಿಕೊಳ್ಳದ ಫಲಾನುಭವಿಗಳ ಮನೆಗಳು ಬ್ಲಾಕ್ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅವುಗಳನ್ನು ಪುನರ್ ಪ್ರಾರಂಭ ಮಾಡುವ ಚಿಂತನೆ ಸರ್ಕಾರದ ಮುಂದಿದೆಯೇ ; (ವಿವರ ಒದಗಿಸುವುದು)

(ಇ) ಬೀದರ್ ಜಿಲ್ಲೆಯಲ್ಲಿ ಕಳೆದ ೩ ವರ್ಷಗಳಿಂದ ೨೦೨೦–ಜನವರಿ ೩೧ ವರೆಗೆ ಬ್ಲಾಕ್ ಆಗಿರುವ ಮನೆ ಹಾಗೂ ಪ್ರಾರಂಭ ಮಾಡಿರುವ ಮನೆಗಳೆಷ್ಟು ; (ಗ್ರಾಮ ಪಂಚಾಯತ್‌ವಾರು, ಫಲಾನುಭವಿಗಳವಾರು ವಿವರ ನೀಡುವುದು)

(ಈ) ಬೀದರ್ ಜಿಲ್ಲೆಯಲ್ಲಿ ಲಾಕ್–ಓಪನ್ ಮಾಡಿದ ನಂತರ ಎಷ್ಟು ಮನೆಗಳನ್ನು ನಿರ್ಮಿಸಲಾಗಿದೆ ; ಫಲಾನುಭವಿಗಳಿಗೆ ಆದೇಶದ ಪತ್ರ ಒದಗಿಸಲಾಗಿದೆಯೇ ? (ಮಾಹಿತಿ ನೀಡುವುದು)

## ರಾಜ್ಯದಲ್ಲಿ ವಸತಿ ರಹಿತರಿಗೆ ಹಾಗೂ ಬಡವರಿಗೆ ವಿವಿಧ ವಸತಿ ಯೋಜನೆಯಡಿ ಮನೆಗಳನ್ನು ನಿರ್ಮಿಸುವ ಕುರಿತು

ಶ್ರೀ ಹೆಚ್.ಎಂ. ರಮೇಶ್ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–

೨೧೮ (೨೩೫) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ವಸತಿ ರಹಿತರಿಗೆ ಹಾಗೂ ಬಡವರಿಗೆ ವಿವಿಧ ವಸತಿ ಯೋಜನೆಗಳಡಿ ಮನೆಗಳನ್ನು ಮಂಜೂರು ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಯಾವ ಯಾವ ಯೋಜನೆಗಳಡಿ ಹಾಗೂ ಯಾವ ಯಾವ ನಿಗಮದಿಂದ ಮನೆಗಳನ್ನು ಮಂಜೂರು ಮಾಡಲಾಗುತ್ತಿದೆ ;

(ಇ) ಮನೆ ಮಂಜೂರು ಮಾಡಲು ನಿಗದಿಪಡಿಸಿರುವ ಮಾನದಂಡಗಳೇನು; (ವಿವರ ನೀಡುವುದು)

(ಈ) ಕಳೆದ ಮೂರು ವರ್ಷಗಳಲ್ಲಿ ವಿವಿಧ ವಸತಿ ಯೋಜನೆಗಳಡಿ ವಿವಿಧ ನಿಗಮಗಳಿಂದ ಮಂಜೂರಾಗಿರುವ ಒಟ್ಟು ಮನೆಗಳು ಎಷ್ಟು ; ಯೋಜನೆವಾರು/ನಿಗಮವಾರು/ಜಿಲ್ಲಾವಾರು/ ಭೌತಿಕ/ ಆರ್ಥಿಕ ಪ್ರಗತಿಯ ವಿವರಗಳ ಪತ್ರೇಕ ಮಾಹಿತಿ ನೀಡುವುದು ;

(ಉ) ಕಳೆದ ೩ ವರ್ಷಗಳಲ್ಲಿ ಮಂಜೂರಾದ ಮನೆಗಳ ನಿರ್ಮಾಣದ ಕಾಮಗಾರಿ, ಪೂರ್ಣಗೊಂಡಿರುವ ಮನೆಗಳ ಸಂಖ್ಯೆ ಎಷ್ಟು ; ಪೂರ್ಣಗೊಳ್ಳಲು ಬಾಕಿ ಇರುವ ಮನೆಗಳೆಷ್ಟು ; ಬಾಕಿ ಇರಲು ಕಾರಣಗಳೇನು ;

(ಊ) ಅನುದಾನದ ಕೊರತೆ ಇರುವ ಕಾರಣ ನೀಡಿ ಬ್ಲಾಕ್ ಮಾಡಿರುವ ಮನೆಗಳ ಸಂಖ್ಯೆ ಎಷ್ಟು ; ಬ್ಲಾಕ್ ಮಾಡಿರುವುದರಿಂದ ವಸತಿ ರಹಿತರು ತೊಂದರೆಗೊಳಗಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಸಂಬಂಧ ಸರ್ಕಾರ ಕೈಗೊಂಡ ಕ್ರಮಗಳೇನು ?

## ಸರ್ವೆ ನಂ. ೩೦ ಸರ್ಕಾರಿ ಜಾಗ ಹಂಚಿಕೆ ಮಾಡಿರುವ ಕುರಿತು

ಶ್ರೀ ಹೆಚ್.ಎಂ. ರಮೇಶ್ ಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು):-

೨೧೯ (೨೩೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು ಉತ್ತರ ತಾಲ್ಲೂಕು, ಕಸಬಾ ಹೋಬಳಿಯ ಹೆಣ್ಣೂರು ಗ್ರಾಮದ ಸರ್ವೆ ನಂಬರ್ ೩೦, ಸರ್ಕಾರಿ ಜಾಗವನ್ನು ಯಾವ ಉದ್ದೇಶಕ್ಕಾಗಿ ಯಾರಿಗೆ ಹಂಚಿಕೆ ಮಾಡಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಆ) ಕಂದಾಯ ಇಲಾಖೆಯು ಈ ಜಾಗವನ್ನು ಯಾವ ಮಾನದಂಡಗಳನ್ನು ಆಧರಿಸಿ ಖಾಸಗಿ ವ್ಯಕ್ತಿಗೆ ಹಂಚಿಕೆ ಮಾಡಲಾಗಿದೆ ; ಹಂಚಿಕೆಯಾದ ಭೂಮಿಗಿಂತ ಹೆಚ್ಚು ಪಟ್ಟು ಒತ್ತುವರಿ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಸದರಿ ಸರ್ಕಾರಿ ಜಾಗದಲ್ಲಿ ಖಾಸಗಿ ವಾಣಿಜ್ಯ ವ್ಯವಹಾರಗಳನ್ನು ನಡೆಸಲು ಕಟ್ಟಡ ಕಾಮಗಾರಿ ಪ್ರಾರಂಭಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಅನುಮತಿ ನೀಡಿದೆಯೇ ? (ವಿವರ ನೀಡುವುದು)

## ರಾಜ್ಯದಲ್ಲಿ ಕೃಷಿಯನ್ನು ಉತ್ತೇಜಿಸಲು ಸರ್ಕಾರ ಕೈಗೊಂಡಿರುವ ಕಾರ್ಯಕ್ರಮ ಕುರಿತು

ಶ್ರೀ ಹೆಚ್.ಎಂ. ರಮೇಶ್ ಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು):–

೨೨೦ (೨೩೭೮) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕೃಷಿಯನ್ನು ಉತ್ತೇಜಿಸಲು ಸರ್ಕಾರ ಯಾವ ಯಾವ ಕಾರ್ಯಕ್ರಮಗಳನ್ನು ರೂಪಿಸಿದೆ ; (ವಿವರ ನೀಡುವುದು)

(ಆ) ರೈತರಿಗೆ ಯಾವ ಯಾವ ಕೃಷಿ ಉಪಕರಣಗಳನ್ನು ಕೊಳ್ಳಲು ಎಷ್ಟೆಷ್ಟು ಪ್ರೋತ್ಸಾಹ ಧನ ನೀಡಲಾಗುತ್ತಿದೆ ; (ವಿವರ ನೀಡುವುದು)

(ಇ) ಸರ್ಕಾರದಿಂದ ನೀಡುವ ಪ್ರೋತ್ಸಾಹ ಧನ ರೈತರಿಗೆ ತಲುಪಿದೆಯೇ; ಇಲ್ಲದಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಪ್ರೋತ್ಸಾಹ ಧನವನ್ನು ತಲುಪಿಸಲು ವ್ಯವಸ್ಥೆ ಮಾಡಲಾಗುವುದು ?

## ಪರಿಶಿಷ್ಟ ಜಾತಿ ಮತ್ತು ಪಂಗಡದವರಿಗೆ ಗಂಗಾಕಲ್ಯಾಣ ಯೋಜನೆಯಡಿಯಲ್ಲಿ ಕೊರಿಸಿದ ಕೊಳವೆ ಬಾವಿ ಕುರಿತು

ಶ್ರೀ ಹೆಚ್.ಎಂ. ರಮೇಶ್ ಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು):–

೨೨೧ (೨೩೯) ಮಾನ್ಯ ಉಪಮುಖ್ಯಮಂತ್ರಿಗಳು (ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು) ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಳೆದ ೩ ವರ್ಷಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪಂಗಡದವರಿಗೆ ಗಂಗಾ ಕಲ್ಯಾಣ ಯೋಜನೆಯಲ್ಲಿ ಕೊರೆಯಿಸಲಾದ ಕೊಳವೆ ಬಾವಿಗಳೆಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಕೊರೆಸಲಾದ ಕೊಳವೆ ಬಾವಿಗಳಲ್ಲಿ ವಿಫಲವಾದ ಹಾಗೂ ಸಫಲವಾದ ಕೊಳವೆ ಬಾವಿಗಳೆಷ್ಟು ; (ವಿವರ ನೀಡುವುದು)

(ಇ) ಈ ಯೋಜನೆಯಲ್ಲಿ ಕೊರೆಸಿದ ಕೊಳವೆ ಬಾವಿಗಳಲ್ಲಿ ಎಷ್ಟು ಕೊಳವೆ ಬಾವಿಗಳಿಗೆ ಮೋಟಾರ್ ಜೋಡಿಸಿ ವಿದ್ಯುಚ್ಛಕ್ತಿ ಒದಗಿಸಲಾಗಿದೆ ;

(ಈ) ಉಳಿದ ಕೊಳವೆ ಬಾವಿಗಳಿಗೆ ಯಾವಾಗ ಮೋಟಾರ್ ಜೋಡಿಸಿ ವಿದ್ಯುತ್ ಸಂಪರ್ಕ ಕಲ್ಪಿಸಲಾಗುವುದು ?

## ರಾಜ್ಯದಲ್ಲಿ ತಹಶೀಲ್ದಾರರು ಮತ್ತು ಭೂ ಮಾಪಕರ ಕೊರತೆ ಇರುವ ಬಗ್ಗೆ

ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) :–

೨೨೨ (೨೭೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ತಹಶೀಲ್ದಾರರು ಮತ್ತು ಭೂ ಮಾಪಕರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸದರಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ; (ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿ ಕಂದಾಯ ಇಲಾಖೆಯಡಿ ಬರುವ ೪ ಪ್ರಾದೇಶಿಕ ವಿಭಾಗಗಳ ಅಡಿಯಲ್ಲಿ ಬರುವ ಜಿಲ್ಲೆಗಳಲ್ಲಿ ತಹಶೀಲ್ದಾರರು ಮತ್ತು ಭೂ ಮಾಪಕರ ಮಂಜೂರಾದ ಒಟ್ಟು ಹುದ್ದೆಗಳೆಷ್ಟು ; (ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಆ ಪೈಕಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ತಹಶೀಲ್ದಾರರು ಮತ್ತು ಭೂ ಮಾಪಕರ ಸಂಖ್ಯೆ ಎಷ್ಟು ; ಎಷ್ಟು ಹುದ್ದೆಗಳು ಖಾಲಿ ಇವೆ ? (ಪ್ರಾದೇಶಿಕ ವಿಭಾಗವಾರು, ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ನೀಡುವುದು)

## ಬೆಂಗಳೂರು ನಗರ ವ್ಯಾಪ್ತಿಯಲ್ಲಿ ಕೃಷಿ ಜಮೀನುಗಳಲ್ಲಿ ಅನಧಿಕೃತ ಬಡಾವಣೆಗಳ ಬಗ್ಗೆ

ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) :–

೨೨೩ (೨೮೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರ ಜಿಲ್ಲೆ ವ್ಯಾಪ್ತಿಯಲ್ಲಿ ಕೃಷಿ ಜಮೀನುಗಳಲ್ಲಿ ಅನಧಿಕೃತವಾಗಿ ಯಾವುದೇ ಭೂ ಪರಿವರ್ತನೆಯಾಗದೆ ಎಷ್ಟು ಬಡಾವಣೆಗಳು/ನಿವೇಶನಗಳನ್ನು ರಚಿಸಲಾಗಿದೆ ; ರಚಿಸಿದ್ದಲ್ಲಿ, ತಾಲ್ಲೂಕುವಾರು, ಹೋಬಳಿವಾರು, ಗ್ರಾಮವಾರು ಮಾಹಿತಿ ನೀಡುವುದು ;

(ಆ) ಅನಧಿಕೃತ ಬಡಾವಣೆಗಳ ಮೇಲೆ ಭೂ ಪರಿವರ್ತನೆ ಇಲ್ಲದೆ ಇರತಕ್ಕಂತ ಕೃಷಿ ಜಮೀನುಗಳ ಮೇಲೆ ನಿರ್ಮಾಣವಾಗಿರುವ ಹಳೆಯ ಮತ್ತು ಹೊಸ ಬಡಾವಣೆಗಳ ಮೇಲೆ ಕಾನೂನಿನಡಿಯಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)

## ಲೋಕೋಪಯೋಗಿ ಇಲಾಖೆಯಲ್ಲಿ ಕಾರ್ಯಪಾಲಕ ಇಂಜಿನಿಯರ್ ಹುದ್ದೆಗಳ ಬಗ್ಗೆ

ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) :–

೨೨೪ (೨೮೧) ಮಾನ್ಯ ಉಪಮುಖ್ಯಮಂತ್ರಿಗಳು (ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು) ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಲೋಕೋಪಯೋಗಿ ಇಲಾಖೆಯಲ್ಲಿ ಮಂಜೂರಾದ/ಅಗತ್ಯವಿರುವ ಸಂಖ್ಯೆಗಿಂತ ಹೆಚ್ಚುವರಿಯಾಗಿ ನಿಯಮ ಬಾಹಿರ ಪದೋನ್ನತಿಯನ್ನು ನೀಡಲಾಗಿದೆಯೇ ; ಕಾರ್ಯಪಾಲಕ ಇಂಜಿನಿಯರುಗಳ ಮಂಜೂರಾದ ಹುದ್ದೆಗಳು ೬೦೦, ಪದೋನ್ನತಿ ನೀಡಿರುವುದು ೮೦೦, ಇದೇ ರೀತಿಯಲ್ಲಿ ಎಲ್ಲಾ ದರ್ಜೆಯ ಇಂಜಿನಿಯರ್‌ಗಳ ಪದೋನ್ನತಿ ನೀಡಲಾಗಿದೆಯೇ ; (ವಾಸ್ತವ ಅಂಕಿ–ಅಂಶಗಳನ್ನು ನೀಡುವುದು)

(ಆ) ಲೋಕೋಪಯೋಗಿ ಇಲಾಖೆಯಲ್ಲಿ ಹುದ್ದೆ ನಿರೀಕ್ಷಣೆಯಲ್ಲಿರುವ ಇಂಜಿನಿಯರ್‌ಗಳ ದರ್ಜೆವಾರು ಸಂಖ್ಯೆ ಎಷ್ಟು ; ಸರ್ಕಾರದ ಮೇಲೆ ಆಗುವ ಹಣಕಾಸಿನ ಹೊರೆ ಎಷ್ಟು ; ಅಂದಾಜಿನ ಪ್ರಕಾರ ಸುಮಾರು ೫೦೦ ವಿವಿಧ ದರ್ಜೆಯ ಇಂಜಿನಿಯರ್‌ಗಳ ಹುದ್ದೆ ಇಲ್ಲದಿರುವುದು ನಿಜವೇ ; (ಅಂಕಿ–ಅಂಶಗಳನ್ನು ನೀಡುವುದು)

(ಇ) ಮಾನ್ಯ ಮುಖ್ಯಮಂತ್ರಿಗಳಿಂದ ಕಡತದಲ್ಲಿ ವರ್ಗಾವಣೆ ಆದೇಶ ನೀಡಿದಂತಹ ಪ್ರಕರಣಗಳಲ್ಲಿ ಮರು ಸ್ಥಳ ನಿಯುಕ್ತಿಗಾಗಿ ಮಂತ್ರಿಗಳಿಗೆ ಕಡತ ಸಲ್ಲಿಸುವಂತಹ ಸಂಪ್ರದಾಯ ಪಾಲಿಸಲಾಗುತ್ತಿದೆಯೇ ; ಇದ್ದಲ್ಲಿ, ಇದರಿಂದ ವಿಳಂಬ ಮತ್ತು ಭ್ರಷ್ಟಾಚಾರ ಹೆಚ್ಚುವುದಿಲ್ಲವೇ ? (ಸಂಪೂರ್ಣ ಮಾಹಿತಿ ನೀಡುವುದು)

## ಕಂದಾಯ ಇಲಾಖೆಯಲ್ಲಿನ ಸರ್ವೇಯರ್‌ಗಳ ಕಾರ್ಯ ಮತ್ತು ನೇಮಕಾತಿ ಬಗ್ಗೆ

ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–

೨೨೫ (೨೧೪) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಂದಾಯ ಇಲಾಖೆಯಲ್ಲಿ ಮಂಜೂರಾಗಿರುವ ಒಟ್ಟು ಸರ್ವೇಯರ್ ಹುದ್ದೆಗಳೆಷ್ಟು ; ಇದರಲ್ಲಿ ಭರ್ತಿಯಾಗಿರುವ ಹುದ್ದೆ ಎಷ್ಟು ; ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಸರ್ವೇಯರ್‌ಗಳು ಸರ್ವೇಕಾರ್ಯವನ್ನು ವಿಳಂಬ ಮಾಡುತ್ತಿರುವುದರಿಂದ ರೈತರಿಗೆ ಮತ್ತು ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಖಾಲಿ ಹುದ್ದೆಗಳನ್ನು ನೇಮಕಾತಿ ಮಾಡಿ ಈ ಸಮಸ್ಯೆಯನ್ನು ಸರಿಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ಜಿಲ್ಲಾಧಿಕಾರಿಗಳ ನ್ಯಾಯಾಲಯಗಳಲ್ಲಿ ಬಾಕಿ ಇರುವ ಪ್ರಕರಣಗಳ ಬಗ್ಗೆ

ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–

೨೨೬ (೨೧೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಿಂದ ರಾಜ್ಯದ ಜಿಲ್ಲಾಧಿಕಾರಿಗಳ ನ್ಯಾಯಾಲಯದಲ್ಲಿ ಬಾಕಿ ಇರುವ ಪ್ರಕರಣಗಳೆಷ್ಟು ; ಇವುಗಳಲ್ಲಿ ವಿಲೇವಾರಿಯಾದ ಪ್ರಕರಣಗಳೆಷ್ಟು ; (ವರ್ಷವಾರು, ಜಿಲ್ಲಾವಾರು ವಿವರ ನೀಡುವುದು)

(ಆ) ಬಾಕಿ ಇರುವ ಪ್ರಕರಣಗಳನ್ನು ಶೀಘ್ರಗತಿಯಲ್ಲಿ ವಿಲೇವಾರಿ ಮಾಡಲು ಸರ್ಕಾರದ ಕ್ರಮಗಳೇನು ; (ವಿವರ ನೀಡುವುದು)

(ಇ) ಬಾಕಿ ಇರುವ ಪ್ರಕರಣಗಳನ್ನು ಶೀಘ್ರ ವಿಲೇ ಮಾಡಲು ಲೋಕ ಅದಾಲತ್‌ಗಳನ್ನು ನಡೆಸುವ ಬಗ್ಗೆ ಸರ್ಕಾರದ ನಿಲುವೇನು ;

(ಈ) ಜಿಲ್ಲೆಗಳಲ್ಲಿ ಜಿಲ್ಲಾಧಿಕಾರಿಗಳಿಗೆ ಒತ್ತಡದ ಕೆಲಸಗಳು ಹೆಚ್ಚಿರುವುದರಿಂದ ಈ ಜಿಲ್ಲಾಧಿಕಾರಿಗಳ ನ್ಯಾಯಾಲಯಕ್ಕೆ ಬೇರೆ ಅಧಿಕಾರಿಗಳನ್ನು ನೇಮಿಸಲು ಇರುವ ತೊಡಕುಗಳೇನು ? (ವಿವರ ನೀಡುವುದು)

## ಮಡಿಕೇರಿ ಮಿನಿ ವಿಧಾನಸೌಧದ ಕಾಮಗಾರಿ ಅಪೂರ್ಣಗೊಂಡಿರುವ ಬಗ್ಗೆ

ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–

೨೨೭ (೨೩೨) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಡಗು ಜಿಲ್ಲೆಯ ಮಡಿಕೇರಿಯಲ್ಲಿ ನಿರ್ಮಾಣಗೊಳ್ಳುತ್ತಿರುವ ಮಿನಿ ವಿಧಾನಸೌಧಕ್ಕೆ ೨೦೧೬ರಲ್ಲಿ ಅಡಿಪಾಯ ಹಾಕಲಾಗಿದ್ದು, ಇನ್ನೂ ಸಹ ಕೆಲಸ ಸಂಪೂರ್ಣಗೊಳ್ಳದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ವಿಳಂಬಕ್ಕೆ ಕಾರಣಗಳೇನು; (ವಿವರ ನೀಡುವುದು)

(ಆ) ಇದು ಸಂಪೂರ್ಣಗೊಳ್ಳಲು ಎಷ್ಟು ಸಮಯಬೇಕು ; (ಗುತ್ತಿಗೆದಾರರ ವಿವರ ಹಾಗೂ ಇವರಿಗೆ ವಿಧಿಸಿರುವ ಷರತ್ತು ನಿಬಂಧನೆಗಳ ವಿವರ ನೀಡುವುದು)

(ಇ) ಪ್ರಸ್ತುತ ಈ ಕಾಮಗಾರಿಯು ಯಾವ ಹಂತದಲ್ಲಿದೆ ಮತ್ತು ಯಾವಾಗ ಈ ಕಾಮಗಾರಿಯನ್ನು ಸಂಪೂರ್ಣಗೊಳಿಸಲಾಗುವುದು? (ಪೂರ್ಣ ಮಾಹಿತಿ ನೀಡುವುದು)

## ವಿಜಯಪುರ–ಬಾಗಲಕೋಟೆ ಜಿಲ್ಲೆಗಳಲ್ಲಿ ಪ್ರವಾಹದಿಂದ ಉಂಟಾದ ಹಾನಿಯ ಕುರಿತು

ಶ್ರೀ ಸುನೀಲ್ ಗೌಡ ಬಸನಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–

೨೨೮ (೨೦೨) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಜಯಪುರ–ಬಾಗಲಕೋಟೆ ಜಿಲ್ಲೆಗಳಲ್ಲಿ ೨೦೧೯ರ ಆಗಸ್ಟ್ ಮತ್ತು ಸೆಪ್ಟೆಂಬರ್ ತಿಂಗಳುಗಳಲ್ಲಿ ವಿವಿಧ ನದಿಗಳ ಪ್ರವಾಹ ಹಾಗೂ ಮಳೆಯಿಂದಾಗಿ ಎಷ್ಟು ಗ್ರಾಮಗಳು ಮುಳುಗಡೆಯಾಗಿವೆ ; ಇದರಿಂದಾಗಿ ಒಟ್ಟು ಎಷ್ಟು ಹಾನಿ ಸಂಭವಿಸಿದೆ ; ಜನ ಮತ್ತು ಜಾನುವಾರುಗಳ ಪ್ರಾಣ ಹಾನಿ ಎಷ್ಟು ; (ಸಂಪೂರ್ಣ ವಿವರಗಳನ್ನು ನೀಡುವುದು)

(ಆ) ಪ್ರವಾಹದಿಂದಾಗಿ ಒಟ್ಟು ಎಷ್ಟು ಪ್ರಮಾಣದಲ್ಲಿ ರೈತರ ಬೆಳೆ ಹಾನಿ ಆಗಿದೆ ; ಎಷ್ಟು ಮನೆಗಳು ಸಂಪೂರ್ಣವಾಗಿ ಹಾನಿ ಆಗಿವೆ ಮತ್ತು ಎಷ್ಟು ಮನೆಗಳು ಭಾಗಶಃ ಹಾನಿಯಾಗಿವೆ ; (ಗ್ರಾಮವಾರು ಮಾಹಿತಿ ನೀಡುವುದು)

(ಇ) ಪುನರ್ ವಸತಿ ಕಲ್ಪಿಸಲಾದ ಗ್ರಾಮಗಳ ಸಂಖ್ಯೆ ಎಷ್ಟು ಮತ್ತು ಆ ಗ್ರಾಮಗಳು ಯಾವುವು ; ಮತ್ತು ಎಷ್ಟು ಗ್ರಾಮಗಳನ್ನು ಹಾಗೂ ಜನರನ್ನು ಸ್ಥಳಾಂತರಿಸಲಾಗಿದೆ ;

(ಈ) ಈ ಕುರಿತು ಕೈಗೊಂಡ ಪರಿಹಾರ ಕ್ರಮಗಳು ಏನು ; ರೈತರಿಗೆ ನೀಡಲಾದ ಬೆಳೆ ನಷ್ಟ ಪರಿಹಾರ ಎಷ್ಟು ; ಎಷ್ಟು ಮನೆಗಳನ್ನು ನಿರ್ಮಾಣ ಮಾಡಲಾಗಿದೆ ; ಪುನರ್ ವಸತಿ ಶೆಡ್‌ಗಳಲ್ಲಿ ಜನರಿಗೆ ಒದಗಿಸಲಾದ ಮೂಲಭೂತ ಸೌಲಭ್ಯಗಳು ಯಾವುವು ;

(ಉ) ಇನ್ನು ಎಷ್ಟು ಗ್ರಾಮಗಳನ್ನು ಸ್ಥಳಾಂತರ ಮಾಡಬೇಕಾಗಿದೆ ;

(ಊ) ಪ್ರವಾಹದಿಂದ ಹಾನಿಗೊಳಗಾದ ಶಾಲೆಗಳ ಸಂಖ್ಯೆ ಎಷ್ಟು ; ಶಾಲೆಗಳ ದುರಸ್ಥಿಗೆ ಯಾವ ಕ್ರಮ ಕೈಗೊಳ್ಳಲಾಗಿದೆ ; ಎಷ್ಟು ಶಾಲೆಗಳನ್ನು ದುರಸ್ಥಿಗೊಳಿಸಲಾಗಿದೆ ಹಾಗೂ ಇದಕ್ಕಾಗಿ ಬಿಡುಗಡೆಯಾದ ಹಣ ಎಷ್ಟು ;

(ಋ) ಪ್ರವಾಹದಿಂದ ಹಾನಿಗೊಳಗಾದ ರಸ್ತೆ ಮತ್ತು ಸೇತುವೆಗಳ ವಿವರ ನೀಡುವುದು ಮತ್ತು ಅವುಗಳ ದುರಸ್ಥಿಗೆ ಕೈಗೊಂಡ ಕ್ರಮಗಳೇನು ಮತ್ತು ಬಿಡುಗಡೆಯಾದ ಹಣ ಎಷ್ಟು ?

## ನ್ಯಾಯಮೂರ್ತಿ ಎ.ಜೆ. ಸದಾಶಿವ ಆಯೋಗದ ವರದಿ ಕುರಿತು

**ಶ್ರೀ ಸುನೀಲ್ ಗೌಡ ಬಸನಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೨೯ (೩೦೧) ಮಾನ್ಯ ಉಪಮುಖ್ಯಮಂತ್ರಿಗಳು (ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು) ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ನ್ಯಾಯಮೂರ್ತಿ ಎ.ಜೆ. ಸದಾಶಿವ ಆಯೋಗವು ತನ್ನ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದೆಯೇ ; ಸಲ್ಲಿಸಿದ್ದಲ್ಲಿ, ಯಾವಾಗ ಸಲ್ಲಿಸಲಾಗಿದೆ;

(ಆ) ನ್ಯಾಯಮೂರ್ತಿ ಎ.ಜೆ. ಸದಾಶಿವ ಆಯೋಗದ ವರದಿಯನ್ನು ಸರ್ಕಾರವು ಸದನದಲ್ಲಿ ಮಂಡಿಸಲು ಯಾವ ಕ್ರಮಗಳನ್ನು ಕೈಗೊಂಡಿದೆ ಮತ್ತು ಸದನದಲ್ಲಿ ಯಾವಾಗ ಮಂಡಿಸಲಾಗುವುದು;

(ಇ) ಸದರಿ ವರದಿಯುನ್ನು ಮಂಡಿಸಲು ಸರ್ಕಾರಕ್ಕೆ ಇರುವ ತೊಂದರೆಗಳೇನು ; ತೊಂದರೆಗಳು ಇಲ್ಲದಿದ್ದಲ್ಲಿ, ವರದಿಯನ್ನು ಸದನದಲ್ಲಿ ಇದುವರೆಗೆ ಮಂಡಿಸದಿರಲು ಕಾರಣಗಳೇನು ?

## ವಿಜಯಪುರದಲ್ಲಿ ಜಿಲ್ಲಾ ಕಾರ್ಯಾಲಯಗಳ ಸಂಕೀರ್ಣವನ್ನು ನಿರ್ಮಾಣ ಮಾಡುವ ಕುರಿತು

ಶ್ರೀ ಸುನೀಲ್ ಗೌಡ ಬಸನಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–

೨೩೦ (೨೦೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಜಯಪುರ ನಗರ ಪ್ರದೇಶದ ಮಹಲಬಾಗಾಯತ್ ರಿ.ಸ.ನಂ. ೩೧೩ ಮತ್ತು ೩೧೪ರಲ್ಲಿ ಜಿಲ್ಲಾ ಕಾರ್ಯಾಲಯುಗಳ ಸಂಕೀರ್ಣವನ್ನು ನಿರ್ಮಾಣ ಮಾಡುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ವಿಜಯುಪುರ ಜಿಲ್ಲೆಯಲ್ಲಿ ಜಿಲ್ಲಾ ಕಛೇರಿಗಳ ಸಂಕೀರ್ಣ ನಿರ್ಮಾಣದ ಕುರಿತು ಅಂದಾಜು ಪಟ್ಟಿ ಮತ್ತು ನಕ್ಷೆಯೊಂದಿಗಿನ ಪ್ರಸ್ತಾವನೆಯು ಸರ್ಕಾರದಲ್ಲಿ ಸ್ವೀಕೃತವಾಗಿದೆಯೇ ; ಸ್ವೀಕೃತವಾಗಿದ್ದರೆ, ಆಡಳಿತಾತ್ಮಕ ಅನುಮೋದನೆ ನೀಡಲು ವಿಳಂಬ ಮಾಡುತ್ತಿರುವುದು ಏಕೆ ; ಯಾವಾಗ ಅನುಮೋದನೆ ನೀಡಲಾಗುವುದು ; ಅನುಮೋದನೆ ನೀಡದಿರಲು ಕಾರಣವೇನು ;

(ಇ) ಸದರಿ ಕಾಮಗಾರಿಗೆ ಅನುದಾನದ ಕೊರತೆ ಇದೆಯೇ ?

## ಅನುದಾನ ಹಂಚಿಕೆ ಮಾಡಿರುವ ಕುರಿತು

ಶ್ರೀ ಸುನೀಲ್ ಗೌಡ ಬಸನಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

೨೩೧ (೨೮೨) ಮಾನ್ಯ ಉಪಮುಖ್ಯಮಂತ್ರಿಗಳು (ಲೋಕೋಪಯೋಗಿ, ಮತ್ತು ಸಮಾಜ ಕಲ್ಯಾಣ ಸಚಿವರು) ಈ ವಿಷಯವನ್ನು ದಯವಿಟ್ಟು ತಿಳಿಸುವರೆ:-

೨೦೧೯ ರಿಂದ ಪ್ರಸ್ತುತ ದಿನಾಂಕದವರೆಗೆ ಲೋಕೋಪಯೋಗಿ ಇಲಾಖೆಯಿಂದ ಶಾಸಕರುಗಳ ಕ್ಷೇತ್ರಗಳಿಗೆ ವಿಧಾನ ಸಭಾ ಕ್ಷೇತ್ರವಾರು ಮತ್ತು ಯೋಜನಾವಾರು ಬಿಡುಗಡೆಯಾದ ಅನುದಾನ ಎಷ್ಟು? (ವಿವರ ನೀಡುವುದು)

## ಬಾಗಲಕೋಟೆ ಜಿಲ್ಲೆಯಲ್ಲಿ ನೆರೆ ಹಾವಳಿಯಿಂದಾಗಿರುವ ಹಾನಿ

ಶ್ರೀ ಆರ್. ಬಿ. ತಿಮ್ಮಾಪೂರ (ವಿಧಾನ ಸಭೆಯಿಂದ ಚುನಾಯಿತರಾದವರು):-

೨೩೨ (೨೦೭) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಉತ್ತರ ಕರ್ನಾಟಕದ ಬಾಗಲಕೋಟೆ ಜಿಲ್ಲೆಯಲ್ಲಿ ಕಳೆದ ಜುಲೈ ಮತ್ತು ಆಗಸ್ಟ್ ೨೦೧೯ರ ತಿಂಗಳಿನಲ್ಲಿ ಬಿದ್ದ ಮಹಾಮಳೆ ಹಾಗೂ ನೆರೆ ಹಾವಳಿಯಿಂದ ನದಿಯ ದಡದಲ್ಲಿರುವ ಗ್ರಾಮಗಳಿಗೆ ಸಾಕಷ್ಟು ಹಾನಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ನೆರೆ ಹಾವಳಿಯಿಂದಾಗಿ ಗ್ರಾಮೀಣ ಪ್ರದೇಶದಲ್ಲಿನ ಗುಡಿ ಕೈಗಾರಿಕೆಗಳು, ಅತೀ ಸಣ್ಣ ಕೈಗಾರಿಕೆಗಳ ಚಟುವಟಿಕೆಗಳು ಅಸ್ತವ್ಯಸ್ಥಗೊಂಡು, ಕೈಗಾರಿಕಾ ಶೆಡ್‌ಗಳಲ್ಲಿನ ಯಂತ್ರೋಪಕರಣಗಳು, ಕಚ್ಚಾ ಸಾಮಗ್ರಿಗಳು ಹಾಗೂ ಸಿದ್ದ ಉತ್ಪನ್ನಗಳು, ಅಂಗಡಿ

ಮುಂಗಟ್ಟುಗಳು ಪೂರ್ಣ ಪ್ರಮಾಣದಲ್ಲಿ ಕೆಲವು ಕಡೆ ಭಾಗಶಃ ಹಾನಿಗೊಳಗಾಗಿರುವ ಪ್ರಕರಣಗಳ ಸಂಖ್ಯೆ ಎಷ್ಟು ; (ಪ್ರತ್ಯೇಕ ಮಾಹಿತಿ ಒದಗಿಸುವುದು)

(ಇ) ಹಾನಿಗೆ ಒಳಗಾದ ನಷ್ಟದ ಅಂದಾಜು ಮೊತ್ತವೆಷ್ಟು ; (ವಿವರ ಒದಗಿಸುವುದು) ಹಾನಿಗೆ ಒಳಗಾದ ಕುಟುಂಬಸ್ಥರಿಗೆ ಈವರೆಗೆ ನೀಡಿರುವ ಪರಿಹಾರದ ಮೊತ್ತವೆಷ್ಟು ;

(ಈ) ಯಾವ ಮಾನದಂಡದ ಆಧಾರದ ಮೇಲೆ ಪರಿಹಾರ ಮೊತ್ತವನ್ನು ಪರಿಗಣಿಸಲಾಗುವುದು ;

(ಉ) ಪರಿಗಣಿಸದಿದ್ದಲ್ಲಿ, ಪರಿಗಣಿಸುವುದು ಯಾವಾಗ, ಈ ಕುರಿತು ಸರ್ಕಾರದ ಸ್ಪಷ್ಟ ನಿಲುವೇನು ?

## ಉತ್ತರ ಕರ್ನಾಟಕ ಭಾಗದಲ್ಲಿ ಉಂಟಾದ ಪ್ರಕೃತಿ ವಿಕೋಪದ ಬಗ್ಗೆ

ಶ್ರೀ ಆರ್. ಬಿ. ತಿಮ್ಮಾಪೂರ (ವಿಧಾನ ಸಭೆಯಿಂದ ಚುನಾಯಿತರಾದವರು):–

೨೩೩ (೨೦೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಉತ್ತರ ಕರ್ನಾಟಕದ ಭಾಗದಲ್ಲಿ ಇತ್ತೀಚಿನ ಪ್ರಕೃತಿ ವಿಕೋಪದಿಂದಾಗಿ ಕೃಷ್ಣಾ, ಮಲಪ್ರಭಾ ಮತ್ತು ಘಟ ಪ್ರಭಾ ನದಿಗಳು ತುಂಬಿ ಹರಿದು ನೆರೆಹಾವಳಿಯಿಂದ ಹಾನಿಗೊಳಗಾದ ಮನೆಗಳು, ಜನ ಜಾನುವಾರುಗಳ ಸಾವು ನೋವುಗಳ ಸಂಖ್ಯೆ ಎಷ್ಟು ; (ಪ್ರತ್ಯೇಕ ವಿವರ ನೀಡುವುದು)

(ಆ) ನೆರೆ ಹಾವಳಿಯಿಂದಾಗಿ ಉಂಟಾದ ಹಾನಿಯ ಪುನರ್ವಸತಿಗಾಗಿ ಸರ್ಕಾರ ಕೈಗೊಂಡ ಕ್ರಮಗಳೇನು ; ಜನ–ಜಾನುವಾರುಗಳ ಸಾವುಗಳಿಗೆ ನೀಡಿದ ಪರಿಹಾರ ಮೊತ್ತವೆಷ್ಟು ; ಇದಕ್ಕಾಗಿ ಮೀಸಲಿಡಲಾದ ಹಣವೆಷ್ಟು ? (ಪ್ರತ್ಯೇಕ ವಿವರ ನೀಡುವುದು)

## ಮುಜರಾಯಿ ಇಲಾಖೆಯ ದೇವಸ್ಥಾನಗಳ ಜೀರ್ಣೋದ್ಧಾರ ಕುರಿತು

ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :–

೨೩೪ (೨೫೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಮುಜರಾಯಿ ಇಲಾಖೆಯ ದೇವಸ್ಥಾನಗಳನ್ನು ಜೀರ್ಣೋದ್ಧಾರಗೊಳಿಸದಿರುವುದರಿಂದ ದೇವಸ್ಥಾನಗಳು ಶಿಥಿಲಗೊಂಡು ಸಾರ್ವಜನಿಕರಿಗೆ ತೊಂದರೆಯಾಗಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ ಮುಜರಾಯಿ ಇಲಾಖೆ ವತಿಯಿಂದ ಎಷ್ಟು ದೇವಸ್ಥಾನಗಳ ಜೀರ್ಣೋದ್ಧಾರ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ? (ವಿಧಾನಸಭಾ ಕ್ಷೇತ್ರವಾರು ಸಂಪೂರ್ಣ ಮಾಹಿತಿ ನೀಡುವುದು)

## ಮೀನುಗಾರಿಕೆ ಇಲಾಖೆಯಿಂದ ಮತ್ಸಾಶ್ರಯ ಯೋಜನೆಯಡಿಯಲ್ಲಿ ಮಂಜೂರು ಮಾಡಲಾಗಿರುವ ಮನೆಗಳ ಕುರಿತು

ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :–

೨೩೫ (೨೬೦) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ರಾಜ್ಯದಲ್ಲಿ ಮೀನುಗಾರಿಕೆ ಇಲಾಖೆ ವತಿಯಿಂದ ಮತ್ಸಾಶ್ರಯ ಯೋಜನೆಯಡಿಯಲ್ಲಿ ಮಂಜೂರು

ಮಾಡಲಾಗಿರುವ ಮನೆಗಳೆಷ್ಟು; ಫಲಾನುಭವಿಗಳನ್ನು ಆಯ್ಕೆ ಮಾಡಲು ಅನುಸರಿಸಲಾಗಿರುವ ಮಾನದಂಡಗಳೇನು; ವಿಧಾನ ಸಭಾ ಕ್ಷೇತ್ರವಾರು ಸಂಪೂರ್ಣ ಮಾಹಿತಿ ನೀಡುವುದು ;

(ಆ) ಕಳೆದ ೩ ವರ್ಷಗಳಲ್ಲಿ ರಾಜ್ಯದಲ್ಲಿ ಮೀನುಗಾರಿಕೆ ಇಲಾಖೆ ವತಿಯಿಂದ ಮೀನು ಮರಿಗಳನ್ನು ಕೆರೆಗಳಲ್ಲಿ ಸಾಕಣೆ ಮಾಡಲು ಅನುಸರಿಸಲಾಗಿರುವ ಕ್ರಮಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)

## ನೈಸ್ (ಎನ್.ಐ.ಸಿ.ಇ) ರಸ್ತೆಯ ಬಗ್ಗೆ

ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :–

೨೩೬ (೨೬೧) ಮಾನ್ಯ ಉಪ ಮುಖ್ಯಮಂತ್ರಿಗಳು (ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು) ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಾನ್ಯ ಸರ್ವೋಚ್ಚ ನ್ಯಾಯಾಲಯದಲ್ಲಿ ನೈಸ್ ಸಂಸ್ಥೆಗೆ ಹೂಡಿದ್ದ ನಿಂದನಾ ಅರ್ಜಿ ಸಂಖ್ಯೆ:೬೬/೨೦೦೭ ವಜಾಗೊಂಡಿದ್ದರೂ, ಸದನ ಸಮಿತಿಯ ವರದಿಯನ್ನು ಅನುಷ್ಠಾನಗೊಳಿಸದಿರಲು ಕಾರಣಗಳೇನು ; (ವಿವರ ನೀಡುವುದು)

(ಆ) ಕ್ರಿಯಾ ಒಪ್ಪಂದದ ಆರ್ಟಿಕಲ್ ೪ರಂತೆ ರಚಿಸಲಾಗಿರುವ ಅಧಿಕಾರದತ್ತ ಸಮಿತಿಯು ದಿನಾಂಕ:೦೫.೦೮.೨೦೦೮ ರಿಂದ ಇದುವರೆವಿಗೂ ಸಭೆ ಸೇರದಿರಲು ಕಾರಣಗಳೇನು ;

(ಇ) ಬಿ.ಎಂ.ಐ.ಸಿ.ಪಿ. ಯೋಜನೆಯ ಸೆಕ್ಷನ್–ಎ ಭಾಗದ ಅಭಿವೃದ್ಧಿಯನ್ನು ಮೆ: ನೈಸ್‌ಗೆ ಉಪ ಗುತ್ತಿಗೆ ನೀಡಲಾಗಿದ್ದು, ಕ್ರಿಯಾ ಒಪ್ಪಂದದಲ್ಲಿ ನಿಗಧಿಪಡಿಸಲಾದ ಕಾಲಮಿತಿ ಮುಗಿದಿದ್ದರೂ, ಯೋಜನೆಯ ಉಳಿದ ಭಾಗದ ಅಭಿವೃದ್ಧಿಯನ್ನು ಮುಖ್ಯ ಕರಾರುದಾರರಾದ ಮೆ: ನೈಸ್ ಸಂಸ್ಥೆ ನಿರ್ವಹಿಸದಿರುವ ಬಗ್ಗೆ ಸರ್ಕಾರವು ತೆಗೆದುಕೊಂಡ ಕ್ರಮಗಳೇನು ;

(ಈ) ಹಿಂದಿನ ಅಡ್ವೊಕೇಟ್ ಜನರಲ್‌ರವರು ಮೆ:ನೈಸ್ ಸಂಸ್ಥೆಯ ಅಕ್ರಮಗಳ ಸಂಬಂಧ ಭಾರತ ಸಂವಿಧಾನದ ಷೆಡ್ಯೂಲ್ VII List III Entru 42 ರಡಿ ಪ್ರದತ್ತವಾದ ಅಧಿಕಾರ ಚಲಾಯಿಸಿ ಶಾಸನ ರಚಿಸುವ ಬಗ್ಗೆ ಅಭಿಪ್ರಾಯ ನೀಡಿದ್ದರೂ, ಯಾವುದೇ ಕ್ರಮ ವಹಿಸದಿರಲು ಕಾರಣಗಳೇನು ;

(ಉ) ಮೆ: ನೈಸ್ ಸಂಸ್ಥೆಯು ೨೦೧೨ ರಿಂದ ಅನಧಿಕೃತವಾಗಿ Asphalt ರಸ್ತೆ ನಿರ್ಮಿಸಿ, ಕಾಂಕ್ರೀಟ್ ರಸ್ತೆ ದರದಲ್ಲಿ ಟೋಲ್ ಸಂಗ್ರಹಣೆ ಮಾಡುತ್ತಿದ್ದು, ಟೋಲ್ ಸಂಗ್ರಹಣೆ ಸಂಬಂಧ ನ್ಯಾಯಾಲಯದಲ್ಲಿ ಯಾವುದೇ ತಡೆಯಾಜ್ಞೆ ಇಲ್ಲದಿದ್ದರೂ, ನ್ಯಾಯಾಲಯದ ನೆಪವೊಡ್ಡಿ ಯಾವುದೇ ಕ್ರಮ ವಹಿಸದಿರಲು ಕಾರಣ ಏನು; ಅನಧಿಕೃತ ಟೋಲ್ ಬೂತ್‌ಗಳಿಗೆ ಫಾಸ್ಟ್‌ಟ್ಯಾಗ್ ಅಳವಡಿಸಲು ಅನುಮತಿ ನೀಡಲಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇದು ಸದನ ಸಮಿತಿ ವರದಿಯ ಉಲ್ಲಂಘನೆಯಾಗುವುದಿಲ್ಲವೇ ?

# ಪ್ರಧಾನ ಮಂತ್ರಿ ಫಸಲ್ ಭೀಮಾ ಯೋಜನೆಯಡಿ ರೈತರಿಗೆ ಆಗುತ್ತಿರುವ ತೊಂದರೆ ಕುರಿತು

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :-**

೨೩೭ (೨೫೭) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪ್ರಧಾನ ಮಂತ್ರಿ ಫಸಲ್ ಭೀಮಾ ಯೋಜನೆಯಡಿಯಲ್ಲಿ ಖಾಸಗಿ ವಿಮಾ ಸಂಸ್ಥೆಗಳು ತಮ್ಮ ಅನುಕೂಲಕ್ಕೆ ತಕ್ಕಂತೆ ನಿಯಮಗಳನ್ನು ರೂಪಿಸಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ನಿಯಮಾವಳಿಗಳಿಂದ ರೈತರು ಹಣವನ್ನು ಪಾವತಿಸಿದ್ದರೂ ಸಹ ಅವರಿಗೆ ವಿಮಾ ಸೌಲಭ್ಯದ ಮೊತ್ತವು ಪಾವತಿಯಾಗದೆ ಸಂಕಷ್ಟದಲ್ಲಿರುವುದು ನಿಜವೇ ;

(ಇ) ಈ ವರ್ಷ ಮುಂಗಾರು ಹಂಗಾಮಿನಲ್ಲಿ ಖಾಸಗಿ ವಿಮಾ ಸಂಸ್ಥೆಗಳಿಗೆ ನಮ್ಮ ರಾಜ್ಯದಿಂದಲೇ ಸುಮಾರು ೧೫೦೦ ಕೋಟಿ ರೂಪಾಯಿ ಲಾಭವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಕಳೆದ ೩ ವರ್ಷದ ಅವಧಿಯ ಫಸಲ್ ಭೀಮಾ ಯೋಜನೆಯ ಫಲಾನುಭವಿಗಳ ವಿವರ ನೀಡುವುದು? (ಜಿಲ್ಲೆ, ತಾಲ್ಲೂಕು, ಹೋಬಳಿವಾರು ವಿವರ ನೀಡುವುದು)

## ಕೊಡಗು ಜಿಲ್ಲೆಯಲ್ಲಿ ಪ್ರಕೃತಿ ವಿಕೋಪಕ್ಕೆ ಒಳಗಾದವರಿಗೆ ಪುನರ್ವಸತಿ ಕುರಿತು

ಶ್ರೀಮತಿ ಎಸ್.ವೀಣಾ ಅಚ್ಚಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು) :–

೨೩೮ (೨೭೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆಯಲ್ಲಿ ೨೦೧೮ರಲ್ಲಿ ಸಂಭವಿಸಿದ ಪ್ರಕೃತಿ ವಿಕೋಪ ಹಾಗೂ ಪ್ರವಾಹದಿಂದಾಗಿ ಮನೆ ಹಾಗೂ ನಿವೇಶನಗಳನ್ನು ಕಳೆದುಕೊಂಡವರಿಗೆ ಪೂರ್ಣ ಪ್ರಮಾಣದಲ್ಲಿ ಪುನರ್ವಸತಿ ಕಲ್ಪಿಸಲಾಗಿದೆಯೇ ;

(ಆ) ಕಲ್ಪಿಸದಿದ್ದಲ್ಲಿ, ಪುನರ್ವಸತಿ ಕಲ್ಪಿಸಬೇಕಾಗಿದ್ದವರ ಸಂಖ್ಯೆ ಎಷ್ಟು; (ತಾಲ್ಲೂಕುವಾರು, ಗ್ರಾಮವಾರು ನಿರಾಶ್ರಿತರಾದವರ ಹೆಸರು ಹಾಗೂ ಪ್ರತಿ ನಿರಾಶ್ರಿತರಿಗೆ ದೊರೆತಿರುವ ಪರಿಹಾರದ ವಿವರ ನೀಡುವುದು)

(ಇ) ಈ ದುರಂತದಲ್ಲಿ ಮನೆ ಹಾಗೂ ನಿವೇಶನ ಕಳೆದುಕೊಂಡ ಎಲ್ಲಾ ಕುಟುಂಬಗಳಿಗೆ ಪರಿಹಾರ ವ್ಯವಸ್ಥೆ ಕಲ್ಪಿಸಲಾಗಿದೆಯೇ ?

## ಕೊಡಗು ಜಿಲ್ಲೆಯಲ್ಲಿ ಪ್ರವಾಹದಿಂದಾಗಿ ಮನೆ ಕಳೆದುಕೊಂಡವರಿಗೆ ಶಾಶ್ವತ ವಸತಿ ವ್ಯವಸ್ಥೆ ಕಲ್ಪಿಸುವ ಕುರಿತು

ಶ್ರೀಮತಿ ಎಸ್.ವೀಣಾ ಅಚ್ಚಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು) :–

೨೩೯ (೨೭೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆಯಲ್ಲಿ ಕಳೆದ ವರ್ಷ ಸುರಿದ ಭೀಕರ ಮಳೆಯಿಂದ ಸಿದ್ದಾಪುರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕರಡಿಗೋಡು, ಗುಹ್ಯ ಹಾಗೂ ನೆಲ್ಯಹುದಿಕೇರಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಬೆಟ್ಟದಕಾಡು ಕೊಂಡಂಗೇರಿ, ತೋರಾ ಗ್ರಾಮಗಳಲ್ಲಿ ಮನೆಗಳು ಸಂಪೂರ್ಣವಾಗಿ ನಾಶವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ಸಂತ್ರಸ್ತರಿಗೆ ಬದಲಿ ನಿವೇಶನ ಹಾಗೂ ಶಾಶ್ವತ ವಸತಿ ವ್ಯವಸ್ಥೆ ಕಲ್ಪಿಸಲಾಗಿದೆಯೇ ;

(ಇ) ಇದುವರೆಗೆ ನಿವೇಶನ ನೀಡಲಾಗದಿದ್ದ ಪಕ್ಷದಲ್ಲಿ ಬದಲಿ ನಿವೇಶನ ಕಲ್ಪಿಸುವ ಸಲುವಾಗಿ ಜಾಗಗಳನ್ನು ಗುರ್ತಿಸಲಾಗಿದೆಯೇ ? (ಸಂಪೂರ್ಣ ವಿವರ ನೀಡುವುದು)

## ಕೊಡಗು ಜಿಲ್ಲೆಯ ಮಡಿಕೇರಿ ತಾಲ್ಲೂಕಿನ ಅವಂಡಿ ಗ್ರಾಮದ ನಾಪಂಡ ಕಾಡು ಬಳಿ ಸೇತುವೆ ನಿರ್ಮಾಣ ಕುರಿತು

ಶ್ರೀಮತಿ ಎಸ್.ವೀಣಾ ಅಚ್ಚಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು) :–

೨೪೦ (೨೭೭) ಮಾನ್ಯ ಉಪ ಮುಖ್ಯಮಂತ್ರಿಗಳು (ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು) ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆ, ಮಡಿಕೇರಿ ತಾಲ್ಲೂಕು, ಮಕ್ಕಂದೂರು–ತಂತಿಪಾಲ–ಮಾಂದಲಪಟ್ಟಿ ರಸ್ತೆಯ ಆವಂಡಿ ಗ್ರಾಮದ ನಾಪಂಡ ಕಾಡು ಎಂಬಲ್ಲಿ ಮುಕ್ಕೋಡ್ಲ ಹೊಳೆಗೆ ಸೇತುವೆ ನಿರ್ಮಾಣವಾಗದೆ

ಇರುವುದರಿಂದ ಆ ಭಾಗದಲ್ಲಿನ ಹಲವಾರು ಗ್ರಾಮಗಳಿಗೆ ಸರಿಯಾದ ಸಂಪರ್ಕ ವ್ಯವಸ್ಥೆ ಇಲ್ಲದೆ ವಿಶೇಷವಾಗಿ ಕಳೆದೆರಡು ವರ್ಷಗಳಲ್ಲಿ ಸಾರ್ವಜನಿಕರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸುರಕ್ಷತೆ ಹಾಗೂ ಸಂಪರ್ಕದ ದೃಷ್ಟಿಯಿಂದ ಅತ್ಯಾವಶ್ಯಕವಾಗಿರುವ ಈ ಸೇತುವೆ ಇದುವರೆಗೂ ನಿರ್ಮಾಣವಾಗದಿರಲು ಕಾರಣಗಳೇನು ;

(ಇ) ಪ್ರಸಕ್ತ ವರ್ಷದಲ್ಲಿ ಸೇತುವೆ ನಿರ್ಮಾಣ ಕಾಮಗಾರಿಯನ್ನು ಪ್ರಾರಂಭಿಸಲಾಗುವುದೇ ?

## ೨೦೧೮ರಲ್ಲಿ ಕೊಡಗು ಜಿಲ್ಲೆಯಲ್ಲಿ ಸಂಭವಿಸಿದ ಪ್ರಕೃತಿ ವಿಕೋಪದಲ್ಲಿ ಸಂತ್ರಸ್ತರಾದವರಿಗೆ ಪುನರ್ವಸತಿ ಕಲ್ಪಿಸುವ ಕುರಿತು

ಶ್ರೀಮತಿ ಎಸ್.ವೀಣಾ ಅಚ್ಚಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು) :–

೨೪೧ (೨೭೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೮ರಲ್ಲಿ ಕೊಡಗು ಜಿಲ್ಲೆಯಲ್ಲಿ ಸಂಭವಿಸಿದ ಭೂಕುಸಿತ ಹಾಗೂ ಪ್ರವಾಹದಿಂದಾಗಿ ಮನೆ ಹಾಗೂ ನಿವೇಶನಗಳನ್ನು ಕಳೆದುಕೊಂಡ ನಿರಾಶ್ರಿತರಾದವರಿಗೆ ಪುನರ್ವಸತಿ ಹಾಗೂ ಪರಿಹಾರ ದೊರೆಯದೆ ಸಂಕಷ್ಟಕ್ಕೀಡಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸರ್ಕಾರ ಈ ಕುರಿತು ಕೈಗೊಂಡಿರುವ ಪರಿಹಾರದ ಕ್ರಮಗಳೇನು ;

(ಇ) ಜಿಲ್ಲೆಯಲ್ಲಿ ೨೦೧೯ರ ಪ್ರಕೃತಿ ವಿಕೋಪದಲ್ಲಿ ನಿರಾಶ್ರಿತರಾದವರ ವಿವರ ಹಾಗೂ ಪರಿಹಾರ ದೊರಕಿದ್ದಲ್ಲಿ ಆ ಫಲಾನುಭವಿಗಳ ವಿವರ ನೀಡುವುದು; ಇದುವರೆಗೂ ಹಲವರಿಗೆ ಪರಿಹಾರ ದೊರೆಯದಿರಲು ಕಾರಣಗಳೇನು ?

## ಬೀದರ್ ಜಿಲ್ಲೆಯ ಮಿನಿ ವಿಧಾನಸೌಧದ ಬಗ್ಗೆ

ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–

೨೪೨ (೨೧೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಮಿನಿ ವಿಧಾನಸೌಧ ನಿರ್ಮಾಣ ಕಾರ್ಯ ಯಾವ ಹಂತದಲ್ಲಿದೆ; ಮಿನಿ ವಿಧಾನಸೌಧಕ್ಕೆ ಸ್ಥಳ ಗುರುತಿಸಲಾಗಿದೆಯೇ; ಒಂದು ವೇಳೆ ಗುರುತಿಸಿದ್ದರೆ ಕಾಮಗಾರಿ ಪ್ರಾರಂಭ ಮಾಡುವುದು ಯಾವಾಗ ;

(ಆ) ಜಿಲ್ಲಾ ಕೇಂದ್ರ ಬೀದರ್‌ನಲ್ಲಿ ಜಿಲ್ಲಾಡಳಿತ ಕಛೇರಿಗಳ ಸಂಕೀರ್ಣ ನಿರ್ಮಾಣಕ್ಕೆ ಸ್ಥಳ ಅಂತಿಮ ಗೊಳಿಸಲಾಗಿದೆಯೇ; ಸ್ಥಳ ಅಂತಿಮಗೊಳಿಸಿದರೆ ನಿರ್ಮಾಣ ಕಾರ್ಯ ಯಾವಾಗ ಪ್ರಾರಂಭವಾಗಲಿದೆ ?

## ಬೀದರ್ ಜಿಲ್ಲೆಯಲ್ಲಿ ಹಿಂಗಾರು ಬೆಳೆ ಬಿತ್ತನೆ ಮಾಡಿರುವ ಜಮೀನುಗಳ ಬಗ್ಗೆ

ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–

೨೪೩ (೨೧೨) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿ ಹಿಂಗಾರು ಬೆಳೆ ಬಿತ್ತನೆ ಮಾಡಿರುವ ಜಮೀನುಗಳು ಎಷ್ಟು; (ಹೆಕ್ಟೇರ್‌ವಾರು ವಿವರ ಒದಗಿಸುವುದು)

(ಆ) ಜಿಲ್ಲೆಯಲ್ಲಿ ಬೆಳೆ ಹಾನಿಯಾಗಿರುವ ಬೆಳೆಗಳನ್ನು ಗುರುತಿಸಲಾಗಿದೆಯೇ; (ತಾಲ್ಲೂಕುವಾರು ವಿವರ ಒದಗಿಸುವುದು)

(ಇ) ಹಾನಿಯಾದ ಬೆಳೆಗೆ ಸೂಕ್ತ ಪರಿಹಾರ ನೀಡಲಾಗಿದೆಯೇ; ಈವರೆಗೆ ಎಷ್ಟು ಪರಿಹಾರ ನೀಡಲಾಗಿದೆ ? (ತಾಲ್ಲೂಕುವಾರು ವಿವರ ಒದಗಿಸುವುದು)

## ಕಲ್ಯಾಣ ಕರ್ನಾಟಕದ ಪ್ರಮುಖ ಬೆಳೆಗಳ ಬೆಳೆಗಳನ್ನು ಖರೀದಿಸುವ ಕುರಿತು

ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–

೨೪೪ (೨೧೩) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲ್ಯಾಣ ಕರ್ನಾಟಕದ ಪ್ರಮುಖ ಬೆಳೆಗಳಾದ ತೊಗರಿ, ಉದ್ದು, ಹೆಸರು ಮುಂತಾದ ಬೆಳೆಗಳನ್ನು ರೈತರಿಂದ ಖರೀದಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ; ಎಷ್ಟು ಕ್ವಿಂಟಾಲ್ ಬೆಳೆಯನ್ನು ರೈತರಿಂದ ಖರೀದಿಸಲಾಗಿದೆ ; (ವಿವರ ನೀಡುವುದು)

(ಆ) ರೈತರಿಂದ ಖರೀದಿಸಿದ ಬೆಳೆಗಳಿಗೆ ಸೂಕ್ತ ಬೆಂಬಲ ಬೆಲೆ ನೀಡಲಾಗುತ್ತಿದೆಯೇ ;

(ಇ) ಹಿಂದೆ ರೈತರು ಬೆಳೆದ ಬೆಳೆಯನ್ನು ೨೦ ಕ್ವಿಂಟಾಲ್ ಖರೀದಿಸಲಾಗುತ್ತಿದ್ದು, ಸದ್ಯ ೧೦ ಕ್ವಿಂಟಾಲ್ ಬೆಳೆಯನ್ನು ರೈತರಿಂದ ಖರೀದಿಸಿರುವುದರಿಂದ ರೈತರಿಗೆ ಸಮಸ್ಯೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

## ಬೀದರ್ ಜಿಲ್ಲೆಯಲ್ಲಿ ವಸತಿ ಶಾಲೆಗಳಲ್ಲಿ ಮೂಲಭೂತ ಸೌಲಭ್ಯಗಳ ಕೊರತೆ ಬಗ್ಗೆ

ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–

೨೪೫ (೩೦೦) ಮಾನ್ಯ ಉಪ ಮುಖ್ಯಮಂತ್ರಿಗಳು (ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ) ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ಬೀದರ್ ಜಿಲ್ಲೆಯ ವಸತಿ ಶಾಲೆಗಳಲ್ಲಿ ವಿದ್ಯಾರ್ಥಿಗಳಿಗೆ ಮೂಲಭೂತ ಸೌಲಭ್ಯಗಳ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಯಾವ ಕ್ರಮ ಕೈಗೊಳ್ಳಲಾಗಿದೆ? (ತಾಲ್ಲೂಕುವಾರು ವಿವರ ನೀಡುವುದು)

## ಉಪನೋಂದಣಾಧಿಕಾರಿ ಕಛೇರಿಯ ದತ್ತಾಂಶಗಳನ್ನು ಇಂಟರ್‌ನೆಟ್ ಹ್ಯಾಕ್ ಮಾಡುತ್ತಿರುವ ಬಗ್ಗೆ

ಶ್ರೀ ಯು.ಬಿ. ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು) :–

೨೪೬ (೨೦೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರದಲ್ಲಿನ ಸ್ವತ್ತುಗಳು ಒಬ್ಬರಿಂದ ಒಬ್ಬರಿಗೆ ಮಾರಾಟವಾದ ಸಂದರ್ಭದಲ್ಲಿ ಉಪನೋಂದಣಾಧಿಕಾರಿ ಕಛೇರಿಯಲ್ಲಿ ನೋಂದಣಿಯಾಗುತ್ತಿದ್ದು, ಹೀಗೆ ನೋಂದಣಿಯಾದ ದತ್ತಾಂಶಗಳು ಇಲಾಖೆಯ ಸರ್ವರ್‌ನಲ್ಲಿ ಸಂಗ್ರಹಿಸಲ್ಪಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ರೀತಿ ಸಂಗ್ರಹಿಸಲಾದ ದತ್ತಾಂಶಗಳನ್ನು ಕೆಲವರು ಇಂಟರ್ ನೆಟ್ ಹ್ಯಾಕ್ ಮಾಡಿ ನಿವೇಶನ ಸಂಖ್ಯೆಗಳನ್ನು ತಿದ್ದಿ, ನಕಲಿ ದಾಖಲೆಗಳನ್ನು ಸೃಷ್ಠಿಸಿ ಬೇರೆಯವರಿಗೆ ಮಾರಾಟ ಮಾಡಿರುವ ಪ್ರಕರಣಗಳು ಬೆಂಗಳೂರು ನಗರದಲ್ಲಿ ಕಂಡುಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಗಮನಕ್ಕೆ ಬಂದಿದ್ದಲ್ಲಿ, ಸರ್ಕಾರ ಸಂಬಂಧಪಟ್ಟ ವ್ಯಕ್ತಿಗಳ ಮೇಲೆ ದಾಖಲಿಸಿರುವ ಪ್ರಕರಣಗಳೆಷ್ಟು ಹಾಗೂ ಕೈಗೊಂಡಿರುವ ಕ್ರಮಗಳೇನು ;

(ಈ) ಇಂತಹ ಪ್ರಕರಣಗಳಿಂದ ಸರ್ಕಾರದ ಬೊಕ್ಕಸಕ್ಕೆ ಆಗಿರುವ ಹಾನಿ ಎಷ್ಟು ?

## ಲೋಕೋಪಯೋಗಿ ಇಲಾಖೆ ವ್ಯಾಪ್ತಿಗೆ ಶೀರ್ಷಿಕೆ ಅಡಿಯಲ್ಲಿ ಬಿಡುಗಡೆಯಾದ ಅನುದಾನದ ಬಗ್ಗೆ

ಶ್ರೀ ಇಕ್ಬಾಲ್ ಅಹ್ಮದ್ ಸರಡಗಿ (ನಾಮನಿರ್ದೇಶನ ಹೊಂದಿದವರು) :–

೨೪೭ (೨೨೨) ಮಾನ್ಯ ಉಪ ಮುಖ್ಯಮಂತ್ರಿಗಳು (ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು) ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಸ್ತುತ ಸರ್ಕಾರ ರಚನೆಯಾದಾಗಿನಿಂದ ಲೋಕೋಪಯೋಗಿ ಇಲಾಖೆಯ ಯಾವ ಯಾವ ಲೆಕ್ಕ ಶೀರ್ಷಿಕೆಯಲ್ಲಿ ಎಷ್ಟು ಎಷ್ಟು ಅನುದಾನವನ್ನು ಬಿಡುಗಡೆ ಮಾಡಲಾಗಿದೆ; (ಲೆಕ್ಕ ಶೀರ್ಷಿಕೆವಾರು, ವರ್ಷವಾರು ವಿಧಾನಸಭಾ ಕ್ಷೇತ್ರವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಈ ಅನುದಾನದಲ್ಲಿ ಯಾವ ಯಾವ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ? (ವರ್ಷವಾರು ವಿಧಾನಸಭಾ ಕ್ಷೇತ್ರವಾರು, ಕಾಮಗಾರಿಗಳವಾರು ಸಂಪೂರ್ಣ ಮಾಹಿತಿ ನೀಡುವುದು)

## ರಾಜ್ಯದ ಬಂದರುಗಳ ಬಗ್ಗೆ

ಡಾ: ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–

೨೪೮ (೨೮೪) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರದ ಅಧೀನದಲ್ಲಿರುವ ಬಂದರುಗಳ ಸಂಖ್ಯೆ ಎಷ್ಟು;

(ಆ) ಮಂಗಳೂರಿನ ಪಣಂಬೂರು ಯೋಜನೆಯು ಯಾವ ವರ್ಷದಲ್ಲಿ ಪ್ರಾರಂಭಗೊಂಡಿತು ;

(ಇ) ಕಳೆದ ೦೩ ವರ್ಷಗಳಿಂದ ರಾಜ್ಯ ಸರ್ಕಾರಕ್ಕೆ ಈ ಬಂದರುಗಳಿಂದ ಬಂದಿರುವ ಆದಾಯ ಎಷ್ಟು; (ಸಂಪೂರ್ಣ ವಿವರ ನೀಡುವುದು)

(ಈ) ಪ್ರಸ್ತುತ ಇರುವ ಬಂದರುಗಳನ್ನು ಉನ್ನತೀಕರಿಸಿ ರಾಜ್ಯಕ್ಕೆ ಪ್ರಮುಖವಾಗಿ ಮಂಗಳೂರು ಬಂದರನ್ನು ಪೂರ್ಣ ಪ್ರಮಾಣದಲ್ಲಿ ಉಪಯೋಗಿಸಿಕೊಳ್ಳುವಲ್ಲಿ ಸರ್ಕಾರವು ಹಮ್ಮಿಕೊಂಡಿರುವ ಯೋಜನೆಗಳಾವುವು ?

## ರೈತರಿಗಾಗಿ ಬೆಳೆ ಹಾನಿ ಕುರಿತು

**ಡಾ|| ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–**

೨೪೯ (೨೮೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೦೩ ವರ್ಷಗಳಿಂದ ಕರಾವಳಿ ಹಾಗೂ ಮಲೆನಾಡಿನ ಸುತ್ತಮುತ್ತಲಿನ ಪ್ರದೇಶದಲ್ಲಿ ಅನಾವೃಷ್ಠಿ ಹಾಗೂ ಅತಿವೃಷ್ಠಿಯಿಂದ ಈ ಭಾಗದ ರೈತರು ಬೆಳೆದ ಬೆಳೆ ಕಳೆದುಕೊಂಡು ತತ್ತರಿಸಿರುವ ವಿಷಯವು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸದರಿ ಪ್ರದೇಶದ ರೈತರಿಗೆ ಆದಂತಹ ಹಾನಿ ತುಂಬುವ ನಿಟ್ಟಿನಲ್ಲಿ ಸರ್ಕಾರವು ಯಾವ ಕ್ರಮ ಕೈಗೊಂಡಿದೆ;

(ಇ) ಕರಾವಳಿ ಹಾಗೂ ಮಲೆನಾಡಿನ ಸುತ್ತಮುತ್ತಲಿನ ಪ್ರದೇಶದ ರೈತರಿಗೆ ಆಗಿರುವ ಬೆಳೆ ಹಾನಿಗೆ ಬೆಳೆ ವಿಮೆ ಪಾವತಿಸಲು ಸರ್ಕಾರವು ಕ್ರಮ ಕೈಗೊಳ್ಳುವುದೇ; ಇದ್ದಲ್ಲಿ, ಸರ್ಕಾರದ ಮುಂದಿನ ಕ್ರಮಗಳೇನು?

## ವಿದ್ಯಾರ್ಥಿ ನಿಲಯಗಳ ಶುಚಿತ್ವ ಕುರಿತು

**ಡಾ|| ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–**

೨೫೦ (೨೮೬) ಮಾನ್ಯ ಉಪ ಮುಖ್ಯಮಂತ್ರಿಗಳು (ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು) ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸಮಾಜ ಕಲ್ಯಾಣ ಇಲಾಖೆಯಿಂದ ನಡೆಯುತ್ತಿರುವ ವಿದ್ಯಾರ್ಥಿನಿಲಯಗಳ ಸಂಖ್ಯೆ ಎಷ್ಟು;

(ಆ) ಇವುಗಳಲ್ಲಿ ಬಹುತೇಕ ವಿದ್ಯಾರ್ಥಿನಿಲಯಗಳು ಶಿಥಿಲಾವಸ್ಥೆಯಲ್ಲಿರುವುದು ಸರ್ಕಾರದ ಗಮನದಲ್ಲಿದೆಯೇ; ಇದರಿಂದ ವಿದ್ಯಾರ್ಥಿಗಳು ತೊಂದರೆಯನ್ನು ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ವಿದ್ಯಾರ್ಥಿನಿಲಯಗಳಲ್ಲಿ ಶುಚಿತ್ವಕ್ಕೆ ಹಾಗೂ ಕುಡಿಯುವ ನೀರಿನ ವ್ಯವಸ್ಥೆಗಳು ಸರಿಯಾಗಿಲ್ಲದ ಕಾರಣ ಈ ಸಮಸ್ಯೆಗಳನ್ನು ಬಗೆಹರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು;

(ಈ) ವಿದ್ಯಾರ್ಥಿನಿಲಯಗಳನ್ನು ವ್ಯವಸ್ಥಿತವಾಗಿ ಇಡಲು ಸರ್ಕಾರದ ಅನುದಾನದ ಕೊರತೆ ಕಾರಣವೆಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

## ಸಾರ್ವಜನಿಕರು ಪಹಣಿ ಪಡೆಯುವ ಬಗ್ಗೆ

**ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–**

೨೫೧ (೨೮೭) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಾಮೀಣ ಪ್ರದೇಶ ಹಾಗೂ ಸುತ್ತಮುತ್ತಲಿನ ಪ್ರದೇಶದ ರೈತರು ಹಾಗೂ ಸಾರ್ವಜನಿಕರು ಪಹಣಿ ಪತ್ರವನ್ನು ಎಲ್ಲೆಲ್ಲಿ ಪಡೆಯಬಹುದು;

(ಆ) ತಹಶೀಲ್ದಾರ್ ಕಛೇರಿಯಲ್ಲಿ ಪಹಣಿ ಪಡೆಯಲು ರೈತರು ಹಾಗೂ ಸಾರ್ವಜನಿಕರು ತೊಂದರೆಯನ್ನು ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಸರ್ಕಾರ ಪಹಣಿ ಪಡೆಯಲು ಇರುವ ನಿಯಮವನ್ನು ಸರಳೀಕರಣ ಮಾಡಲು ಆಲೋಚಿಸಿದೆಯೇ: ಹಾಗಿದ್ದಲ್ಲಿ, ಮಾಡಲಾಗುವುದು ಯಾವಾಗ?

## ಆಶ್ರಯ ಮನೆಗಳ ಫಲಾನುಭವಿಗಳ ಬಗ್ಗೆ

ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–

೨೫೨ (೨೮೮) ಮಾನ್ಯ ವಸತಿ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೦೩ ವರ್ಷಗಳಲ್ಲಿ ರಾಜೀವ್ ಗಾಂಧಿ ಹಾಗೂ ವಾಜಪೇಯಿ ವಸತಿ ಯೋಜನೆಯಡಿಯಲ್ಲಿ ಮಂಜೂರಾದ ಮನೆಗಳ ಸಂಖ್ಯೆ ಎಷ್ಟು; (ಸಂಪೂರ್ಣ ವಿವರ ನೀಡುವುದು)

(ಆ) ಸದರಿ ಮನೆಗಳ ನಿರ್ಮಾಣ ಕಾಮಗಾರಿಗೆ ಇಲ್ಲಿಯವರೆವಿಗೂ ಸರ್ಕಾರವು ಖರ್ಚು ಮಾಡಿರುವ ವೆಚ್ಚವೆಷ್ಟು;

(ಇ) ಸದರಿ ನಿರ್ಮಾಣಗೊಂಡಿರುವ ಆಶ್ರಯ ಮನೆಗಳ ಅರ್ಹ ಫಲಾನುಭವಿಗಳಿಗೆ ಲಭಿಸಿವೆಯೇ; ಫಲಾನುಭವಿಗಳ ಸಂಪೂರ್ಣ ಮಾಹಿತಿ ನೀಡುವುದು?

## ಮೂಲ ಮಾಲೀಕರಲ್ಲದವರಿಗೆ ಕೃಷಿ ಭೂಮಿ ಖಾತೆಗಳನ್ನು ನೀಡುತ್ತಿರುವ ಕುರಿತು

ಶ್ರೀ ಕೆ.ಸಿ. ಕೊಂಡಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–

೨೫೩ (೨೫೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಗ್ರಾಮೀಣ ಪ್ರದೇಶಕ್ಕೆ ಸಂಬಂಧಪಟ್ಟಂತೆ ಮೂಲ ಮಾಲೀಕರ ಸಹಿ ಇಲ್ಲದೆ, ಕೃಷಿ ಭೂಮಿಗಳನ್ನು ಸರ್ಕಾರಿ ಅಧಿಕಾರಿಗಳು ಬೇರೆಯವರಿಗೆ ಖಾತೆ ಮಾಡಿಕೊಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಮೂಲ ಕೃಷಿ ಜಮೀನಿನ ಮಾಲೀಕರು ಮತ್ತೆ ತಮ್ಮ ಜಮೀನನ್ನು ವಶಕ್ಕೆ ಪಡೆಯಲು ಯಾವ ಕ್ರಮ ಕೈಗೊಳ್ಳಲಾಗಿದೆ;

(ಇ) ಈ ಕಾರ್ಯದಲ್ಲಿ ಭಾಗಿಯಾಗಿರುವ ಅಧಿಕಾರಿಗಳ ಮೇಲೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ;

(ಈ) ಸರ್ವೆ ನಂ. ೯೯/೫, ೨೪/ಸಿ, ಕುಡುಗುಬಾಳು ಗ್ರಾಮ, ನಾಗಮಂಗಲ ತಾಲ್ಲೂಕು, ಮಂಡ್ಯ ಜಿಲ್ಲೆಯ ೧೦ ವರ್ಷಗಳ ದಾಖಲೆ ಪರಿಶೀಲಿಸಿ ಮಾಹಿತಿ ನೀಡುವುದು?

## ರಾಜ್ಯ ಹೆದ್ದಾರಿ ಅಭಿವೃದ್ಧಿಗೆ ಕೆ.ಶಿಪ್–೩ ಯೋಜನೆಯಡಿ ಜಮೀನು ಖರೀದಿಸುವ ಕುರಿತು

ಶ್ರೀ ಕೆ.ಸಿ. ಕೊಂಡಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–

೨೫೪ (೨೫೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಜಿಲ್ಲೆ, ನಾಗಮಂಗಲ ತಾಲ್ಲೂಕು ವ್ಯಾಪ್ತಿಯ ಕೆಲವು ಗ್ರಾಮಗಳಲ್ಲಿ ಕರ್ನಾಟಕ ರಾಜ್ಯ ಹೆದ್ದಾರಿ ಅಭಿವೃದ್ಧಿ ಯೋಜನೆ ಕೆ.ಶಿಪ್–೩ ಯೋಜನೆಗೆ ಅವಶ್ಯವಿರುವ ಜಮೀನನ್ನು ಭೂ ಮಾಲೀಕರಿಂದ ಖರೀದಿಸುವ ಪ್ರಕ್ರಿಯೆ ಯಾವ ಹಂತದಲ್ಲಿದೆ;

(ಆ) ನಾಗಮಂಗಲ ತಾಲ್ಲೂಕು, ದೇವಲಾಪುರ ಹೋಬಳಿಯಲ್ಲಿ ಈ ಯೋಜನೆಗೆ ಎಷ್ಟು ಜಮೀನು ಖರೀದಿಯಾಗಿ, ಪರಿಹಾರ ವಿತರಿಸಲಾಗಿದೆ; ಪರಿಹಾರ ಹಣಕ್ಕಾಗಿ ಮಧ್ಯವರ್ತಿಗಳು ಒತ್ತಡ ತರುತ್ತಿರಬಹುದೇ;

(ಇ) ಮಂಡ್ಯ ಜಿಲ್ಲೆಯ ನಾಗಮಂಗಲ ತಾಲ್ಲೂಕು, ದೇವಲಾಪುರ ಹೋಬಳಿ, ಕುಡುಗುಬಾಳು ಗ್ರಾಮದಲ್ಲಿ ಸರ್ವೆ ನಂ. ೨೪/ಸಿ ನಲ್ಲಿ ೨೫ ಗುಂಟೆ ಜಮೀನಿನ ಮಾಲೀಕರಾದ ಬಡ ರೈತ ಮಹಿಳೆಯ ೧೫ ಗುಂಟೆ ಜಮೀನು ಭೂಸ್ವಾಧೀನಕ್ಕೆ ಪರಿಹಾರ ಹಣವನ್ನು ವಿತರಿಸಲಾಗಿದೆಯೇ;

(ಈ) ಈ ಮಧ್ಯೆ ಕೆಲವು ಮಧ್ಯವರ್ತಿಗಳು ಪರಿಹಾರ ಹಣಕ್ಕಾಗಿ ಈ ಮಹಿಳೆಗೆ ಮೋಸ ಮಾಡುವ ಸಲುವಾಗಿ ಸರ್ವೆ ನಂ. ೨೪/ಬಿ.ಪಿ೧ ಎಂದು ಖಾತೆ ತೆರೆಯಿಸಿ, ಪರಿಹಾರ ಹಣಕ್ಕಾಗಿ ಪ್ರಯತ್ನಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದರಲ್ಲಿ ಅಧಿಕಾರಿಗಳು ಶಾಮೀಲಾಗಿರುವರೇ; ಸರ್ವೆ ನಂ. ೨೪/ಬಿ ಯಾರ ಹೆಸರಿನಲ್ಲಿದೆ; ಎಷ್ಟು ವರ್ಷಗಳಿಂದಿದೆ; ಸರ್ವೆ ನಂ. ೨೪/ಬಿ.ಪಿ೧ ಎಂದು ಯಾರಿಂದ ಯಾರಿಗೆ ಖಾತೆ ವರ್ಗಾವಣೆಗೊಂಡಿದೆ ? (ವಿವರ ನೀಡುವುದು)

## ಸರ್ಕಾರಿ ಜಾಗ ಒತ್ತುವರಿ ಕುರಿತು

ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು):–

೨೫೫ (೨೪೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ದಕ್ಷಿಣ ತಾಲ್ಲೂಕಿನ ಬೇಗೂರು ಹೋಬಳಿಯ ಹುಳಿಮಾವು ಗ್ರಾಮದ ಸರ್ವೇ ನಂ. ೬೩ ರಲ್ಲಿ ೫ ಎಕರೆ ಜಾಗವನ್ನು ಒತ್ತುವರಿ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಒತ್ತುವರಿ ಮಾಡಿರುವವರ ಹೆಸರು ಮತ್ತು ವಿಳಾಸವೇನು;

(ಆ) ಬೆಂಗಳೂರು ನಗರ ಜಿಲ್ಲೆಯ ಬೆಂಗಳೂರು ದಕ್ಷಿಣ ತಾಲ್ಲೂಕಿನ ಬೇಗೂರು ಹೋಬಳಿಯ ಹುಳಿಮಾವು ಗ್ರಾಮದ ಸರ್ವೇ ನಂ. ೬೩ ರಲ್ಲಿ ೫ ಎಕರೆ ಜಾಗವನ್ನು ಒತ್ತುವರಿ ಮಾಡಿರುವುದನ್ನು ತೆರವುಗೊಳಿಸಿದ ಬಗ್ಗೆ ಆದೇಶವಾಗಿದ್ದರೂ ಸರ್ಕಾರದ ವಶಕ್ಕೆ ಪಡೆಯದಿರಲು ಕಾರಣವೇನು;

(ಇ) ಅಕ್ರಮ ಒತ್ತುವರಿಗೆ ಸಹಕರಿಸಿ ಅನಧೀಕೃತ ಕಟ್ಟಡ ನಿರ್ಮಾಣವಾಗುವವರೆಗೆ ಸಹಕರಿಸಿದ ಅಧಿಕಾರಿಗಳನ್ನು ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಅಮಾನತ್ತುಗೊಳಿಸಿ ಶಿಕ್ಷೆಗೆ ಒಳಪಡಿಸಲಾಗಿದೆಯೇ; (ಹೆಸರು, ಹುದ್ದೆಯೊಂದಿಗೆ ವಿವರ ನೀಡುವುದು)

(ಈ) ಅಕ್ರಮ ಒತ್ತುವರಿದಾರರನ್ನು ತೆರವುಗೊಳಿಸುವ ಬಗ್ಗೆ ಸರ್ಕಾರದ ನಿಲುವೇನು; ಅಕ್ರಮ ಒತ್ತುವರಿದಾರರನ್ನು ತೆರವುಗೊಳಿಸಿ ಅಕ್ರಮ ಕಟ್ಟಡವನ್ನು ನೆಲಸಮಗೊಳಿಸಲಾಗುವುದೇ; ಈ ಅಕ್ರಮದಿಂದ ಕಾನೂನು ಸುವ್ಯವಸ್ಥೆಗೆ ತೊಂದರೆ ಉಂಟು ಮಾಡಿದವರ್ಯಾರು; ಒತ್ತುವರಿ ಜಾಗವನ್ನು ತೆರವುಗೊಳಿಸಿ ಜಾಗವನ್ನು ಸರ್ಕಾರದ ವಶಕ್ಕೆ ಪಡೆಯದ ಜಿಲ್ಲಾಧಿಕಾರಿಯವರ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ; ಕ್ರಮ ಕೈಗೊಳ್ಳದಿರಲು ಕಾರಣವೇನು ?

# ನೋಂದಣಿ ಮತ್ತು ಮುದ್ರಾಂಕ ಇಲಾಖೆಯಲ್ಲಿ ವಿಲೀನಗೊಂಡ ನೌಕರರ ಕುರಿತು

ಶ್ರೀ ಎನ್. ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು):–

೨೫೬ (೨೫೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನೋಂದಣಿ ಮತ್ತು ಮುದ್ರಾಂಕ ಇಲಾಖೆಯಲ್ಲಿ ವಿಲೀನಗೊಂಡ ಸರ್ಕಾರಿ ನೌಕರರ ಸಂಖ್ಯೆ ಎಷ್ಟು; ಅವರು ಯಾವ ಇಲಾಖೆಯಿಂದ ನೋಂದಣಿ ಮತ್ತು ಮುದ್ರಾಂಕ ಇಲಾಖೆಯಲ್ಲಿ ವಿಲೀನಗೊಂಡಿರುತ್ತಾರೆ;

(ಆ) ಕಳೆದ ೫ ವರ್ಷಗಳಲ್ಲಿ ನೋಂದಣಿ ಮತ್ತು ಮುದ್ರಾಂಕ ಇಲಾಖೆಯಲ್ಲಿ ವಿಲೀನಗೊಂಡ ಸರ್ಕಾರಿ ನೌಕರರ ಹೆಸರು ಮತ್ತು ವಿಳಾಸದೊಂದಿಗೆ ಮಾಹಿತಿ ನೀಡುವುದು; ಅವರು ನೋಂದಣಿ ಮತ್ತು ಮುದ್ರಾಂಕ ಇಲಾಖೆಯಲ್ಲಿ ವಿಲೀನಗೊಳ್ಳುವ ಸಮಯದಲ್ಲಿ ಅವರ ಮತ್ತು ಕುಟುಂಬದವರ ಹೆಸರಿನಲ್ಲಿರುವ ಸ್ಥಿರಾಸ್ತಿ ಮತ್ತು ಚರಾಸ್ತಿಯ ಒಟ್ಟು ಮೌಲ್ಯ ಎಷ್ಟು;

(ಇ) ಪ್ರಸ್ತುತ ವಿಲೀನಗೊಂಡವರ ಹೆಸರಿನಲ್ಲಿ ಮತ್ತು ಅವರ ಅವಲಂಬಿತರ ಹೆಸರಿನಲ್ಲಿ ಇರುವ ಸ್ಥಿರಾಸ್ತಿ ಮತ್ತು ಚರಾಸ್ತಿಯ ಒಟ್ಟು ಮೌಲ್ಯ ಎಷ್ಟು; ನೋಂದಣಿ ಮತ್ತು ಮುದ್ರಾಂಕ ಇಲಾಖೆಯಲ್ಲಿ ವಿಲೀನಗೊಳ್ಳುವ ಮುನ್ನ ಮತ್ತು ವಿಲೀನದ ನಂತರ ಅವರ ಸ್ಥಿರಾಸ್ತಿ ಮತ್ತು ಚರಾಸ್ತಿಯಲ್ಲಿ ಎಷ್ಟು ಪ್ರಮಾಣದಲ್ಲಿ ಹೆಚ್ಚಳವಾಗಿದೆ;

(ಈ) ಬೆಂಗಳೂರು ನಗರ ವ್ಯಾಪ್ತಿಯಲ್ಲಿ ಕಳೆದ ೫ ವರ್ಷಗಳಲ್ಲಿ ನೋಂದಣಿ ಮತ್ತು ಮುದ್ರಾಂಕ ಇಲಾಖೆಯಲ್ಲಿ ಭ್ರಷ್ಟಾಚಾರದ ಆರೋಪದಲ್ಲಿ ಅಮಾನತ್ತುಗೊಂಡವರ ಸಂಖ್ಯೆ ಎಷ್ಟು ?

## ಅರ್ಚಕರಿಗೆ ವೇತನ ಹೆಚ್ಚಳ ಕುರಿತು

ಶ್ರೀ ಎನ್. ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು):-

೨೫೭ (೨೫೧) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮುಜರಾಯಿ ಇಲಾಖೆಗೆ ಒಳಪಡುವ ದೇವಸ್ಥಾನಗಳಲ್ಲಿ ಸೇವೆ ಸಲ್ಲಿಸುತ್ತಿರುವ ಅರ್ಚಕರಿಗೆ ಮತ್ತು ಇತರ ಸಹಾಯಕರಿಗೆ ಪ್ರಸ್ತುತ ನೀಡುತ್ತಿರುವ ವೇತನವೆಷ್ಟು; ದೇಶದ ಕನಿಷ್ಠ ವೇತನದ ನಿಯಮದನ್ವಯ ನೀಡಬೇಕಾದ ಕನಿಷ್ಠ ವೇತನ ಎಷ್ಟು;

(ಆ) ಮುಜರಾಯಿ ಇಲಾಖೆಗೆ ಒಳಪಡುವ ದೇವಸ್ಥಾನಗಳಲ್ಲಿ ಸೇವೆ ಸಲ್ಲಿಸುತ್ತಿರುವ ಅರ್ಚಕರಿಗೆ ಮತ್ತು ಇತರ ಸಹಾಯಕರಿಗೆ ನೀಡುವ ವೇತನವನ್ನು ದುಪ್ಪಟ್ಟು ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ;

(ಇ) ಮುಜರಾಯಿ ಇಲಾಖೆಗೆ ಒಳಪಡುವ ದೇವಸ್ಥಾನಗಳಲ್ಲಿ ಸೇವೆ ಸಲ್ಲಿಸುತ್ತಿರುವ ಅರ್ಚಕರ ಮತ್ತು ಇತರ ಸಹಾಯಕರ ಮಕ್ಕಳು ಹಾಗೂ ಕುಟುಂಬದವರಿಗೆ ಸರ್ಕಾರ ಯಾವ ಯಾವ ಸೌಲಭ್ಯಗಳನ್ನು ನೀಡುತ್ತಿದೆ;

(ಈ) ಮುಜರಾಯಿ ಇಲಾಖೆಗೆ ಒಳಪಡುವ ದೇವಸ್ಥಾನಗಳಲ್ಲಿ ಸೇವೆ ಸಲ್ಲಿಸುತ್ತಿರುವ ಅರ್ಚಕರ ಮತ್ತು ಇತರ ಸಹಾಯಕರ ಮಕ್ಕಳಿಗೆ ಸ್ಕಾಲರ್‌ಶಿಫ್ ನೀಡಲು ಸರ್ಕಾರ ಕೈಗೊಂಡ ಕ್ರಮಗಳೇನು; ಉನ್ನತ ಶಿಕ್ಷಣ ಪಡೆಯುತ್ತಿರುವ ಮಕ್ಕಳಿಗೆ ಎಷ್ಟು ಮೊತ್ತದ ಸ್ಕಾಲರ್‌ಶಿಫ್ ನೀಡಲಾಗುವುದು;

(ಉ) ಮುಜರಾಯಿ ಇಲಾಖೆಗೆ ಒಳಪಡುವ ದೇವಸ್ಥಾನಗಳಲ್ಲಿ ಸೇವೆ ಸಲ್ಲಿಸುತ್ತಿರುವ ಅರ್ಚಕರು ಮತ್ತು ಇತರ ಸಹಾಯಕರು ಸೇರಿದಂತೆ ಅವರ ಕುಟುಂಬ ವರ್ಗದವರಿಗೆ ಆಸ್ಪತ್ರೆಗಳಲ್ಲಿ ಚಿಕಿತ್ಸೆ ನೀಡಲು ಸರ್ಕಾರ ಜಾರಿಗೊಳಿಸಿರುವ ಯೋಜನೆ ಯಾವುದು ?

## ಕೃಷಿ ಹೊಂಡಗಳ ಅಕ್ರಮ ಕುರಿತು

ಶ್ರೀ ಎನ್. ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು):-

೨೫೮ (೨೫೨) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೃಷಿ ಹೊಂಡಗಳ ಅಕ್ರಮಗಳ ಕುರಿತು ತನಿಖೆ ನಡೆಸಿ, ವರದಿ ಸಲ್ಲಿಸಲು ಮಾನ್ಯ ಮುಖ್ಯಮಂತ್ರಿಗಳು ಆದೇಶಿಸಿದ ಬಳಿಕ ಅಕ್ರಮಗಳ ಕುರಿತ ವರದಿಯನ್ನು ಯಾವಾಗ ಸಲ್ಲಿಸಲಾಗಿದೆ;

(ಆ) ಕೃಷಿ ಹೊಂಡಗಳ ಅಕ್ರಮಗಳ ಕುರಿತು ವರದಿ ತಯಾರಿಸಲು ಯಾವ ಅಧಿಕಾರಿಯನ್ನು ನೇಮಿಸಲಾಗಿತ್ತು; ಎಷ್ಟು ಕೃಷಿ ಹೊಂಡಗಳ ನಿರ್ಮಾಣದಲ್ಲಿ ಅಕ್ರಮ ಪತ್ತೆಯಾಗಿದೆ; ಈ ಅಕ್ರಮಗಳಿಗೆ ಯಾವ ಅಧಿಕಾರಿಯನ್ನು ಹೊಣೆಗಾರರನ್ನಾಗಿ

ಮಾಡಲಾಗಿದೆ; ಕೃಷಿ ಹೊಂಡದಲ್ಲಿ ಅಕ್ರಮ ಎಸಗಿದ ಎಷ್ಟು ಅಧಿಕಾರಿಗಳನ್ನು ಅಮಾನತ್ತು ಮಾಡಲಾಗಿದೆ;

(ಇ) ೨೦೧೮-೧೯ ಮತ್ತು ೨೦೧೯-೨೦೨೦ ನೇ ಸಾಲಿನಲ್ಲಿ ರಾಜ್ಯದಲ್ಲಿ ಎಷ್ಟು ಕೃಷಿ ಹೊಂಡಗಳನ್ನು ನಿರ್ಮಿಸಲಾಗಿದೆ; ಕೃಷಿ ಹೊಂಡಗಳನ್ನು ನಿರ್ಮಿಸಿದ ಬಗ್ಗೆ ಅಧಿಕೃತ ವರದಿ ನೀಡುವ ಅಧಿಕಾರಿ ಯಾರು;

(ಈ) ೨೦೧೮-೧೯ ಮತ್ತು ೨೦೧೯-೨೦೨೦ ನೇ ಸಾಲಿನಲ್ಲಿ ರಾಜ್ಯದಲ್ಲಿ ಕೃಷಿ ಹೊಂಡಗಳನ್ನು ನಿರ್ಮಿಸಲು ಮಾಡಿರುವ ವೆಚ್ಚ ಎಷ್ಟು?

## ಅಕ್ರಮ ಕಟ್ಟಡ ತೆರವುಗೊಳಿಸುವ ಕುರಿತು

ಶ್ರೀ ಎನ್. ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು):-

೨೫೯ (೨೫೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ದಕ್ಷಿಣ ತಾಲ್ಲೂಕು, ಉತ್ತರಹಳ್ಳಿ ಹೋಬಳಿ, ದೊಡ್ಡಕಲ್ಲಸಂದ್ರ ಗ್ರಾಮದ ಸರ್ವೆ ನಂ ೫೫/೧(ಪಿ), ೫೫/೨(ಪಿ), ೫೬, ೫೭, ೫೮, ೫೯(ಪಿ) ಮತ್ತು ೬೦(ಪಿ) ರಲ್ಲಿ ಅತಿಕ್ರಮವಾಗಿ ನಿರ್ಮಿಸಿರುವ ಅಕ್ರಮ ಕಟ್ಟಡವನ್ನು ತೆರವುಗೊಳಿಸಲು ಮಾಲಿನ್ಯ ನಿಯಂತ್ರಣ ಮಂಡಳಿಯು ದಿನಾಂಕ ೨೮-೧೨-೨೦೧೮ ರಂದು ಆದೇಶ ನೀಡಿದ್ದು, ಈ ಕುರಿತು ಯಾವ ಕ್ರಮ ಕೈಗೊಳ್ಳಲಾಗಿದೆ;

(ಆ) ದೊಡ್ಡಕಲ್ಲಸಂದ್ರ ಗ್ರಾಮದ ಸರ್ವೆ ನಂ ೫೫/೧(ಪಿ), ೫೫/೨(ಪಿ), ೫೬, ೫೭, ೫೮ ೫೯(ಪಿ) ಮತ್ತು ೬೦(ಪಿ) ರಲ್ಲಿ ಅತಿಕ್ರಮವಾಗಿ ನಿರ್ಮಿಸಿರುವ ಅಕ್ರಮ ಕಟ್ಟಡ ನಿರ್ಮಾಣದ ಕೆಲಸ ಕಾರ್ಯಗಳನ್ನು ನಿಲ್ಲಿಸಿ, ಸಂಪೂರ್ಣ ಪ್ರಾಜೆಕ್ಟ್ ಸೀಜ್ ಮಾಡಲು ಲಿಖಿತವಾಗಿ ಮಾಲಿನ್ಯ ನಿಯಂತ್ರಣ ಮಂಡಳಿ ಆದೇಶ ನೀಡಿದ ಬಳಿಕವೂ ಸಂಪೂರ್ಣ ಪ್ರಾಜೆಕ್ಟ್ ಸೀಜ್ ಮಾಡದಿರಲು ಕಾರಣವೇನು;

(ಇ) ದೊಡ್ಡಕಲ್ಲಸಂದ್ರ ಗ್ರಾಮದ ಸರ್ವೆ ನಂ ೫೫/೧(ಪಿ), ೫೫/೨(ಪಿ), ೫೬, ೫೭, ೫೮ ೫೯(ಪಿ) ಮತ್ತು ೬೦(ಪಿ) ರಲ್ಲಿ ಅತಿಕ್ರಮವಾಗಿ ನಿರ್ಮಿಸಿರುವ ಅಕ್ರಮ ಕಟ್ಟಡವನ್ನು ನಿಲಸಮಗೊಳಿಸುವ ಮೂಲಕ ತೆರವುಗೊಳಿಸಬೇಕೆಂದು ಮಾಲಿನ್ಯ ನಿಯಂತ್ರಣ ಮಂಡಳಿ ಆದೇಶ ನೀಡಿದ ಬಳಿಕವೂ ನೆಲಸಮಗೊಳಿಸದಿರಲು ಕಾರಣವೇನು; ನೆಲಸಮಗೊಳಿಸಲಾಗುವುದು ಯಾವಾಗ ?

## ಮೂಗೂರು ತ್ರಿಪುರ ಸುಂದರಿ ಅಮ್ಮನವರ ದೇವಾಲಯದಲ್ಲಿ ಭಕ್ತರಿಗೆ ಸೌಲಭ್ಯವನ್ನು ಕಲ್ಪಿಸುವುದು

ಶ್ರೀ ಎಸ್. ನಾಗರಾಜು (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–

೨೬೦ (೨೦೪) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ಜಿಲ್ಲೆ, ತಿ. ನರಸೀಪುರ ತಾಲ್ಲೂಕು, ಮೂಗೂರು ತ್ರಿಪುರ ಸುಂದರಿ ಅಮ್ಮನವರ ದೇವಾಲಯದ ಬಳಿ ಸೂಕ್ತ ಜಾಗದಲ್ಲಿ ಶಾಶ್ವತ ಮುಡಿಕಟ್ಟೆ ನಿರ್ಮಾಣ ಮಾಡಲು ಹಾಗೂ ಭಕ್ತಾದಿಗಳಿಗೆ ಸ್ನಾನದ ಮನೆ ಹಾಗೂ ನೀರಿನ ಸೌಲಭ್ಯ ಕಲ್ಪಿಸಲು ಕ್ರಮ ಜರುಗಿಸಲಾಗುವುದೇ;

(ಆ) ದೇವಾಲಯಕ್ಕೆ ಪ್ರತಿದಿನ ಬರುವ ಭಕ್ತಾದಿಗಳಿಗೆ ಸೂಕ್ತ ಜಾಗದಲ್ಲಿ, ಕೈಕಾಲು ತೊಳೆಯಲು ನೀರಿನ ಸೌಲಭ್ಯ, ಕುಡಿಯುವ ನೀರಿನ ಸೌಲಭ್ಯ ಹಾಗೂ ಪಾವತಿಸಿ ಉಪಯೋಗಿಸುವ ಶೌಚಾಲಯಗಳನ್ನು ಕಲ್ಪಿಸಿಕೊಡಲು ಕ್ರಮ ಜರುಗಿಸಲಾಗುವುದೇ;

(ಇ) ಈಗ ಕೆರೆ ಬಳಿ ನಿರ್ಮಿಸಿರುವ ಶೌಚಾಲಯ ಉಪಯೋಗಕ್ಕೆ ಬರುತ್ತಿಲ್ಲವಾದ ಕಾರಣ ಭಕ್ತಾದಿಗಳಿಗೆ ಅನುಕೂಲವಾಗುವಂತೆ ಸೂಕ್ತ ಸ್ಥಳದಲ್ಲಿ ಇದನ್ನು ನಿರ್ಮಿಸಿ, ಪಾವತಿ ಆಧಾರದ ಮೇಲೆ ಉಪಯೋಗಿಸುವ (ಪೇ ಅಂಡ್ ಯೂಸ್) ಶೌಚಾಲಯ ನಿರ್ಮಿಸಲು ಕ್ರಮ ಜರುಗಿಸಲಾಗುವುದೇ ?

## ಮಂಡ್ಯ ಜಿಲ್ಲೆ, ಸಂತೇಬಾಚಹಳ್ಳಿ ಗ್ರಾಮದ ತಿಮ್ಮಪ್ಪನ ಗುಡ್ಡ ಪ್ರದೇಶದಲ್ಲಿ ವಾಸಿಸುತ್ತಿರುವ ನಿವೇಶನ ರಹಿತರಿಗೆ ಹಕ್ಕು ಪತ್ರ ನೀಡುವ ಬಗ್ಗೆ

ಶ್ರೀ ಎಸ್. ನಾಗರಾಜು (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–

೨೬೧ (೨೦೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಜಿಲ್ಲೆ, ಕೃಷ್ಣರಾಜ ಪೇಟೆ ತಾಲ್ಲೂಕು, ತಿಮ್ಮಪ್ಪನ ಗುಡ್ಡ ಅರಣ್ಯ ಪ್ರದೇಶದ ಸರ್ವೆ ನಂಬರ್ ೭೩೮ ೩೮.೧೫ ಗುಂಟೆ ಪ್ರದೇಶದಲ್ಲಿ ಕಳೆದ ೨೦ ವರ್ಷಗಳಿಂದ ಗುಡಿಸಲುಗಳನ್ನು ಹಾಕಿಕೊಂಡು ವಾಸಿಸುತ್ತಿರುವ ಸುಮಾರು ೩೬ ಜನ ನಿವೇಶನರಹಿತರಿಗೆ, ನಿವೇಶನ ಮಂಜೂರು ಮಾಡಿ ಹಕ್ಕುಪತ್ರ ನೀಡಲು ಕ್ರಮ ತೆಗೆದುಕೊಳ್ಳಲಾಗುವುದೇ;

(ಆ) ಕರ್ನಾಟಕ ಸರ್ಕಾರದ ಕಂದಾಯ ಇಲಾಖೆ ಅಧೀನ ಕಾರ್ಯದರ್ಶಿ (ಭೂ ಮಂಜೂರಾತಿ) ಪತ್ರ ಸಂಖ್ಯೆ: ಆರ್‌ಡಿ ೬೪/ಎಲ್‌ಜಿಪಿ/೨೦೧೫, ದಿನಾಂಕ : ೨೬-೦೭-೨೦೧೬ರ ಸೂಚನೆಯ ಮೇರೆಗೆ ಸಂತೇಬಾಚಹಳ್ಳಿ ಗ್ರಾಮ ಪಂಚಾಯತಿಯ ಗ್ರಾಮ ಅರಣ್ಯ ಹಕ್ಕು ಸಮಿತಿಯುವರು ದಿನಾಂಕ : ೨೩-೧೧-೨೦೧೮ ರಂದು ಸಭೆ ಸೇರಿ, ಅಲ್ಲಿ ವಾಸಿಸುತ್ತಿರುವ ೩೬ ಜನ ನಿವೇಶನ ರಹಿತರಿಗೆ ನಿವೇಶನ ಮಂಜೂರು ಮಾಡಿ ಹಕ್ಕು ಪತ್ರ ನೀಡುವಂತೆ ನಿರ್ಣಯ ಕೈಗೊಂಡು, ಅದನ್ನು ಮಂಡ್ಯ ಜಿಲ್ಲಾಧಿಕಾರಿಯವರಿಗೆ ಕಳುಹಿಸಿದ್ದು ಈ ಬಗ್ಗೆ ತಕ್ಷಣ ಸೂಕ್ತ ಕ್ರಮ ಜರುಗಿಸಲಾಗುವುದೇ ?

ಕೆ. ಆರ್. ಮಹಾಲಕ್ಷ್ಮಿ
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. 0214/400 ಪ್ರತಿಗಳು/27–02–2020